ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು , ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು :
ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 162
10–12–2025 ಬುಧವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 162

## ಸಿದ್ದರಾಮಯ್ಯ ಸರ್ಕಾರದ ವಿರುದ್ಧ ಸಿಡಿದೆದ್ದ ರೈತರು

# ಸುವರ್ಣಸೌಧ ಮುತ್ತಿಗೆ, ಬಿಜೆಪಿ ನಾಯಕರು ಪೋಲಿಸರ ವಶಕ್ಕೆ

**ಬೆಳಗಾವಿ :** ರೈತರ ಬಗ್ಗೆ ರಾಜ್ಯ ಕಾಂಗ್ರೆಸ್ ಸರ್ಕಾರ ನಿರ್ಲಕ್ಷ್ಯ ಧೋರಣೆ ಅನುಸರಿಸುತ್ತಿದೆ ಎಂದು ಆರೋಪಿಸಿ ಬೆಳಗಾವಿಯಲ್ಲಿ ರಾಜ್ಯ ಸರ್ಕಾರದ ವಿರುದ್ಧ ಬಿಜೆಪಿ, ರೈತರ ಪ್ರತಿಭಟನೆ ತೀವ್ರಗೊಂಡಿದೆ.



ಸುವರ್ಣಸೌಧಕ್ಕೆ ಮುತ್ತಿಗೆ ಹಾಕಲು ಬೆಳಗಾವಿಯ ಮಾಲಿನಿ ಸಿಟಿಯಿಂದ ಹೊರಟ ಬಿಜೆಪಿ ನಾಯಕರು, ರೈತರು ಕಾಂಗ್ರೆಸ್ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿದರು. ಇದೇ ವೇಳೆ, ಮುಂಜಾಗ್ರತಾ ಕ್ರಮವಾಗಿ ಬಿಜೆಪಿ ನಾಯಕರನ್ನು ಪೊಲೀಸರು ವಶಕ್ಕೆ ಪಡೆದರು.

ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ, ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್ ಅಶೋಕ ಮತ್ತು ವಿಧಾನ ಪರಿಷತ್ತಿನ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ಹಲವಾರು ಶಾಸಕರು, ಎಂಎಲ್‌ಸಿಗಳು ಮತ್ತು ಪಕ್ಷದ ಇತರ ಹಿರಿಯ ನಾಯಕರ ನೇತೃತ್ವದಲ್ಲಿ ಮಾಲಿನಿ ಸಿಟಿ ಮೈದಾನದಲ್ಲಿ ಪ್ರತಿಭಟನಾಕಾರರ ಬೃಹತ್ ಗುಂಪು ಜಮಾಯಿಸಿತು.

ರಾಜ್ಯಕ್ಕೆ ಸಂಬಂಧಿಸಿದ ವಿವಿಧ ಸಮಸ್ಯೆಗಳು ಮತ್ತು ಕಾಂಗ್ರೆಸ್ ಸರ್ಕಾರದ 'ವೈಫಲ್ಯಗಳನ್ನು' ಎತ್ತಿ ತೋರಿಸಲು ಈ ಪ್ರತಿಭಟನೆಯನ್ನು ಆಯೋಜಿಸಲಾಗಿದೆ.

ಸಿದ್ದರಾಮಯ್ಯ ನೇತೃತ್ವದ ಸರ್ಕಾರವು ರಾಜ್ಯದ ರೈತರ ಸಂಕಷ್ಟವನ್ನು ನಿರ್ಲಕ್ಷಿಸಿದೆ ಎಂದು ಪಕ್ಷದ ನಾಯಕರು ತಿಳಿಸಿದ್ದಾರೆ.

ರೈತರ ಸಮಸ್ಯೆಗಳನ್ನು ಮುಂದಿಟ್ಟುಕೊಂಡು ಬೆಳಗಾವಿಯಲ್ಲಿ ಬಿಜೆಪಿ ನಾಯಕರು ಪ್ರತಿಭಟನೆ ನಡೆಸುತ್ತಿದ್ದು, ರೈತರೊಂದಿಗೆ ಸುವರ್ಣ ಸೌಧ ಮುತ್ತಿಗೆಗೆ ಯತ್ನಿಸಿದ ಪ್ರತಿಭಟನಾಕಾರರನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ.

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ಸಿಟಿ ರವಿ ಸೇರಿ ಹಲವು ನಾಯಕರನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ. ಹಲಗಾ ಗ್ರಾಮದ ಬಳಿ ಬ್ಯಾರಿಕೇಡ್ ಹಾಕಿ ಪ್ರತಿಭಟನಾಕಾರರನ್ನು ಪೊಲೀಸರು ತಡೆದಿದ್ದು, ಈ ವೇಳೆ ತಳ್ಳಾಟ, ನೂಕಾಟ ನಡೆದಿದೆ.

ಬಿಜೆಪಿ ಶಾಸಕಿ ಶಶಿಕಲಾ ಜೊಲ್ಲೆ ಮಾತನಾಡಿ, 'ಉತ್ತರ ಕರ್ನಾಟಕದ ರೈತರು ಎದುರಿಸುತ್ತಿರುವ ಸಮಸ್ಯೆಗಳನ್ನು ಎತ್ತಿ ತೋರಿಸಲು ನಾವು ಪ್ರತಿಭಟನೆ ನಡೆಸುತ್ತಿದ್ದೇವೆ. ರೈತರ ಸಮಸ್ಯೆಗಳನ್ನು ಪರಿಹರಿಸಬೇಕು...' ಎಂದು ಹೇಳಿದರು.

ಮೆಕ್ಕೆಜೋಳ ಮತ್ತು ಕಬ್ಬು ಬೆಳೆಗಾರರ ಕಳವಳಗಳನ್ನು ಪರಿಹರಿಸಲು ರಾಜ್ಯ ಸರ್ಕಾರ ವಿಫಲವಾಗಿದೆ. ಮೆಕ್ಕೆಜೋಳ ರೈತರು ಖರೀದಿ ಕೇಂದ್ರಗಳನ್ನು ತೆರೆಯಬೇಕೆಂದು ಒತ್ತಾಯಿಸುತ್ತಿದ್ದಾರೆ. ಆದರೆ, ಸರ್ಕಾರ ಇನ್ನೂ ಕಾರ್ಯಪ್ರವೃತ್ತವಾಗಿಲ್ಲ ಎಂದು ಬಿಜೆಪಿ ಆರೋಪಿಸಿದೆ.

# ರಾಜ್ಯದ ಅರಣ್ಯಗಳಲ್ಲಿ ಭಾರೀ ಪ್ರಮಾಣದ ಚಿನ್ನ, ಲಿಥಿಯಂ ನಿಕ್ಷೇಪ ಪತ್ತೆ



**ಬೆಂಗಳೂರು:** ರಾಜ್ಯ ಗಣಿ ಮತ್ತು ಭೂವಿಜ್ಞಾನ ಇಲಾಖೆಯು ಚಿನ್ನ ಮತ್ತು ಇತರ ಅಪರೂಪದ ಖನಿಜಗಳ ಅಧ್ಯಯನ ಮತ್ತು ಪರಿಶೋಧನೆ ನಡೆಯುತ್ತಿರುವ 65 ಸ್ಥಳಗಳ ಪಟ್ಟಿಯನ್ನು ಸಿದ್ಧಪಡಿಸಿದೆ.

ಕೊಪ್ಪಳ ಮತ್ತು ರಾಯಚೂರಿನಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಚಿನ್ನ ಮತ್ತು ಲಿಥಿಯಂ ಕಂಡುಬಂದಿದೆ. ಆದರೆ ಈ ಪ್ರದೇಶಗಳು ಸಂರಕ್ಷಿತ ಅರಣ್ಯ ಪ್ರದೇಶಗಳಡಿಯಲ್ಲಿ ಬರುವುದರಿಂದ ನಿಕ್ಷೇಪ ಹೊರತೆಗೆಯುವಿಕೆ ಮತ್ತು ವಿವರವಾದ ಸಂಶೋಧನೆ ಸ್ಥಗಿತಗೊಂಡಿದೆ.

ಮೊದಲ ಬಾರಿಗೆ ಮತ್ತು ಅಪರೂಪದ ಸಂದರ್ಭದಲ್ಲಿ, ಕೊಪ್ಪಳ ಜಿಲ್ಲೆಯ ಅಮ್ರಾಪುರ ಬ್ಲಾಕ್‌ನಲ್ಲಿ ನಾವು ಪ್ರತಿ ಟನ್‌ಗೆ 12–14 ಗ್ರಾಂ ಚಿನ್ನವನ್ನು ಕಂಡುಕೊಂಡಿದ್ದೇವೆ. ಸಾಮಾನ್ಯವಾಗಿ ಅಧ್ಯಯನಗಳು ಮತ್ತು ಗಣಿಗಾರಿಕೆ–ಯ ಸಮಯದಲ್ಲಿ ಇದು ಪ್ರತಿ ಟನ್‌ಗೆ ಸುಮಾರು 2–3 ಗ್ರಾಂ ಚಿನ್ನ ಸಿಗುತ್ತದೆ. ಹಟ್ಟಿ ಚಿನ್ನದ ಗಣಿಯಲ್ಲಿ ಪ್ರತಿ ಟನ್ ಗೆ ಕೇವಲ ಸುಮಾರು 2–2.5 ಗ್ರಾಂ ಸಿಗುತ್ತಿದೆ. ಆದರೆ ಕೊಪ್ಪಳದಲ್ಲಿರುವ ಸ್ಥಳವು ವರ್ಜಿನ್ ಫಾರೆಸ್ಟ್ ಪ್ಯಾಚ್‌ನಲ್ಲಿದೆ ಮತ್ತು ನಾವು ಅರಣ್ಯ ತೆರವಿಗೆ ಅನುಮತಿ ಕೋರಿ ಅರ್ಜಿ ಸಲ್ಲಿಸಿದ್ದೇವೆ" ಎಂದು ಇಲಾಖೆಯ ಮೂಲಗಳು ಖಿಓಖಇ ಗೆ ತಿಳಿಸಿವೆ.

ಜಮ್ಮು ಮತ್ತು ಕಾಶ್ಮೀರ ಕಣಿವೆಯಲ್ಲಿ ಪತ್ತೆಯಾದ ನಂತರ ದೇಶದಲ್ಲಿ ಲಿಥಿಯಂ ಪತ್ತೆಯಾದ ಎರಡನೇ ರಾಜ್ಯ ಕರ್ನಾಟಕವಾಗಿದೆ. ರಾಯಚೂರಿನ ಅಮರೇಶ್ವರದಲ್ಲಿ ಈ ಲೋಹ ಕಂಡುಬಂದಿದೆ. "ಇಲ್ಲಿಯೂ ಸಹ ಅರಣ್ಯ ಅನುಮತಿ ಸಿಕ್ಕಿಲ್ಲ. ಅನುಮತಿಸಿದರೆ, ಕರ್ನಾಟಕವು ಲಿಥಿಯಂ ಅನ್ನು ಹೊರತೆಗೆಯುವ ಮೊದಲ ರಾಜ್ಯವಾಗಲಿದೆ" ಎಂದು ಅವರು ಹೇಳಿದ್ದಾರೆ.

2023 ರಲ್ಲಿ ಲಿಥಿಯಂ ನಿಕ್ಷೇಪ ಪತ್ತೆಯಾಗಿದೆ, ಆದರೆ ಯಾವುದೇ ಕೊರೆಯುವ ಕೆಲಸವನ್ನು ಮಾಡಲಾಗಿಲ್ಲ. 2025 ರ ನವೆಂಬರ್‌ನಲ್ಲಿ ನಡೆದ ಕೊನೆಯ ವಿವರವಾದ ಮಂಡಳಿಯ ಸಭೆಯಲ್ಲಿ ರಾಜ್ಯ ಮತ್ತು ಕೇಂದ್ರ ಸರ್ಕಾರಿ ಸಂಸ್ಥೆಗಳ ಅಧಿಕಾರಿಗಳು ಸಂಶೋಧನೆ ಮತ್ತು ಪಡೆಯಬೇಕಾದ ಅನುಮತಿಗಳ ಕುರಿತು ಚರ್ಚಿಸಿದ್ದಾರೆ ಎಂದರು.

ಅಪರೂಪದ ಮತ್ತು ಅಮೂಲ್ಯ ಲೋಹಗಳ ಅಧ್ಯಯನ ಮತ್ತು ಪರಿಶೋಧನೆಯನ್ನು ನಾಲ್ಕು ಹಂತಗಳಲ್ಲಿ ಮಾಡಲಾಗುತ್ತದೆ. ಮೊದಲ ಎರಡು ಹಂತಗಳು ವಿಚಕ್ಷಣ, ಪಿಟ್ಟಿಂಗ್ ಮತ್ತು ಬೇಲಿ ಹಾಕುವಿಕೆಯನ್ನು ಸಂಯೋಜಿಸುತ್ತವೆ. ಕೊನೆಯ ಎರಡು ಹಂತಗಳು 500 ಮೀಟರ್‌ಗಳವರೆಗೆ ಕೊರೆಯುವುದು ಮತ್ತು ಇದು ಪ್ರಾಥಮಿಕ ಗಣಿಗಾರಿಕೆಯನ್ನು ಒಳಗೊಂಡಿರುತ್ತದೆ. ಮೊದಲ ಎರಡು ಹಂತಗಳು ಕೊಪ್ಪಳ ಮತ್ತು ರಾಯಚೂರಿನಲ್ಲಿ ಪೂರ್ಣಗೊಂಡಿವೆ.

# ವಿವಿಧ ಬೇಡಿಕೆ ಈಡೇರಿಕೆಗಾಗಿ ಪತ್ರ ಬರಹಗಾರರ ಪ್ರತಿಭಟನೆ

**ದಾವಣಗೆರೆ.ಡಿ.9:** ರಾಜ್ಯ ಸರ್ಕಾರ ಈ ಹಿಂದೆ ಕಾವೇರಿ 1, ಕಾವೇರಿ 2 ತಂತ್ರಾಂಶಗಳನ್ನು ಚಾಲಗೆ ತಂದಿತ್ತು, ಆದರೆ ನವೆಂಬರ್ 5ರಿಂದ ಕಾವೇರಿ 3 ತಂತ್ರಾಂಶವನ್ನು ಜಾರಿಗೆ ತರಲು ಮುಂದಾಗಿದ್ದು, ಪೇಸ್‌ಲೆಸ್ ಹಾಗೂ ಪೇಪರ್‌ಲೆಸ್ ನೋಂದಣಿಗೆ ಮುಂದಾಗಿರುತ್ತದೆ. ಇದರಿಂದಾಗಿ ಸಾರ್ವಜನಿಕರಿಗೆ ತೊಂದರೆ ಆಗುತ್ತದೆ. ಈ ತಂತ್ರಾಂಶ ಕೈಬಿಟ್ಟು ಮೊದಲಿನಂತೆ ಆಸ್ತಿ ನೊಂದಣಿ ಕಾರ್ಯಕ್ಕೆ ಅನುವು ಮಾಡಿಕೊಡಬೇಕೆಂದು ಆಗ್ರಹಿಸಿ ಕರ್ನಾಟಕ ರಾಜ್ಯ ನೊಂದಣಿ ಮತ್ತು ಮುದ್ರಾಂಕ ಇಲಾಖೆಯಿಂದ ಪರವಾನಗಿ ಪಡೆದ ಪತ್ರ ಬರಹಗಾರರ ಒಕ್ಕೂಟದಿಂದ ನಗರದ ಉಪ ನೊಂದಣಾಧಿಕಾರಿ ಕಚೇರಿ ಮುಂದೆ ಮಂಗಳವಾರ ಧರಣಿ ಪ್ರತಿಭಟನೆ ನಡೆಸಿದರು.

ಈ ವೇಳೆ ಮಾತನಾಡಿದ ಒಕ್ಕೂಟದ ಅಧ್ಯಕ್ಷ ಡಿ.ಕೆ.ಸಂಗಮೇಶ ಎಲಿಗಾರ್, ಪತ್ರ ಬರಹಗಾರರ ಸಮಸ್ಯೆಗಳ ಕುರಿತಂತೆ ಬೆಳಗಾವಿಯಲ್ಲಿ ನಡೆಯುತ್ತಿರುವ ಚಳಿಗಾಲದ ಅಧಿವೇಶನಕ್ಕೆ ತೆರಳಿ ಕಂದಾಯ ಇಲಾಖೆಯ ಸಚಿವರಿಗೆ ಮನವಿ ಸಲ್ಲಿಸಲಾಗುವುದು. ಒಂದು ವೇಳೆ ಸ್ಪಂದನೆ ಸಿಗದಿದ್ದರೆ ನ್ಯಾಯಾಲಯದ ಮೊರೆ ಹೋಗಲಾಗುವುದು. ನಮ್ಮಗಳ ಕಾರ್ಯ ಸ್ಥಗಿ–ತಗೊಳಿಸಿ ಪ್ರತಿಭಟನೆ ನಡೆಸಲಾಗುವುದು ಎಂದು ಮಾಹಿತಿ ನೀಡಿದರು.

ಪೇಸ್ ಲೆಸ್ ಮತ್ತು ಪೇಪರ್ ಲೆಸ್ ನೋಂದಣಿ ಕಾರ್ಯ ಪ್ರಾರಂಭವಾದಲ್ಲಿ ಪತ್ರಬರಹಗಾರಿಗೆ ಯಾವುದೇ ರೀತಿಯ ಬರವಣಿಗೆ ಕಾರ್ಯ ಇಲ್ಲದಂತಾಗುತ್ತದೆ. ಅಂದರೆ ಪತ್ರಬರಹಗಾರರನ್ನು ಹುದ್ದೆಯನ್ನು ತಟಸ್ಥ ಮಾಡಿದಂತಾಗುತ್ತದೆ. ವೃತ್ತಿಯನ್ನೇ ಅವಲಂಭಿಸಿ ಕೊಂಡಿರುವ ರಾಜ್ಯಾದ್ಯಾಂತ ಇರುವ 12000ಕ್ಕೂ ಹೆಚ್ಚಿನ ಪತ್ರ ಬರಹಗಾರರು, ಅವರ ಸಹಾಯಕರುಗಳು ಮತ್ತು ಅವರನ್ನು ಅವಲಂಭಿಸಿ ಕೊಂಡಿರುವ ಕುಟುಂಬವರ್ಗದವರ ಗತಿ ಹೇಳತೀರದಾಗಿದೆ. ಈ ಬಗ್ಗೆ ಸರ್ಕಾರಿ ಚಿಂತಿಸದೇ ಕೆಲವೇ ಅಧಿಕಾರಿಗಳ ಸಲಹೆ ಪಡೆದು ವಿದೇಶದಲ್ಲಿರುವಂತೆ ಪೇಸ್‌ಲೆಸ್ ಹಾಗೂ ಪೇಪರ್ ಲೆಸ್ ನೋಂದಣಿ ಕಾರ್ಯ–ಕ್ಕೆ ಮುಂದಾಗಿದೆ ಎಂದು ಹೇಳಿದರು.

ಹೀಗೆ ಸರ್ಕಾರವು ಅಪ್‌ಲೋಡ್‌ನಲ್ಲಿ ನೇರವಾಗಿ ಆಸ್ತಿ ವಿವರಣೆ ದಾಖಲಾಗುವಂತೆ ಮತ್ತು ಯಾವುದೇ ತಿದ್ದುಪಡಿ ಮಾಡಲು ಬಾರದಂತೆ ಮಾಡಿದ್ದು, ಆಸ್ತಿ ವಿವರಣೆಯಲ್ಲಿ ಕೇವಲ ಇ–ಸ್ವತ್ತಿನ ಸಂಖ್ಯೆ ಮತ್ತು ಅಳತೆ ಬರುವಂತೆ ಮಾಡಿದೆ. ಇದರಿಂದ ಕೇವಲ ಇ–ಸ್ವತ್ತಿನ ಆಧಾರದ ಮೇಲೆ ಆಸ್ತಿಯನ್ನು ಗುರುತಿಸುವುದು ಕಷ್ಟವಾಗುತ್ತದೆ. ಮುಂದೆ ನಕಲಿ ನೋಂದಣಿಗಳಿಗೆ ಮತ್ತು ಡಬಲ್ ರಿಜಿಸ್ಟ್ರೇಶನ್ ಗಳಿಗೆ ಅವಕಾಶ ವಾಗುತ್ತದೆ. ಮತ್ತು ಸಾರ್ವಜನಿಕರಿಗೆ ಆಸ್ತಿ ಅಭದ್ರತೆಯಾಗುತ್ತದೆ ಎಂದು ಆತಂಕ ವ್ಯಕ್ತಪಡಿಸಿದರು.

ಅಲ್ಲದೆ ಇಸಿಯಲ್ಲಿ ಕೇವಲ ಇ–ಸ್ವತ್ತಿನ ಸಂ–ಖ್ಯೆ ಮತ್ತು ಅಳತೆ ಮಾತ್ರ ಬರುವುದರಿಂದ, ಕ್ರಯಪತ್ರ, ದಾನಪತ್ರ, ಹಕ್ಕು ಖುಲಾಸೆ ಪತ್ರ, ಪಾಲು ವಿಭಾಗ ಪತ್ರ, ಅದಲು ಬದಲಾವಣೆ ಪತ್ರ, ತಿದ್ದುಪಡಿ ಪತ್ರ, ಕ್ರಯದ ಕರಾರು ಪತ್ರ, ಅಡಮಾನ ಪತ್ರ, ಇತರೆ ದಸ್ತಾವೇಜುಗಳ ಇ.ಸಿಯಲ್ಲಿ ಪೂರ್ಣ ವಿವರ ಬಾರದೇ ಇರುವುದರಿಂದ ಆಸ್ತಿಯ ಮೇಲೆ ಸಾಲ ಸೌಲಭ್ಯ ಪಡೆಯುವಾಗ ಕಾನೂನು ಅಭಿಪ್ರಾಯ ಕೊಡುವುದು ಕಷ್ಟವಾಗುತ್ತದೆ. ಸಾಲ ಸೌಲಭ್ಯ ದೊರೆಯದೆ ಸಾರ್ವಜನಿಕರು ಇದರಿಂದ ವಂಚಿತರಾಗುತ್ತಾರೆ ಎಂದು ಹೇಳಿದರು.

ಪ್ರಧಾನ ಕಾರ್ಯದರ್ಶಿ ಧರ್ಮರಾಜ್ ವಿ.ಏಕಭೋಟೆ ಮಾತನಾಡಿ, ಈ ಅವ್ಯವಸ್ಥೆಯಿಂದ ನೋಂದಣಿ ಕಾರ್ಯದಲ್ಲಿ ಸ್ಥಗಿತವಾಗಿದ್ದು, ಸಾರ್ವಜನಿರು ತಮ್ಮ ಆಸ್ತಿ ನೋಂದಣಿ ಕಾರ್ಯ–ಕ್ಕೆ ಪ್ರತಿ ದಿನ ಉಪ–ನೋಂದಣಿ ಕಛೇರಿಗಳಿಗೆ ಅಲೆಯುತ್ತಿದ್ದಾರೆ. ಆದ್ದರಿಂದ ಇಲಾಖೆಯು ಈ ಬದಲಾವಣೆ ಯನ್ನು ಕೈಬಿಟ್ಟು ಮೊದಲಿನಂತೆ ಆಸ್ತಿ ನೋಂದಣಿ ಕಾರ್ಯಕ್ಕೆ ಅನುವು ಮಾಡಿಕೊಟ್ಟಳ್ಳಿ ದಸ್ತಾವೇಜುಗಳ ಷೆಡ್ಯೂಲ್‌ನಲ್ಲಿ ವಿವರಿಸಿರುವಂತೆ ಇ.ಸಿ.ಯಲ್ಲಿ ಪೂರ್ಣ ವಿವರಣೆಯನ್ನು ನಮೂದಿಸಿ ನೊಂದಣಿ ಆಗುವಂತೆ ಮಾಡಿದಲ್ಲಿ ಸಾರ್ವಜನಿಕರಿಗೆ ಅನುಕೂಲವಾಗುತ್ತದೆ ಎಂದು ಹೇಳಿದರು.

ಹೊರ ರಾಜ್ಯದಲ್ಲಿರುವಂತೆ ನಮ್ಮ ರಾಜ್ಯದಲ್ಲೂ ಸಹಾ ಪತ್ರ ಬರಹಗಾರರಿಗೆ ಪ್ರತ್ಯೇಕ ಲಾಗಿನ್ ನೀಡಬೇಕು. ನೋಂದಾವಣೆ ಆಗುವ ಎಲ್ಲಾ ದಸ್ತಾವೇಜುಗಳಿಗೆ ಖಡ್ಡಾಯವಾಗಿ ಪತ್ರ ಬರಹಗಾರರ ಅಥವಾ ವಕೀಲ ಚಿಕ್ಕಲಂ. ಖಡ್ಡಾಯಗೊಳಿಸಬೇಕು. ಅನಧಿಕೃತ ವ್ಯಕ್ತಿಗಳನ್ನು ತಡೆಗಟ್ಟುವುದು ಮತ್ತು ಪತ್ರಬರಹಗಾರರಿಗೆ ಸರ್ಕಾರದಿಂದ ಅಧಿಕೃತ ಗುರುತಿನ ಚೀಟಿ ನೀಡಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ದಾವಣಗೆರೆ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬಿ.ವಿ.ಶಿವಾನಂದ, ಬಿ.ವಿ.ರಾಜಶೇಖರ, ಕೃಷ್ಣಮೂರ್ತಿ, ರಾಜಶೇಖರ, ಕೆ.ಎಸ್.ಗುರುರಾಜ, ಮಧುಸೂದನ್, ಹೆಚ್.ಎಸ್.ಮಾರುತಿ, ಯಲ್ಲಪ್ಪ, ವೈ.ಆರ್.ಶಿವರಾಜ್, ಯು.ಎಂ.ಪ್ರಮೋದ್,

## ಬ್ಲಾಕ್ ಸ್ಪೋಲ್ಜರ್ ಫ್ಲೈ ಬಳಸಿ ಕಸದಿಂದ ಗೊಬ್ಬರ:

# ರೌಂಡ್ ರಾಬಿನ್ ಪದ್ದತಿ ರದ್ದು ಹಳೇ ಮಾದರಿಯಲ್ಲಿ ಇ–ಖಾತೆ ಅರ್ಜಿ ವಿಲೇವಾರಿ– ಡಿ.ಕೆ. ಶಿವಕುಮಾರ್



**ಬೆಳಗಾವಿ:** ಖಾತೆ ವಿಲೇವಾರಿಗೆ ತಂದಿದ್ದ ರೌಂಡ್ ರಾಬಿನ್ ಪದ್ಧತಿಯನ್ನು ರದ್ದು ಮಾಡಲಾಗಿದೆ. ಜಿಬಿಎ ವ್ಯಾಪ್ತಿಯಲ್ಲಿ ಇ–ಖಾತೆ ಹಂಚಿಕೆಗೆ 6,450 ಅರ್ಜಿಗಳು ಮಾತ್ರ ಬಾಕಿಯಿರುವ ಕಾರಣಕ್ಕೆ ಹಳೆ ಪದ್ಧತಿಯಲ್ಲಿಯೇ ಅರ್ಜಿಗಳನ್ನು ವಿಲೇವಾರಿ ಮಾಡಲಾಗುವುದು ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು.

ವಿಧಾನಸಭೆ ಪ್ರಶ್ನೋತ್ತರ ಕಲಾಪದ ವೇಳೆ ಶಾಸಕ ಗೋಪಾಲಯ್ಯ ಅವರು ಜಿಬಿಎ ವ್ಯಾಪ್ತಿಯಲ್ಲಿ ಇ ಖಾತೆಗಳನ್ನು ನೀಡಲು ತಂದಿರುವ ರೌಂಡ್ ರಾಬಿನ್ ಪದ್ಧತಿಯಿಂದ ಅನಾನುಕೂಲವಾಗುತ್ತಿರುವುದು ಗಮನಕ್ಕೆ ಬಂದಿದೆಯೇ ಎಂದು ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು, "ಇ ಖಾತೆ ಯೋಜನೆಯಡಿ ಜಿಬಿಎ ವ್ಯಾಪ್ತಿಯಲ್ಲಿ ಒಟ್ಟು 43,382 ಅರ್ಜಿಗಳು ಸಲ್ಲಿಕೆಯಾಗಿದ್ದವು. ಇವುಗಳಲ್ಲಿ 31,274 ಅರ್ಜಿಗಳನ್ನು ವಿಲೇ ಮಾಡಲಾಗಿದೆ. 5,448 ಅರ್ಜಿಗಳನ್ನು ತಿರಸ್ಕರಿಸಲಾಗಿದೆ ಎಂದರು.

ಬೆಂಗಳೂರು ನಗರದ ಎರಡು ಕಡೆ ವೈಜ್ಞಾನಿಕ ಕಸ ವಿಲೇವಾರಿ ಘಟಕಗಳು ಜಿಬಿಎ ವ್ಯಾಪ್ತಿಯಲ್ಲಿ ಸಂಗ್ರಹವಾಗುವ ಕಸವನ್ನು ಸಂಸ್ಕರಿಸಲು ನಗರದ ಉತ್ತರ ಹಾಗೂ ದಕ್ಷಿಣ ದಿಕ್ಕುಗಳಲ್ಲಿ ಎರಡು ಘಟಕಗಳನ್ನು ಸ್ಥಾಪಿಸಲಾಗುವುದು. ಹೊಸ ತಂತ್ರಜ್ಞಾನದ ಮೂಲಕ ವೈಜ್ಞಾನಿಕವಾಗಿ ಕಸ ವಿಲೇವಾರಿ ಮಾಡಲಾಗುವುದು ಎಂದು ತಿಳಿಸಿದರು.

ದೊಡ್ಡಬಳ್ಳಾಪುರ ವ್ಯಾಪ್ತಿಯಲ್ಲಿ ಈ ಹಿಂದೆ ಮುಚ್ಚಿರುವ ಕಸ ಸಂಗ್ರಹಗಾರವನ್ನ ಸ್ಥಳಾಂತರಿಸಬೇಕು ಎನ್ನುವ ಶಾಸಕ ಧೀರಜ್ ಮುನಿರಾಜು ಅವರ ಪ್ರಶ್ನೆಗೆ ಉತ್ತರಿಸಿದ ಡಿಸಿಎಂ ಅವರು, ದೊಡ್ಡಬಳ್ಳಾಪುರ ತಾಲ್ಲೂಕಿನ ದೊಡ್ಡಬೆಳವಂಗಲ ಹೋಬಳಿ, ಗುಂದಲಹಳ್ಳಿಯಲ್ಲಿ ಒಟ್ಟು 134.10 ಎಕರೆ ಹಾಗೂ ಬೆಂಗಳೂರು ದಕ್ಷಿಣ ತಾಲ್ಲೂಕಿನ ಉತ್ತರಹಳ್ಳಿ ಹೋಬಳಿಯ ಗೊಲ್ಲಹಳ್ಳಿಯಲ್ಲಿ 84.14 ಎಕರೆ ಹಾಗೂ 31.14 ಎಕರೆ ಪ್ರದೇಶವನ್ನು ನಿಗದಿಪಡಿಸಲಾಗಿದೆ ಎಂದು ಹೇಳಿದರು.

ಯಶವಂತಪುರ ವಿಧಾನಸಭಾ ಕ್ಷೇತ್ರದಲ್ಲಿ ಸುಮಾರು 26 ಎಕರೆ ಪ್ರದೇಶದಲ್ಲಿ ವೈಜ್ಞಾನಿಕ ಕಸ ವಿಲೇವಾರಿ ಘಟಕವನ್ನು ಪ್ರಾರಂಭ ಮಾಡಲಾಗಿದೆ. ನಗರದ ನಾಲ್ಕು ಭಾಗದಲ್ಲೂ ವೈಜ್ಞಾನಿಕ ಕಸ ವಿಲೇವಾರಿ ಮಾಡಬೇಕು ಎಂದು ಪ್ರಯತ್ನ ಮಾಡುತ್ತಿರುವೆ. ಕಸದಿಂದ ಗ್ಯಾಸ್, ಬಯೋ ಗ್ಯಾಸ್ ಉತ್ಪಾದನೆ ಬಗ್ಗೆ ಹೆಚ್ಚು ಗಮನ ಹರಿಸುತ್ತಿದ್ದೇವೆ" ಎಂದರು.

ಕಸ ವಿಲೇವಾರಿ ಘಟಕ ಮತ್ತೆ ತೆರೆದರೆ ಜನರ ವಿರೋಧಕ್ಕೆ ಕಾರಣವಾಗುತ್ತದೆ ಎಂದು ಶಾಸಕ ಧೀರಜ್ ಮುನಿರಾಜು ಅವರು ಹೇಳಿದಾಗ, "ಈಗ ತಂತ್ರಜ್ಞಾನ ಮುಂದುವರೆದಿದೆ. ಜನರಿಗೆ ಮನವರಿಕೆ ಮಾಡಿ ನಾನು ಬರುತ್ತೇನೆ. ಈ ಘಟಕಗಳನ್ನು ನಗರದ ನಾಲ್ಕೈದು ಕಡೆ ಮಾಡುತ್ತೇವೆ. ಇದರಿಂದ ಯಾರಿಗೂ ತೊಂದರೆಯಾಗುವುದಿಲ್ಲ. ಇದೇ ರೀತಿಯ ಘಟಕವನ್ನು ನಾನು ಕನಕಪುರದಲ್ಲಿಯೂ ತೆರೆಯಲು ಹೊರಟಿದ್ದೇನೆ. ಬಿಡದಿಯಲ್ಲಿಯೂ ಮಾಡುತ್ತಿದ್ದೇವೆ, ನಗರದ ಒಳಭಾಗದಲ್ಲಿ, ದಾಸರಹಳ್ಳಿ, ರಾಮಲಿಂಗಾರೆಡ್ಡಿ ಅವರ ಕ್ಷೇತ್ರದಲ್ಲಿಯೂ ಸಣ್ಣ ಪ್ರಮಾಣದಲ್ಲಿ ಕೆಲಸ ಮಾಡಲಾಗುತ್ತಿದೆ" ಎಂದರು.

# ಟಿಪ್ಪು ಜಯಂತಿ ವಿವಾದ: ಕಾಶಪ್ಪನವರ್ ವಿರುದ್ಧ ಬಿಜೆಪಿ ಆಕ್ರೋಶ

**ಬೆಳಗಾವಿ :** ರಾಜ್ಯದಲ್ಲಿ ಟಿಪ್ಪು ಜಯಂತಿ ವಿವಾದ ಮತ್ತೆ



ಭುಗಿಲೆದ್ದಿದ್ದು, ಬಿಜೆಪಿ ನಾಯಕರು ಕಿಡಿ–ಕಾರಿದ್ದಾರೆ. ಕಾಂಗ್ರೆಸ್ ಶಾಸಕ ಕಾಶಪ್ಪನವರ್ ವಿಧಾನಸಭೆಯು ಕಲಾಪದಲ್ಲಿ ಟಿಪ್ಪು ಜಯಂತಿಯನ್ನು ಮತ್ತೆ ಆರಂಭಿಸುವಂತೆ ಪ್ರಸ್ತಾಪಿಸಲು ನಿರ್ಧರಿಸಿರುವುದು ಬಿಜೆಪಿಗರ ಆಕ್ರೋಶಕ್ಕೆ ಕಾರಣವಾಗಿದೆ. ಸಿದ್ದರಾಮಯ್ಯ ಈ ಹಿಂದೆ ಮುಖ್ಯಮಂತ್ರಿಯಾಗಿದ್ದಾಗ ಈ ಸಂಪ್ರದಾಯವನ್ನು ಪ್ರಾರಂಭಿಸಿದ್ದರು. ನಂತರ ಕೊಡಗಿನಲ್ಲಿ ನಡೆದ ಹಿಂಸಾತ್ಮಕ ಪ್ರತಿಭಟನೆ ಸೇರಿದಂತೆ ವ್ಯಾಪಕ ಪ್ರತಿಭಟನೆಗಳ ಕಾರಣ ಟಿಪ್ಪು ಜಯಂತಿ ಆಚರಣೆಗೆ ಬ್ರೇಕ್ ಬಿದ್ದಿತ್ತು.

ಕಾಶಪ್ಪನವರ್ ಪ್ರಸ್ತಾಪಕ್ಕೆ ಪ್ರತಿಕ್ರಿಯಿಸಿರುವ ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ್, 'ಟಿಪ್ಪು ಜಯಂತಿ, ಒಸಾಮಾ ಬಿನ್ ಲಾಡೆನ್ ಜನ್ಮ ದಿನಾಚರಣೆ ಮತ್ತು ಪಾಕಿಸ್ತಾನದ ಸ್ವಾತಂತ್ರ್ಯ ದಿನವನ್ನು ಆಚರಿಸಲಿ. ಇದು ಕಾಂಗ್ರೆಸ್ ಸರ್ಕಾರ. ಇವರ ಮನಸ್ಥಿತಿ ಜನರಿಗೆ ತಿಳಿಯುತ್ತದೆ ಎಂದರು.

# ಇಂದಿನಿಂದ ಬೆಂಬಲ ಬೆಲೆಯಲ್ಲಿ ಮೆಕ್ಕೆಜೋಳ ಖರೀದಿ ಪ್ರಕ್ರಿಯೆ ಪ್ರಾರಂಭ

## ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ



**ದಾವಣಗೆರೆ:** ಪ್ರಸಕ್ತ ಸಾಲಿನ ಮುಂಗಾರು ಹಂಗಾಮಿನಲ್ಲಿ ರೈತರು ಬೆಳೆದ ಮೆಕ್ಕೆಜೋಳವನ್ನು ಬುಧುವಾರದಿಂದ ರೈತರಿಂದ ಖರೀದಿಸಲಾಗುವುದು ಎಂದು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಜಿ.ಎಂ ರವರು ತಿಳಿಸಿದರು.

ಅವರು ಮಂಗಳವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಮೆಕ್ಕೆಜೋಳ ಖರೀದಿ ಕುರಿತು ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಪ್ರತಿ ರೈತರಿಂದ ಎಕರೆಗೆ 12 ಕ್ವಿಂಟಾಲ್ ಹಾಗೂ ಗರಿಷ್ಠ 50 ಕ್ವಿಂಟಾಲ್‌ನಂತೆ ಮೆಕ್ಕೆಜೋಳ ಉತ್ಪನ್ನವನ್ನು ಬೆಂಬಲ ಬೆಲೆ ದರ ಪ್ರತಿ ಕ್ವಿಂಟಾಲ್‌ಗೆ ರೂ.2400.00 ರಂತೆ ಖರೀದಿಸಲಾಗುವುದು. ಮೆಕ್ಕೆಜೋಳ ಖರೀದಿದಾರರು ಡಿಸ್ಟಿಲರಿ ಮಾಲೀಕರಿಂದ ಮಾರಾಟದ ಮೊತ್ತ ಪಡೆದ ದಿನಾಂಕದಿಂದ ಮೂರು ದಿನಗಳಲ್ಲಿ ಸಂಬಂಧಪಟ್ಟ ರೈತರಿಗೆ ಡಿಬಿಟಿ ಮೂಲಕ ಪಾವತಿಸಲಾಗುವುದು.

ಖರೀದಿ ಪ್ರಕ್ರಿಯೆಗೆ ಎನ್‌ಇಎಂಎಲ್ (ಓಇಒಐ) ಸಂಸ್ಥೆಯ ತಂತ್ರಾಂಶ ಅಳವಡಿಸಿಕೊಂಡು ಸರ್ಕಾರದ ಫ್ರೂಟ್ಸ್ ಪೋರ್ಟಲ್ ಮತ್ತು ಡಿಬಿಟಿ ಸಂಯೋಜನೆಯೊಂದಿಗೆ ರೈತರ ನೊಂದಣಿ ಕಾರ್ಯ ನಿರ್ವಹಿಸಲು ಸಂಬಂಧಪಟ್ಟ ಅಧಿಕಾರಿಗಳು ಕ್ರಮವಹಿಸುವಂತೆ ತಿಳಿಸಿದರು.

ಜಿಲ್ಲೆಯಲ್ಲಿ 730 ಮೆಟ್ರಿಕ್ ಟನ್ ಮೆಕ್ಕೆಜೋಳ ಖರೀದಿಸಲು ಗುರಿಯನ್ನು ಹೊಂದಲಾಗಿದೆ. ರೈತರು ಮೆಕ್ಕೆಜೋಳ ಖರೀದಿ ಕೇಂದ್ರಗಳಲ್ಲಿ ಮಾರಾಟ ಮಾಡಿ ಇದರ ಪ್ರಯೋಜನೆ ಪಡೆದುಕೊಳ್ಳುವಂತೆ ತಿಳಿಸಿದರು. ಸಹಕಾರ ಇಲಾಖೆ ಮತ್ತು ಎಪಿಎಂಸಿ ಅಧಿಕಾರಿಗಳು ಮೆಕ್ಕೆಜೋಳ ಖರೀದಿ ಕುರಿತು ಮಾಹಿತಿಯುಳ್ಳ ಕರಪತ್ರಗಳನ್ನು ಮುದ್ರಿಸಿ ರೈತರಿಗೆ ನೀಡಬೇಕು. ಮೆಕ್ಕೆಜೋಳ ಖರೀದಿಯಲ್ಲಿ ಯಾವುದೇ ಗೊಂದಲ ಆಗದಂತೆ ಅಧಿಕಾರಿಗಳು ಕ್ರಮವಹಿಸುವಂತೆ ತಿಳಿಸಿದರು.

ಸಭೆಯಲ್ಲಿ ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆಯ ಜಂಟಿ ನಿರ್ದೇಶಕ ಮಧುಸೂಧನ್, ಸಹಕಾರ ಇಲಾಖೆ ಉಪನಿಬಂಧಕ ಮಧು ಶ್ರೀನಿವಾಸ್, ಅಬಕಾರಿ ಇಲಾಖೆಯ ಉಪ ಆಯುಕ್ತ ಜುನೈದ್ , ಕೃಷಿ ಇಲಾಖೆಯ ಜಂಟಿ ನಿರ್ದೇಶಕರಾದ ಜಿಯಾವುಲ್ಲಾ, ತೋಟಗಾರಿಕೆ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕರಾದ ರಾಘವೇಂದ್ರ ಪ್ರಸಾದ್ ಹಾಗೂ ಇತರರು ಉಪಸ್ಥಿತರಿದ್ದರು.

# 'ಯುನೈಟೆಡ್' ಶಾಲೆಯಲ್ಲಿ ತೇಲಿ ಬಂದ ಕನ್ನಡ ಪ್ರೇಮ

**ದಾವಣಗೆರೆ :** ಶಿಸ್ತುಬದ್ಧ ಸಮವಸ್ತ್ರ ತಲೆಗೆ ಟೋಪಿ, ಸ್ಕಾಫ್, ಧರಿಸಿದ ವಿದ್ಯಾರ್ಥಿಗಳು ಶಿಕ್ಷಕರ ಸೂಚನೆ ಮೇರೆಗೆ ಕಾರ್ಯ ಚಟುವಟಿಕೆ ಇವೆಲ್ಲದರ ನಡುವೆ ಸಾಮೂಹಿಕವಾಗಿ ಹಾಡಿದ ನಾಡಗೀತೆ ಇಡೀ ಸಭಾಂಗಣದಲ್ಲಿಯೇ ಘರ್ಜಿಸಿದ ಕನ್ನಡದ ಕಹಳೆ, ಅತಿಥಿಗಳ ಹಿತನುಡಿಯಲ್ಲಿನ ಕನ್ನಡ ಭಾಷಾಭಿಮಾನದ ಸಂದೇಶ ಅಲೆ ಅಲೆಯಾಗಿ ತೇಲಿ ಬಂದಿತು.

ಇವೆಲ್ಲ ದೃಶ್ಯಾವಳಿಗಳು ನಮಗೆ ಕಂಡು ಬಂದಿದ್ದು ಇಲ್ಲಿಯ ಬೂದಿಹಾಳ್ ರಸ್ತೆಯ ಬಿ.ಎನ್.ಲೇಔಟ್ ನಲ್ಲಿರುವ ಯುನೈಟೆಡ್ ಆಂಗ್ಲ ಮಾಧ್ಯಮ (ಸಿಬಿಎಸ್‌ಇ) ಶಾಲೆಯಲ್ಲಿ ಕನ್ನಡ ರಾಜ್ಯೋತ್ಸವದ ಅಂಗವಾಗಿ ಹಮ್ಮಿಕೊಂಡಿದ್ದ ಕನ್ನಡ ಸಿರಿ ಸಮಾರೋಪ ಸಮಾರಂಭದಲ್ಲಿ

ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದ ಜಿಲ್ಲಾವರದಿಗಾರರ ಕೂಟದ ಅಧ್ಯಕ್ಷ ನಾಗರಾಜ್ ಬಡದಾಳ್ ಅವರು ಮಾತನಾಡಿ ಅಲ್ಪಸಂಖ್ಯಾತರು ಹೆಚ್ಚಿನ ಸಂಖ್ಯೆಯಲ್ಲಿ ವಾಸಿಸುವ ಇಂಥಹ ಪ್ರದೇಶದಲ್ಲಿ ಬೃಹದಾಕಾರ ಶಾಲೆಯನ್ನು ನಿರ್ಮಿಸಿ ಮಕ್ಕಳಿಗೆ ಶಿಕ್ಷಣ ನೀಡುತ್ತಿರುವುದು ಶ್ಲಾಘನೀಯ ಎಂದರು. ಶಿಕ್ಷಕರ ಈ ಪ್ರಯತ್ನಕ್ಕೆ ಶಾಲೆಯ ಮುಖ್ಯಸ್ಥರು ಪುರಸ್ಕರಿಸುವ ಮೂಲಕ ಶಾಲೆಯ ಅಭಿವೃದ್ಧಿಗೆ ಪುಷ್ಠಯಾಗಬೇಕೆಂದು ಸಲಹೆ ನೀಡಿದ ನಾಗರಾಜ್ ಬಡದಾಳ್ ಅವರ ಸಲಹೆಯನ್ನು ಸ್ವೀಕರಿಸಿದ ಶಾಲೆಯ ಸಂಸ್ಥಾಪಕ ಅಧ್ಯಕ್ಷ ಬಿ.ದಾದಾಪೀರ್ ಅವರು ತಮ್ಮ ಗುರುಗಳಾದ ಕೆ.ಇಮಾಂ ಅವರ ಹೆಸರಿನಲ್ಲಿ ಹಿರಿಯ ಪ್ರಾಥಮಿಕ, ಪ್ರೌಢಶಾಲೆ, ಪದವಿ ಪೂರ್ವ ಕಾಲೇಜ್ ಶಿಕ್ಷಕರಿಗೆ ಸೇರಿದಂತೆ ಒಟ್ಟು ನಾಲ್ಕು ಉತ್ತಮ ಶಿಕ್ಷಕ –ಶಿಕ್ಷಕಿಯರನ್ನು ಗುರುತಿಸಿ ತಲಾ 7500 ನೀಡಿ ಗೌರವಿಸಲಾಗುವುದು ಎಂದು ಘೋಷಿಸಿ ಪ್ರತಿ ಬುಧುವಾರ ನಮ್ಮ ಶಾಲೆಯಲ್ಲಿ ಒಂದು ದಿನ ಕನ್ನಡ ಭಾಷೆ ಮಾತ್ರ ಬಳಸಲು ಸೂಚಿಸಲಾಗುವುದು ಭಾಷೆಯ ಅಭಿವೃಧಿಗೆ ನಮ್ಮ ಶಾಲೆ ಮಾದರಿಯಾಗಲಿ ಎಂದು ಬಿ. ದಾದಾಪೀರ್ ಅವರು ಈ ಸಂದರ್ಭದಲ್ಲಿ ಆಶಿಸಿದರು.

ಇನ್ನೊಬ್ಬ ಮುಖ್ಯ ಅತಿಥಿ ಜನತಾ ವಾಣಿ ಹಿರಿಯ ವರದಿಗಾರ ಬಿ. ಸಿಕಂದರ್ ಅವರು ಮಾತನಾಡಿ ಮಕ್ಕಳಲ್ಲಿರುವ ಪ್ರತಿಭೆಯನ್ನು ಗುರುತಿಸಿ ಮಕ್ಕಳಿಗೆ ಕ್ರಿಯಾತ್ಮಕ ವೇದಿಕೆಯನ್ನು ನಿರ್ಮಿಸಿ ಕಿತ್ತೂರು ರಾಣಿ ಚೆನ್ನಮ್ಮ ಅವರ ಕಿರುನಾಟಕದ ಪ್ರದರ್ಶನ ನಿಜಕ್ಕೂ ಶಿಕ್ಷಕರ ಪ್ರಯತ್ನಕ್ಕೆ ಸಂದ ಪ್ರತಿಫಲ ವಾಗಿದೆ ಎಂದು ಹೇಳಿದರು.

ಪ್ರಾಂಶುಪಾಲ ಎಂ. ವಸೀಂಪಾಷ, ಮುಖ್ಯ ಶಿಕ್ಷಕ ನಾಗರಾಜ್, ಸಂಯೋಜಕಿ ಶರ್ಫುನ್ನಿಸಾ, ಅಷ್ಫಾಕ್, ಮುಬೀನಾ, ಜೈಬಾ ನಿಖದ್, ನಸೀಮಾ ಬೇಗಂ, ಫರ್ಹಾ ನಾಜ್, ಗಂಗಮ್ಮ ಶೀರಿನ್, ಸಿಮ್ರಾನ್, ರೋಶನ್ ಖಾನ್ ಉಪಸ್ಥಿತರಿದ್ದರು.

# ರಾಶಿ ಭವಿಷ್ಯ

### ಮೇಷ ರಾಶಿ

ಕೆಲಸದಲ್ಲಿ ಹಿರಿಯರಿಂದ ಒತ್ತಡ ಮತ್ತು ಮನೆಯಲ್ಲಿ ಅಪಶ್ರುತಿ ನಿಮ್ಮ ಏಕಾಗ್ರತೆಗೆ ತೊಂದರೆ ತರಬಹುದು. ವ್ಯಾಪಾರ ಸಾಲಕ್ಕಾಗಿ ನಿಮ್ಮ ಬಳಿ ಬರುವವರನ್ನು ನಿರ್ಲಕ್ಷಿಸಿ. ಕುಟುಂಬದ ಸದಸ್ಯರು ನಿಮ್ಮ ಜೀವನದಲ್ಲಿ ಒಂದು ವಿಶೇಷ ಸ್ಥಾನವನ್ನು ಹೊಂದಿರುತ್ತಾರೆ. ಪ್ರೀತಿಯಲ್ಲಿ ನಿಮ್ಮ ಅಸಭ್ಯ ವರ್ತನೆಗೆ ಕ್ಷಮೆ ಕೋರಿ. ಹೊಸ ಯೋಜನೆಗಳು ಮತ್ತು ವಿಚಾರಗಳನ್ನು ಕಾರ್ಯರೂಪಕ್ಕೆ ತರಲು ಒಳ್ಳೆಯ ದಿನ.

### ವೃಷಭ ರಾಶಿ

ವಿಶ್ರಾಂತಿ ತೆಗೆದುಕೊಳ್ಳಿ ಮತ್ತು ಕೆಲಸದ ನಡುವೆ ಸಾಧ್ಯವಾದಷ್ಟೂ ವಿಶ್ರಾಂತಿ ಪಡೆಯಲು ಪ್ರಯತ್ನಿಸಿ. ಇಂದು ಹಣದ ಆಗಮನವು ನಿಮ್ಮನ್ನು ಯಾವುದೇ ಸಮಸ್ಯೆಗಳಿಂದ ಮುಕ್ತಗೊಳಿಸಬಹುದು ಕೆಲವರಿಗೆ ಕುಟುಂಬದಲ್ಲಿ ಒಂದು ಹೊಸ ಆಗಮನ ಸಂಭ್ರಮಾಚರಣೆ ಮತ್ತು ಆನಂದದ ಕ್ಷಣಗಳನ್ನು ತೆರೆದಿಡುತ್ತದೆ. ಸಾಮಾಜಿಕ ಅಡೆತಡೆಗಳನ್ನು ದಾಟಲು ಸಾಧ್ಯವಾಗುವುದಿಲ್ಲ. ಹಗಲುಗನಸು ನಿಮ್ಮ ಪತನಕ್ಕೆ ಕಾರಣವಾಗುತ್ತದೆ – ಇತರರು ನಿಮ್ಮ ಕೆಲಸ ಮಾಡುತ್ತಾರೆಂದು ನಿರೀಕ್ಷಿಸಬೇಡಿ.

### ಮಿಥುನ ರಾಶಿ

ಸಾಮಾಜಿಕ ಜೀವನಕ್ಕಿಂತ ಆರೋಗ್ಯಕ್ಕೆ ಆದ್ಯತೆ ನೀಡಬೇಕು. ಇಂದು ಯಾವುದೇ ಸಹಾಯವಿಲ್ಲದೆ, ನೀವು ಹಣವನ್ನು ಗಳಿಸುವಲ್ಲಿ ಸಾಮರ್ಥ್ಯರಾಗಿರುತ್ತೀರಿ. ಕೋಪ ಅಲ್ಪಾವಧಿ ಹಾಗೂ ಅದು ನಿಮ್ಮನ್ನು ತೊಂದರೆಯಲ್ಲಿ ಸಿಲುಕಿಸಬಹುದೆಂದು ಅರ್ಥ ಮಾಡಿಕೊಳ್ಳುವ ಸಮಯ. ಕಳೆದ ಸಂತೋಷದ ನೆನಪುಗಳು ನಿಮ್ಮನ್ನು ವ್ಯಸ್ತವಾಗಿಡುತ್ತವೆ. ಚೆನ್ನಾಗಿ ಅರ್ಥಮಾಡಿಕೊಳ್ಳದೇ ಯಾವುದೇ ವ್ಯಾಪಾರ / ಕಾನೂನುಬದ್ಧ ಕಡತಕ್ಕೆ ಸಹಿ ಮಾಡಬೇಡಿ.

### ಕರ್ಕ ರಾಶಿ

ಕ್ರೀಡೆಗಳು ಮತ್ತು ಇತರೆ ಹೊರಾಂಗಣ ಚಟುವಟಿಕೆಗಳಲ್ಲಿ ಭಾಗವಹಿಸುವುದು ನಿಮ್ಮ ಕಳೆದುಕೊಂಡ ಚೈತನ್ಯವನ್ನು ಸಂಗ್ರಹಿಸಲು ಸಹಾಯ ಮಾಡುತ್ತದೆ. ನಿಮ್ಮ ಹಿಂದಿನ ಸಾಲವನ್ನು ಇಂದಿನ ವರೆಗೂ ಮರುಪಾವತಿ ಮಾಡದೇ ಇರುವ ನಿಮ್ಮ ಸಂಬಂಧಿಕರಿಗೆ ಇಂದು ಸಾಲ ಕೊಡಬಾರದು. ಒಂದು ಹಳೆಯ ಸಂಪರ್ಕ ನಿಮಗೆ ಕೆಲವು ಸಮಸ್ಯೆಗಳನ್ನು ಸೃಷ್ಟಿಸಬಹುದು ನಿಮ್ಮ ಪ್ರೀತಿಪಾತ್ರರು ನಿಮ್ಮನ್ನು ದ್ವೇಷಿಸಿದರೂ ನೀವು ಪ್ರೀತಿ ತೋರಿಸಬೇಕು.

### ಸಿಂಹ ರಾಶಿ

ನೀವು ಇತರರೊಡನೆ ನಿಮ್ಮ ಖುಷಿಯ ಕ್ಷಣಗಳನ್ನು ಹಂಚಿಕೊಳ್ಳುತ್ತಿದ್ದಂತೆ ನಿಮ್ಮ ಆರೋಗ್ಯ ಅರಳುತ್ತದೆ. ಆದರೆ ಇದನ್ನು ನಿರ್ಲಕ್ಷಿಸುವುದು ನಿಮಗೆ ತೊಂದರೆ ತರುತ್ತದೆ. ರಾತ್ರಿಯ ವೇಳೆಯಲ್ಲಿ ಇಂದು ನೀವು ಹಣದ ಪ್ರಯೋಜನವನ್ನು ಪಡೆಯುವ ಪೂರ್ತಿ ಸಾಧ್ಯತೆ ಇದೆ ಏಕೆಂದರೆ ನಿಮ್ಮ ಮೂಲಕ ಕೊಟ್ಟಿರುವ ಹಣ ಇಂದು ನಿಮಗೆ ಮರಳಿ ಸಿಗಬಹುದು. ಒಬ್ಬ ಸ್ನೇಹಿತ ತನ್ನ ವೈಯಕ್ತಿಕ ಸಮಸ್ಯೆಗಳನ್ನು ಪರಿಹರಿಸುವಲ್ಲಿ ನಿಮ್ಮ ಸಲಹೆ ಪಡೆದುಕೊಳ್ಳುತ್ತಾರೆ. ನಿಮ್ಮ ಪ್ರಿಯತಮೆಗೆ ನಿಮ್ಮ ಅಸಡ್ಡೆಯ ಗಮನ ಮನೆಯಲ್ಲಿ ಒತ್ತಡದ ಕ್ಷಣಗಳನ್ನು ತರಬಹುದು

### ಕನ್ಯಾ ರಾಶಿ

ಕುಡಿಯುವ ಮತ್ತು ತಿನ್ನುವಾಗ ಎಚ್ಚರದಿಂದಿರಿ. ಅಸಡ್ಡೆ ನಿಮಗೆ ಅನಾರೋಗ್ಯ ತರಬಹುದು. ಇಂದು ನೀವು ನಿಮ್ಮ ಮಕ್ಕಳ ಕಾರಣದಿಂದ ಆರ್ಥಿಕ ಲಬಹವನ್ನು ಪಡೆಯುವ ಸಾಧ್ಯತೆ ಕಂಡುಬರುತ್ತಿದೆ. ಇದರಿಂದ ನೀವು ತುಂಬಾ ಸಂತೋಷಪಡುತ್ತೀರಿ. ನಿಮ್ಮ ಕುಟುಂಬದ ಜೊತೆ ಕಟ್ಟುನಿಟ್ಟಾಗಿ ವರ್ತಿಸಬೇಡಿ ಇದು ಶಾಂತಿ ಭಂಗವುಂಟುಮಾಡಬಹುದು. ಪ್ರಣಯ ಸಂಬಂಧದಲ್ಲಿ ನಿಮ್ಮನ್ನು ತಪ್ಪಾಗಿ ತಿಳಿದುಕೊಳ್ಳುವ ಸಾಧ್ಯತೆಯಿದೆ.

### ತುಲಾ ರಾಶಿ

ನಿಮ್ಮ ಜಗಳಗಂಟ ನಡವಳಿಕೆ ನಿಮ್ಮ ಸಂಬಂಧವನ್ನು ಶಾಶ್ವತವಾಗಿ ಹಾಳು ಮಾಡಬಹುದಾದ್ದರಿಂದ ಅದನ್ನು ನಿಯಂತ್ರಣದಲ್ಲಿಡಿ. ನೀವು ತೆರೆದ ಮನಸ್ಸನ್ನು ಹೊಂದುವ ಮೂಲಕ ಮತ್ತು ಯಾರಾದರ ವಿರುದ್ಧ ಪೂರ್ವಾಗ್ರಹವನ್ನು ಕೈಬಿಡುವ ಮೂಲಕ ಇದರಿಂದ ಹೊರಬರಬಹುದು. ಹಣಕಾಸು ಸ್ಥಿತಿ ಊಹಾಪೋಹ ಅಥವಾ ಅನಿರೀಕ್ಷಿತ ಲಾಭದ ಮೂಲಕ ಸುಧಾರಿಸುತ್ತವೆ. ಸಾಮಾಜಿಕ ಕೂಟಗಳಲ್ಲಿ ನಿಮ್ಮ ಹಾಸ್ಯದ ಪ್ರಕೃತಿ ನಿಮ್ಮನ್ನು ಜನಪ್ರಿಯಗೊಳಿಸುತ್ತದೆ. ನೀವು ಸ್ವಲ್ಪ ಪ್ರೀತಿ ಹಂಚಿಕೊಂಡಲ್ಲಿ ಇಂದು ನಿಮ್ಮ ಪ್ರಿಯತಮೆ ನಿಮ್ಮ ದೇವತೆಯಾಗುತ್ತಾಳೆ.

### ವೃಶ್ಚಿಕ ರಾಶಿ

ನಿಮ್ಮ ಸಾಮಾನ್ಯ ಜ್ಞಾನದ ಜೊತೆಗೆ ನಿಮ್ಮ ನಿರಂತರ ಪ್ರಯತ್ನ ಖಂಡಿತವಾಗಿಯೂ ಯಶಸ್ಸು ತರುವುದರಿಂದ ತಾಳ್ಮೆಯಿಂದಿರಿ. ಹಣದ ಪ್ರಾಮುಖ್ಯತೆ ನಿಮಗೆ ಚೆನ್ನಾಗಿ ಗೊತ್ತಿದೆ, ಆದ್ದರಿಂದ ಇಂದು ನಿಮ್ಮ ಮೂಲಕ ಉಳಿಸಲಾಗಿರುವ ಹಣ ನಿಮ್ಮ ತುಂಬಾ ಕೆಲಸಕ್ಕೆ ಬರಬಹುದು ಮತ್ತು ನೀವು ಯಾವುದೇ ದೊಡ್ಡ ಸಮಸ್ಯೆಯಿಂದ ಹೊರಬರಬಹುದು. ಒಂದು ಹಳೆಯ ಸಂಪರ್ಕ ನಿಮಗೆ ಕೆಲವು ಸಮಸ್ಯೆಗಳನ್ನು ಸೃಷ್ಟಿಸಬಹುದು ನಿಮ್ಮ ಪ್ರೀತಿಪಾತ್ರರ ಭಾವನೆಗಳನ್ನು ಇಂದು ಅರ್ಥಮಾಡಿಕೊಳ್ಳಿ.

### ಧನು ರಾಶಿ

ನಿಮ್ಮ ಆರೋಗ್ಯ ಸುಧಾರಿಸಲು ಸಹಕಾರಿಯಾಗುವ ಕೆಲಸಗಳನ್ನು ಮಾಡಬಹುದಾದ ಒಂದು ದಿನ. ನಿಮ್ಮ ಸೃಜನಶೀಲ ಪ್ರತಿಭೆಯನ್ನು ಸರಿಯಾಗಿ ಬಳಸಿದಲ್ಲಿ ಅದು ಅತ್ಯಂತ ಲಾಭದಾಯಕವೆಂದು ಸಾಬೀತಾಗಬಹುದು. ನೀವು ಕುಟುಂಬದಲ್ಲಿ ಒಂದು ಸಂಧಿಗಾರನಂತೆ ವರ್ತಿಸುತ್ತೀರಿ. ಎಲ್ಲರ ಸಮಸ್ಯೆಗಳಿಗೂ ಕಿವಿಗೊಡಿ ಹಾಗೂ ವಿಷಯಗಳನ್ನು ನಿಯಂತ್ರಣದಲ್ಲಿರಿಸಿಕೊಳ್ಳಿ.

### ಮಕರ ರಾಶಿ

ಧ್ಯಾನ ಮತ್ತು ಆತ್ಮ ಸಾಕ್ಷಾತ್ಕಾರ ಪ್ರಯೋಜನಕಾರಿಯಾಗಬಹುದು. ಸಹೋದರ–ಸಹೋದರಿಯರ ಸಹಾಯದಿಂದ ಇಂದು ನೀವು ಅರ್ಥಿಕವಾಗಿ ಲಾಭವನ್ನು ಪಡೆಯಬಹುದು. ನಿಮ್ಮ ಸಹೋದರ ಸಹೋದರಿಯರ ಸಲಹೆ ತೆಗೆದುಕೊಳ್ಳಿ ಕುಟುಂಬದ ಪರಿಸ್ಥಿತಿ ಇಂದು ನೀವು ಯೋಚಿಸುವ ಹಾಗೆ ಇರುವುದಿಲ್ಲ. ಇಂದು ಮನೆಯಲ್ಲಿ ಯಾವುದೇ ವಿಷಯದ ಬಗ್ಗೆ ಅಪಶ್ರುತಿ ಉಂಟಾಗುವ ಸಾಧ್ಯತೆ ಇದೆ. ಅಂತಹ ಪರಿಸ್ಥಿಯಲ್ಲಿ ನಿಮ್ಮನ್ನು ನಿಯಂತ್ರಿಸಿ.

### ಕುಂಭ ರಾಶಿ

ಒತ್ತಡದ ದಿನದ ಹೊರತಾಗಿಯೂ ಆರೋಗ್ಯ ಪರಿಪೂರ್ಣವಾಗಿರುತ್ತದೆ. ಇಂದು ಹೂಡಿಕೆಗಳನ್ನು ಮಾಡಬಾರದು. ನೀವು ಕಛೇರಿಯಲ್ಲಿ ಹೆಚ್ಚು ಸಮಯ ಕಳೆದರೆ ನಿಮ್ಮ ಮನೆಯ ಜೀವನಕ್ಕೆ ಹಾನಿಯಾಗಬಹುದು. ನಿಮ್ಮ ನಗು ಯಾವುದೇ ಅರ್ಥ ಹೊಂದಿಲ್ಲ ನಗುವಿಗೆ ಧ್ವನಿಯಿಲ್ಲ ನಿಮ್ಮ ಸಂಗವಿಲ್ಲದಿದ್ದಾಗ ಹೃದಯ ಬಡಿಯುವುದನ್ನು ಮರೆಯುತ್ತದೆ.

### ಮೀನ ರಾಶಿ

ಇಂದು ನೀವು ಹಲವಾರು ಒತ್ತಡಗಳು ಮತ್ತು ಭಿನ್ನಾಭಿಪ್ರಾಯಗಳನ್ನು ಎದುರಿಸಬೇಕಾಗಬಹುದು ಹಾಗೂ ಇದು ನಿಮಗೆ ಕಿರಿಕಿರಿ ಹಾಗೂ ಆತಂಕದ ಭಾವನೆಗಳನ್ನು ಉಂಟುಮಾಡಬಹುದು. ನಿಮ್ಮ ಮನೆಗೆ ಸಂಬಂಧಿಸಿದ ಹೂಡಿಕೆ ಲಾಭದಾಯಕವಾಗಿರುತ್ತದೆ. ಮಕ್ಕಳಿಂದ ಅನಿರೀಕ್ಷಿತ ಸುದ್ದಿ ಸಂತೋಷದ ಕ್ಷಣಗಳನ್ನು ತರುತ್ತದೆ. ನಿಮ್ಮ ಪ್ರೀತಿ ಅಸಮ್ಮತಿಯನ್ನು ಆಮಂತ್ರಿಸಬಹುದು.

# ಬಡಜನರನ್ನು ತಲುಪಿದ ಪಂಚ ಗ್ಯಾರಂಟಿ : ಶ್ಯಾಮನೂರು ಬಸವರಾಜು

**ದಾವಣಗೆರೆ:** ಜಿಲ್ಲೆಯಲ್ಲಿರುವ ಬಡ ಜನರಿಗೆ ಪಂಚ ಗ್ಯಾರಂಟಿಗಳು ತಲುಪುತ್ತಿದ್ದು ಈ ನಿಟ್ಟಿನಲ್ಲಿ ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯಿತಿ ಅಧಿಕಾರಿಗಳು ಕಾರ್ಯ ಅಭಿನಂದನಾರ್ಹ ಎಂದು ಜಿಲ್ಲಾ ಪಂಚ ಗ್ಯಾರಂಟಿಗಳ ಅಧ್ಯಕ್ಷರಾದ ಶ್ಯಾಮನೂರು ಟಿ. ಬಸವರಾಜು ಅವರು ತಿಳಿಸಿದರು.

ಅವರು ಸೋಮವಾರ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಏರ್ಪಡಿಸಿದ್ದ ಜಿಲ್ಲಾ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಜಿಲ್ಲೆಯಲ್ಲಿ ಪಂಚ ಗ್ಯಾರಂಟಿಗಳ ಅನುಷ್ಠಾನ ವೇಳೆ ಕೆಲವು ಲೋಪದೋಷ, ತೊಡಕುಗಳು ಉಂಟಾಗಬಹುದು, ಆದರೆ ಅವುಗಳನ್ನು ಅಧಿಕಾರಿಗಳು ಸಕಾಲದಲ್ಲಿ ಸರಿಪಡಿಸಿಕೊಂಡು ಮತ್ತಷ್ಟು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವಂತೆ ತಿಳಿಸಿದರು.

ಜಿಲ್ಲೆಯಲ್ಲಿರುವ ಕೆಲವು ನ್ಯಾಯಬೆಲೆ ಅಂಗಡಿಗಳಲ್ಲಿ ಗ್ರಾಹಕರು ಬೆರಳಚ್ಚು ನೀಡಿ ಪ್ರತಿ ಮಾಹೆ ಪಡಿತರ ಪಡೆಯದೆಣಟಿಜಜಜಿಟಿಜಜ ಮೂರು ಅಥವಾ ನಾಲ್ಕು ತಿಂಗಳಿಗೊಮ್ಮೆ ಹೆಚ್ಚುವರಿಯಾಗಿ ಪಡಿತರ ನೀಡುವಂತೆ ಒತ್ತಾಯಿಸುವ ಮೂಲಕ ಪಡಿತರ ಪಡೆಯುತ್ತಿದ್ದಾರೆ ಎಂದು ಮಾಹಿತಿ ಬಂದಿರುತ್ತದೆ.

ಈ ರೀತಿ ಪಡಿತರ ವಿತರಿಸಲು ಅವಕಾಶವಿರುವುದಿಲ್ಲ, ಆದುದರಿಂದ ಆಯಾ ತಿಂಗಳುಗಳಲ್ಲೆ ಪಡಿತರ ವಿತರಿಸಲು ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆಯ ಅಧಿಕಾರಿಗಳು ಕ್ರಮವಹಿಸುವಂತೆ ತಿಳಿಸಿದರು.

ಪ್ರಸ್ತುತ ಹೊಸದಾಗಿ ಬಿಪಿಎಲ್ ಕಾರ್ಡ್ಗಳ ವಿತರಿಸಲು ಸರ್ಕಾರದಿಂದ ಅನುಮತಿ ನೀಡಿಲ್ಲ, ಅಪಘಾತ ಮತ್ತು 101 ಮರಣಾಂತಿಕ ಖಾಯಿಲೆಗೆ ತುತ್ತಾದ ಸಂದರ್ಭದಲ್ಲಿ ವೈದ್ಯಕೀಯ ಉದ್ದೇಶಕ್ಕಾಗಿ ಬಿಪಿಎಲ್ ಕಾರ್ಡ್ ಪಡೆಯಲು ಅವಕಾಶವಿದೆ. ಆದರೆ ಇಲಾಖೆಯ ಮಾನದಂಡಗಳನ್ವಯ ಬಿಪಿಎಲ್ ಚೀಟಿ ಪಡೆಯಲು ಅರ್ಹತೆ ಹೊಂದಿರಬೇಕು. ಆಗಿದ್ದಲ್ಲಿ ವೈದ್ಯಕೀಯ ಉದ್ದೇಶಕ್ಕೆ ಅರ್ಜಿ ಸಲ್ಲಿಸಿದ 3 ದಿನಗಳಲ್ಲಿ ಬಿಪಿಎಲ್ ಕಾರ್ಡ್ ವಿತರಿಸಲಾಗುತ್ತಿದೆ ಎಂದು ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆಯ ಜಂಟಿ ನಿರ್ದೇಶಕರು ಸಭೆಗೆ ತಿಳಿಸಿದರು.



**ಗೃಹಲಕ್ಷ್ಮಿ :** ಗೃಹಲಕ್ಷ್ಮಿ ಯೋಜನೆಯಡಿ 3,86,715 ಫಲಾನುಭವಿಗಳಿದ್ದು ಏಪ್ರಿಲ್ ನಿಂದ ಜುಲೈ 2025 ರ ವರೆಗೆ ರೂ. 290.32 ಕೋಟಿ ಮೊತ್ತ ಜಮಾ ಮಾಡಲಾಗಿದೆ. ಕಳೆದ ಸೆಪ್ಟೆಂಬರ್ ಮಾಹೆಯಿಂದ ಇಲ್ಲಿಯವರಿಗೆ 4651 ಕುಟುಂಬದ ಯಾಜಮಾನಿಯರು ಮರಣ ಹೊಂದಿರುತ್ತಾರೆ. ಈ ಪೈಕಿ 3750 ಮರಣ ಹೊಂದಿದವರ ಮಾಹಿತಿಯನ್ನು ಪಡೆದು ರೂ. 2,96,8000/–(ಎರಡು ಕೋಟಿ ತೊಂಬತ್ತಾರು ಲಕ್ಷದ ಎಂಟು ಸಾವಿರ ರೂ. ಗಳು ಮಾತ್ರ) ಸರ್ಕಾರಕ್ಕೆ ಜಮೆ ಮಾಡಲಾಗಿದೆ. ಇನ್ನು ಉಳಿದ 765 ಮಹಿಳೆಯರ ವಿವರ ಬಾಕಿ ಉಳಿದಿದೆ.

**ಶಕ್ತಿ:**
ಶಕ್ತಿ ಯೋಜನೆಯಡಿ ಜಿಲ್ಲೆಯಲ್ಲಿ 11,81,16,468 ಮಹಿಳೆಯರು ಉಚಿತ ಪ್ರಯಾಣಿಸಿದ್ದು ಇದಕ್ಕಾಗಿ 346.43 ಕೋಟಿ ರೂ. ಹಣವನ್ನು ಸಾರಿಗೆ ನಿಗಮಕ್ಕೆ ರ್ಕಾರ ಪಾವತಿ ಮಾಡಿದೆ.

**ಯುವನಿಧಿ:** ಯುವನಿಧಿ ಯೋಜನೆಗೆ ಜುಲೈ ಅಂತ್ಯಕ್ಕೆ ಸಂಬಂಧಿಸಿದಂತೆ 9248 ಫಲಾನುಭವಿಗಳಿಗೆ 24.69 ಕೋಟಿ ರೂ. ಹಣವನ್ನು ಡಿಬಿಟಿ ಮೂಲಕ ರ್ಗಾವಣೆ ಮಾಡಲಾಗಿದೆ. ಯುವನಿಧಿಯಡಿ ಒಟ್ಟು 167 ಬಗೆಯ ಕೌಶಲ್ಯದಾರಿತ ಉದ್ಯೋಗ ತರಬೇತಿಗಳನ್ನು ನೀಡಲಾಗುತ್ತಿದೆ, ಪದವಿ ಹಾಗೂ ಸ್ನಾತಕೋತ್ತರ ಪದವಿ ಪಡೆದಂತಹ ನಿರುದ್ಯೋಗ ಯುವಕ ಯುವತಿಯರಿಗೆ ತರಬೇತಿ ನೀಡುವ ಬಗ್ಗೆ ಕ್ರಮವಹಿಸುವಂತೆ ತಿಳಿಸಿದರು.

**ಗೃಹಜ್ಯೋತಿ :**
ಗೃಹಜ್ಯೋತಿ ಯೋಜನೆಯಡಿ 515640 ಗ್ರಾಹಕರು ನೋಂದಣಿಯಾಗಿದ್ದು ಉಚಿತ ವಿದ್ಯುತ್ ಬಳಕೆ ಮಾಡಿದ್ದಾರೆ. ಇದಕ್ಕಾಗಿ ರ್ಕಾರ 24.41ಕೋಟಿ ರೂ. ಸಹಾಯಧನ ಪಾವತಿ ಮಾಡಲಾಗಿದೆ ಎಂದು ತಿಳಿಸಿದರು.

ಜಿಲ್ಲಾ ಪಂಚಾಯಿತಿ ಕಾರ್ಯನಿರ್ವಾಹಕಾಧಿಕಾರಿ ಗಿತ್ತೇ ಮಾದವ ವಿಠಲರಾವ್ ಅವರು ಮಾತನಾಡಿ ಪ್ರತಿದಿನ ಅಧಿಕಾರಿಗಳ ನಡೆ ಹಳ್ಳಿಯ ಕಡೆ ಎಂಬ ಕಾರ್ಯಕ್ರಮದಡಿ 60ಕ್ಕೂ ಹೆಚ್ಚು ವಿವಿಧ ಗ್ರಾಮಗಳಿಗೆ ಭೇಟಿ ನೀಡಿ, ಅಭಿವೃದ್ಧಿ, ಸ್ವಚ್ಚತೆ ಹಾಗೂ ನರೇಗಾ ಕಾಮಗಾರಿ ಕುರಿತು ಭೇಟಿ ನೀಡಿ ಪರಿಶಿಲನೆ ನಡೆಸಲಾಗುತ್ತಿದೆ. ಇದೇ ಸಂದರ್ಭದಲ್ಲಿ ಅಂಗನವಾಡಿ, ಪ್ರಾಥಮಿಕ ಆರೋಗ್ಯ ಕೇಂದ್ರಗಳು, ಗ್ರಾಮ ಪಂಚಾಯಿತಿ ಕಚೇರಿಗಳು, ನ್ಯಾಯಬೆಲೆ ಅಂಗಡಿಗಳನ್ನು ಸಹ ಪರಿಶೀಲಿಸಿದ್ದೇನೆ. ನ್ಯಾಯಬೆಲೆ ಅಂಗಡಿಗಳ ಬಗ್ಗೆ ಕೇಳಿ ಬರುತ್ತಿರುವ ತೂಕ ವ್ಯತ್ಯಾಸದ ಬಗ್ಗೆ ಎಲ್ಲಿಯೂ ಪ್ರಕರಣ ಕಂಡು ಬಂದಿಲ್ಲ. ಜನನ ಮತ್ತು ಮರಣ ಪ್ರಮಾಣಗಳ ನೊಂದಣಿ ಪ್ರಕ್ರಿಯೆಗೂ ಹಾಗೂ ಅಂಕಿ ಅಂಶಗಳಿಗೂ ಸಾಕಷ್ಟು ವ್ಯತ್ಯಾಸಗಳಿವೆ . ಆದ್ದರಿಂದ ಇತ್ತೀಚೆಗೆ ನಡೆದ ಜಿಲ್ಲಾ ಮಟ್ಟದ ಸಭೆ ನಡೆದಿದ್ದು ಮರಣ ಪ್ರಮಾಣ ಕಡಿಮೆ ಇರುವುದಾಗಿ ಅಂಕಿಅಂಶಗಳಿದ್ದು ಜನನ ಮತ್ತು ಮರಣ ಪ್ರಮಾಣಗಳ ನಿರ್ದಿಷ್ಟ ಮತ್ತು ಸ್ಪಷ್ಟವಾಗಿ ನೊಂದಣಿ ಮಾಡುವಂತೆ ತಿಳಿಸಿದರು.

**ಡಿ.22ಕ್ಕೆ ಬೃಹತ್ ಉದ್ಯೋಗ ಮೇಳ:**
ಜಿಲ್ಲೆಯಲ್ಲಿ ಇದೇ ಡಿಸೆಂಬರ್ 22 ರಂದು ಯುಬಿಡಿಟಿ ಕಾಲೇಜಿನಲ್ಲಿ ಬೃಹತ್ ಉದ್ಯೋಗ ಮೇಳ ಹಮ್ಮಿಕೊಳ್ಳಲಾಗಿದೆ. ಇದರಿಂದ ನಿರುದ್ಯೋಗ ಯುವಕ, ಯುವತಿಯರಿಗೆ ಯುವನಿಧಿ ಫಲಾನುಭವಿಗಳಿಗೆ ತುಂಬಾ ಉಪಯುಕ್ತವಾಗಲಿದೆ. ಈ ಉದ್ಯೋಗ ಮೇಳದಲ್ಲಿ ಕೆಲಸ ಸಿಗದವರಿಗೆ ಯುವನಿಧಿಯಡಿ ನೊಂದಣಿ ಮಾಡಿಸಿಕೊಳ್ಳಲು ಕ್ರಮವಹಿಸಲಾಗಿದೆ ಎಂದು ತಿಳಿಸಿದರು.

ಆಹಾರ ಗೋದಾಮಿಗೆ ಖುದ್ದು ಅಧಿಕಾರಿಗಳೊಂದಿಗೆ ಭೇಟಿ ನೀಡಿದ್ದು ಯೋಗ್ಯವಲ್ಲದ ಅಕ್ಕಿ ಮತ್ತು ಬೆಳೆಯನ್ನು ಹಿಂದಿರುಗಿಸಲು ಕ್ರಮವಹಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಅಲ್ಲದೆ ದಾಸ್ತಾನು ಸರಬರಾಜುದಾರರಿಗೆ ಷೋಕಾಸ್ ನೋಟಿಸ್ ನೀಡಲಾಗಿದೆ ಎಂದು ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚ ಗ್ಯಾರಂಟಿ ಯೋಜನೆಗಳ ಉಪಾಧ್ಯಕ್ಷರಾದ ರಾಜೇಶ್ವರಿ, ಕೆ.ಎನ್. ಮಂಜುನಾಥ್ , ಅನಿಶ್ ಪಾಶ ಸದಸ್ಯರುಗಳಾದ ಡೋಲಿ ಚಂದ್ರು, ಎಸ್.ಎಸ್. ಗಿರೀಶ್, ಶ್ರೀನಿವಾಸ್ ಚನ್ನಗಿರಿ, ನಾಗರಾಜ್ ಚನ್ನಗಿರಿ ಶಿವಶಂಕರ್ ಕೈದಾಳ್ , ಲಿಯಾಖತ್ ಅಲಿ, ಷಂಶೀರ್ , ಶಶಿಕಲಾ , ಕೆ.ಜಿ. ಉಮೇಶ್ ಹಾಗೂ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿದ್ದರು.

# ಪಂದ್ಯಾವಳಿಯಲ್ಲಿ ಜಗ್ಗಿಬಾಯ್ಸ್ ಪ್ರಥಮ ಸ್ಥಾನ

**ಸಕಲೇಶಪುರ:** ತಾಲ್ಲೂಕಿನ ಸುಳ್ಳಕ್ಕಿ ಗ್ರಾಮದಲ್ಲಿ ಫ್ರೆಂಡ್ಸ್ ಕ್ಲಬ್ ವತಿಯಿಂದ ಹಮಿಕೊಂಡಿದ್ದ ಪ್ರಥಮ ವರ್ಷದ ಹೊನಲು ಬೆಳಕಿನ ವಾಲಿಬಾಲ್ ಪಂದ್ಯಾವಳಿಯಲ್ಲಿ ಜಗ್ಗಿಬಾಯ್ಸ್ ಪ್ರಥಮ ಸ್ಥಾನ ಪಡೆದುಕೊಂಡಿತು. ಹಾನುಬಾಳು ದ್ವಿತೀಯ, ಬಾಳ್ಳುಪೇಟೆ ತೃತೀಯ ಹಾಗು ಸುಳ್ಳಕ್ಕಿ ತಂಡ ನಾಲ್ಕನೇ ಸ್ಥಾನವನ್ನು ತನ್ನದಾಗಿಸಿಕೊಂಡಿತು.

ಸುಳ್ಳಕ್ಕಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ಮೈದಾನದಲ್ಲಿ ಭಾನುವಾರ ರಾತ್ರಿ 10 ಗಂಟೆಗೆ ಆರಂಭಗೊಂಡ ಪಂದ್ಯವಳಿ ಸೋಮವಾರ ಬೆಳಿಗ್ಗೆ 7.30ರವರೆಗೂ ನಿರಂತರವಾಗಿ ನಡೆಯಿತು. ಇಡೀ ರಾತ್ರಿ ನೂರಾರು ಕ್ರೀಡಾ ಪ್ರೇಕ್ಷರು ಮೈಕೊರೆಯುವ ಚಳಿಯ ನಡುವೆಯೂ ಪಂದ್ಯಾವಳಿಗಳನ್ನು ವೀಕ್ಷಣೆ ಮಾಡಿ ಕ್ರೀಡಾಪಟುಗಳನ್ನು ಪ್ರೋತ್ಸಾಹಿಸಿದರು.



ಪಂದ್ಯಾವಳಿಯಲ್ಲಿ ಬೇಲೂರು, ಆಲೂರು, ಸಕಲೇಶಪುರ, ಮೂಡುಗೆರೆ ಸೇರಿಗೆ ಜಿಲ್ಲೆಯ ನಾನಾ ಭಾಗಗಳಿಂದ ಹಲವು ತಂಡಗಳು ಭಾಗವಹಿಸಿದ್ದವು. ವಿಜೇತ ತಂಡಗಳಿಗೆ ಪೊಲೀಸ್ ಇಲಾಖೆಯ ಪೃಥ್ವಿ, ಕೀರ್ತಿ, ಭೀಮ್ ಆರ್ಮಿಯ ಜಗದೀಶ್, ಮಂಜು ಸುಳ್ಳಕ್ಕಿ ಮತ್ತಿತರರು ಬಹುಮಾನ ವಿತರಣೆ ಮಾಡಿದರು.

# ಯುವಶಕ್ತಿಗೆ ದೊರೆತಿರುವ ರಾಷ್ಟ್ರಮಟ್ಟದ ಅವಕಾಶ ಸದುಪಯೋಗವಾಗಲಿ: ಭಾನು ಚೈತನ್ಯ ವರ್ಮಾ

**ಚಿಕ್ಕಬಳ್ಳಾಪುರ :** ನಮ್ಮ ದೇಶದ ಯುವಶಕ್ತಿಗೆ ರಾಷ್ಟ್ರಮಟ್ಟದ ಅವಕಾಶ ದೊರೆತಿರುವುದು ನಿಜಕ್ಕೂ ಶ್ಲಾಘನೀಯ ವಿಚಾರ. ಪ್ರತಿಯೊಬ್ಬ ಸ್ಪರ್ಧಾರ್ಥಿಯೂ ತಮ್ಮಲ್ಲಿರುವ ಪ್ರಾಯೋಗಿಕ ಮತ್ತು ತಂತ್ರಜ್ಞಾನ ಕೌಶಲ್ಯವನ್ನು ಜಗತ್ತಿನ ಮುಂದೆ ಪ್ರದರ್ಶಿಸಬೇಕಿದೆ ಎಂದು ನಾಗಾರ್ಜುನ ಇಂಜಿನಿಯರಿಂಗ್ ಮತ್ತು ತಾಂತ್ರಿಕ ಮಹಾವಿದ್ಯಾಲಯದ ಸಿಓಓ ಭಾನು ಚೈತನ್ಯ ವರ್ಮಾ ಹೇಳಿದರು.

ಚಿಕ್ಕಬಳ್ಳಾಪುರ ಹೊರವಲಯದ ನಾಗಾರ್ಜುನ ಇಂಜಿನಿಯರಿಂಗ್ ಮತ್ತು ತಾಂತ್ರಿಕ ಮಹಾವಿದ್ಯಾಲಯದಲ್ಲಿ ಸೋಮವಾರ ಆಯೋಜಿಸಿದ್ದ ಸ್ಮಾರ್ಟ್ ಇಂಡಿಯಾ ಹ್ಯಾಕಥಾನ್ – 2025 ಕಾರ್ಯಕ್ರಮವನ್ನು ಜ್ಯೋತಿ ಬೆಳಗುವ ಮೂಲಕ ಚಾಲನೆ ನೀಡಿ ಅವರು ಮಾತನಾಡಿದರು.

ದೇಶಾದ್ಯಂತ ಲಕ್ಷಾಂತರ ಮಂದಿ ಯುವಜನತೆ ಸ್ಮಾರ್ಟ್ ಇಂಡಿಯಾ ಹ್ಯಾಕಥಾನ್ ಕಾರ್ಯಕ್ರಮದಲ್ಲಿ ಭಾಗವಹಿಸುತ್ತಿದ್ದಾರೆ. ನಮ್ಮ ಸಂಸ್ಥೆಗೆ ದೇಶದ 11 ರಾಜ್ಯಗಳಿಂದ 120 ವಿದ್ಯಾರ್ಥಿಗಳು ಬಂದಿದ್ದು, ಇಂಜಿನಿಯರಿಂಗ್ ವಿದ್ಯಾರ್ಥಿಗಳಿಗೆ ಇದೊಂದು ಸದಾವಕಾಶ. ಎಲ್ಲರೂ ಇದರ ಸದುಪಯೋಗಪಡಿಸಿಕೊಳ್ಳಬೇಕು. ಶಿಕ್ಷಣ ಸಚಿವಾಲಯ ಮತ್ತು ಎಐಸಿಟಿಇ ನಮ್ಮಲ್ಲಿ ನಂಬಿಕೆಯಿಟ್ಟು ಈ ಸದಾವಕಾಶ ಕಲ್ಪಿಸಿದ್ದಕ್ಕಾಗಿ ಧನ್ಯವಾದಗಳನ್ನು ತಿಳಿಸುತ್ತೇನೆ. ಇಂತಹ ಕಾರ್ಯಕ್ರಮಗಳಿಗೆ ಸೂಕ್ತ ವೇದಿಕೆ ಕಲ್ಪಿಸಲು ನಾಗಾರ್ಜುನ ಸಂಸ್ಥೆ ಸದಾ ಬದ್ಧವಾಗಿರುತ್ತದೆ ಎಂದು ಹೇಳಿದರು.

ನವದೆಹಲಿ ಡಿಆರ್‌ಡಿಓ ಮುಖ್ಯಕಚೇರಿಯ ಓಎಸ್ ಮತ್ತು ನಿರ್ದೇಶಕರಾದ ಡಾ.ಎನ್. ರಂಜನ ಮಾತನಾಡಿ, ಎಸ್ಐಎಚ್–2025 ನಮ್ಮ ದೇಶದ ರಕ್ಷಣೆಗಾಗಿ ನಡೆಯುತ್ತಿರುವ ಕಾರ್ಯಕ್ರಮ. ಯಾವುದೇ ಸಮಸ್ಯೆಯನ್ನು ಒಂದು ಆಯಾಮದಿಂದ ಬಗೆಹರಿಸಲು ಸಾಧ್ಯವಿಲ್ಲ, ಬಹುಶಿಸ್ತೀಯ ಆಯಾಮಗಳಿಂದ ಪ್ರಯತ್ನಿಸಿದಾಗ ಮಾತ್ರ ಸಮಸ್ಯೆಗಳ ಬಗೆಹರಿಸುವಿಕೆ ಸಾಧ್ಯವಾಗುತ್ತದೆ. ಕೆಲವರು ಕೋಡಿಂಗ್ ಮಾಡುತ್ತಾರೆ. ಇನ್ನೂ ಕೆಲವರು ಬೇರೆ ರೀತಿಯ ತಂತ್ರಜ್ಞಾನ ಪ್ರಾವೀಣ್ಯತೆ ಹೊಂದಿರುತ್ತಾರೆ. ಆದ್ದರಿಂದ ಎಲ್ಲರೂ ಒಗ್ಗಟ್ಟಾಗಿ ಕೆಲಸ ಮಾಡಬೇಕು. ಇದರಿಂದ ಯಾವುದೇ ಸಮಸ್ಯೆಯನ್ನು ಬಗೆಹರಿಸಬಹುದು. ಎಲ್ಲರೂ ಒಟ್ಟಾಗಿ ಸಮಸ್ಯೆಗಳಿಗೆ ಪರಿಹಾರ ಕಂಡುಹಿಡಿಯಿರಿ. ನಿಮ್ಮ ಪರಿಹಾರ ಎಲ್ಲಾ ರೀತಿಯಲ್ಲೂ ಸರಿಯಾಗಿದ್ದರೆ, ಅದನ್ನೇ ಮುಂದಿನ ದಿನಗಳಲ್ಲಿ ಕಂಪನಿಗಳಲ್ಲಿ ಅಳವಡಿಸಿಕೊಳ್ಳಲಾಗುವುದು ಎಂದು ವಿದ್ಯಾರ್ಥಿಗಳನ್ನು ಭರವಸೆ ನೀಡಿದರು.

ವಾಲ್‌ಮಾರ್ಟ್ ಇಂಡಿಯಾ ಲಿಮಿಟೆಡ್‌ನ ಇಂಜಿನಿಯರಿಂಗ್ ಲೀಡರ್ ಡಾ.ರಾಧಾಕೃಷ್ಣನ್ ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿ, ನಿಮ್ಮಲ್ಲಿ ಆವಿಷ್ಕಾರ ಶಕ್ತಿ ಇದೆ ಎಂಬುದನ್ನು ಹೊರಜಗತ್ತಿಗೆ ತೋರಿಸಬೇಕಿದೆ. ಅದಕ್ಕಾಗಿ ಯುವಜನರು ಒಗ್ಗಟ್ಟಾಗಬೇಕು. ಇದರಿಂದ ಸಮಸ್ಯೆಗೆ ಪರಿಹಾರ ಸಾಧ್ಯ ಎಂದು ಹೇಳಿದರು.

ಎಲ್ಲರೂ ಎಚ್ಚರವಾಗಿರಿ, ಯೋಚಿಸಿ ಮರುಯೋಚಿಸಿ, ಕೋಡಿಂಗ್ ಮತ್ತು ರಿಕೋಡಿಂಗ್ ಮಾಡುವುದು ಬಹಳ ಮುಖ್ಯ. ನಿಮಗೆ ಸಮಸ್ಯೆ ಪರಿಹರಿಸುವ ಶಕ್ತಿ ಇದೆ. ದೇಶದ ರಕ್ಷಣೆಗಾಗಿ ಅವಕಾಶಗಳು ಬಂದಾಗ ಎಲ್ಲರೂ ಸದುಪಯೋಗಪಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ನಾಗಾರ್ಜುನ ಗ್ರೂಪ್ ಆಫ್ ಇನ್ಸಿಟ್ಯೂಷನ್ಸ್‌ನ ನಿರ್ದೇಶಕರಾದ ಡಾ.ಎ.ಜಿ.ಗೋಪಾಲಕೃಷ್ಣ, ಎನ್.ಸಿ.ಇ.ಟಿ ಪ್ರಾಂಶುಪಾಲರಾದ ಡಾ.ತಿಪ್ಪೇಸ್ವಾಮಿ, ಆಡಳಿತ ಮಂಡಳಿ ಪ್ರಮುಖರಾಗಿ ಕಿಶನ್, ದಾಖಲಾತಿ ವಿಭಾಗದ ಶಿಬು, ಡಾ.ಯೋಗೇಶ, ಡಾ.ಸರ್ವೇಶ್, ಡಾ.ಗೋಪಿನಾಥ್, ಡಾ.ಲೋಹಿತ್, ಡಾ.ವೆಂಕಟೇಶ್, ಡಾ.ಗೋವರ್ಧನಸ್ವಾಮಿ, ಡಾ.ಮಹೇಶ್ ಕೆ ಕೆ ಹಾಗೂ ಕಾಲೇಜು ಸಿಬ್ಬಂದಿ ವರ್ಗ, ವಿದ್ಯಾರ್ಥಿಗಳು ಹಾಜರಿದ್ದರು.

# ಜನ ಸೇವಕನಾಗಿ ಕೆಲಸ ಮಾಡಿದ ವ್ಯಕ್ತಿ ಜನ ನಾಯಕನಾಗುತ್ತಾನೆ

**ಚಿಕ್ಕಮಗಳೂರು:** ಜನಸೇವಕನಾಗಿ ಕೆಲಸ ಮಾಡಿದ ವ್ಯಕ್ತಿಯನ್ನು ಜನತೆ ಜನನಾಯಕನನ್ನಾಗಿ ಮಾಡುತ್ತಾರೆ ಎಂದು ಶಾಸಕ ಹೆಚ್.ಡಿ. ತಮ್ಮಯ್ಯ ಅಭಿಪ್ರಾಯಿಸಿದರು.

ಅವರು ತಮ್ಮ ನಿವಾಸದಲ್ಲಿ ಜಿಲ್ಲಾ ಶ್ರೀ ನಾರಾಯಣಗುರು ಸಮಿತಿ ಪದಾಧಿಕಾರಿಗಳು ನೀಡಿದ ಗೌರವವನ್ನು ಸ್ವೀಕರಿಸಿ ಮಾತನಾಡಿ, ತಾನು ಅಜಾದ್ ಗಣಪತಿ ಸೇವಾ ಸಮಿತಿಯಲ್ಲಿ ಸಾರ್ವಜನಿಕವಾಗಿ ಸೇವೆ ಆರಂಭಿಸಿದ್ದು, ಇಂದು ಶಾಸಕನಾಗಿ ಆಯ್ಕೆಯಾಗಲು ಜನರ ಆಶೀರ್ವಾದ ಕಾರಣ ಎಂದು ಹೇಳಿದರು.

ಎಲ್ಲಾ ವರ್ಗದ ಜನರನ್ನು ಸಮಾನತೆಯಿಂದ ಕಾಣುವ ಜೊತೆಗೆ ಬುದ್ಧ, ಬಸವ, ಅಂಬೇಡ್ಕರ್, ಕನಕದಾಸರು ಮುಂತಾದ ದಾರ್ಶನಿಕರ ತತ್ವಾದರ್ಶಗಳಿಂದ ಪ್ರಭಾವಿತನಾಗಿದ್ದೇನೆ ಎಂದು ಹೇಳಿದರು.

ಸಮ ಸಮಾಜದ ನಿರ್ಮಾಣ, ಸ್ವಾಸ್ಥ್ಯ ಸಮಾಜ ನಿರ್ಮಾಣ ಹಾಗೂ ಶೋಷಿತ ವರ್ಗದ ಜನರನ್ನು ಸಮಾಜದ ಮುನ್ನಲೆಗೆ ತರಬೇಕೆಂಬ ನಿಟ್ಟಿನಲ್ಲಿ ಮಹಾನ್ ದಾರ್ಶನಿಕರು ಹೋರಾಟ ಮಾಡಿದ್ದಾರೆ ಎಂದರು.

ಕೇರಳದಿಂದ ನಾರಾಯಣ ಗುರುಗಳು ಕಾಲ್ನಡಿಗೆಯಲ್ಲಿ ಆಗಮಿಸದಿದ್ದರೆ ಈಶ್ವರ ದೇವಾಯಲಯಗಳು ನಿರ್ಮಾಣವಾಗುತ್ತಿರಲಿಲ್ಲ, ದೇವಸ್ಥಾನಕ್ಕೆ



ಅವರಿಗೆ ಪ್ರವೇಶ ನೀಡದ ವಿರುದ್ಧ ಹೋರಾಟ ಮಾಡಿದ ಮಹಾನ್ ಪುರುಷರ ವಿಚಾರಧಾರೆಗಳನ್ನು ಮುಂದುವರೆಸುವುದು ದೊಡ್ಡ ಕಾಯಕ ಎಂದು ತಿಳಿಸಿದರು.ಜಿಲ್ಲಾ ಶ್ರೀ ನಾರಾಯಣಗುರು ಸಮಿತಿ ಅಧ್ಯಕ್ಷ ಕೃಷ್ಣಪ್ಪ ಮಾತನಾಡಿ, ಸಮಿತಿ ಮನವಿ ಮೇರೆಗೆ ಶಾಸಕ ಹೆಚ್.ಡಿ. ತಮ್ಮಯ್ಯ ಅವರು 20 ಲಕ್ಷ ರೂ. ಅನುದಾನವನ್ನು ನೀಡುವ ಮೂಲಕ ಈಡಿಗ ಜನಾಂಗವನ್ನು ಗುರ್ತಿಸಿರುವುದು ಅಭಿನಂದನೀಯ ಎಂದರು.ನಾರಾಯಣ ಗುರುಗಳು ಇರುವ ಈಡಿಗ ಸಮಾಜವನ್ನು ಕೈಬಿಡಬೇಡಿ, ನಿಮ್ಮೊಂದಿಗೆ ಸಮಾಜ ಸದಾ ಇರುತ್ತದೆ ಎಂದು ಭರವಸೆ ನೀಡಿದ ಅವರು, ಸಾಲ ಮಾಡಿ ಸಮಾಜದವರಿಂದ ದೇಣಿಗೆ ಸಂಗ್ರಹಿಸಿ ಹಲವಾರು ವರ್ಷಗಳಿಂದ ನಿರ್ಮಾಣ ಹಂತದಲ್ಲಿರುವ ನಗರ ಗೃಹ ನಿರ್ಮಾಣ ವಿವಿದೋದ್ದೇಶ ಸಹಕಾರ ಸಂಘದ ಕಟ್ಟಡಕ್ಕೆ ಶಾಸಕರು ಅನುದಾನ ನೀಡಿರುವುದು ಶ್ಲಾಘನೀಯ ಎಂದರು.

ಈ ಸಂದರ್ಭದಲ್ಲಿ ಪ್ರಧಾನ ಕಾರ್ಯದರ್ಶಿ ಶ್ರೀನಿವಾಸ ಮಾಯಪ್ಪ, ಖಜಾಂಚಿ ಕೆ.ಪಿ.ಸುರೇಶ್, ಗೌರವ ಕಾರ್ಯದರ್ಶಿಗಳಾದ ಕೆ.ಎಂ.ಗುಣಶೇಖರ್, ಕೆ.ಸಿ.ಶಾಂತಕುಮಾರ್, ಕೆ.ರಾಮು, ಕೆ.ಅಯ್ಯಪ್ಪ, ಚಂದ್ರಣ್ಣ ಕೋಟೆ, ಉಪಾಧ್ಯಕ್ಷರುಗಳಾದ ಎಂ.ರಾಜು, ಸಿ.ಆರ್. ಕುಮಾರ್, ಕೆ.ಅಶೋಕ್, ಎಂ.ಶರತ್, ಸಹಕಾರ್ಯದರ್ಶಿಗಳಾದ ಎಸ್.ಪಿ.ದೀಪಕ್, ಪ್ರಭಾಕರ್, ಸುದೀಪ್, ಉದಯ್, ಕೆ.ಮೋಹನ್, ಮಂಜು, ರವಿ ಮತ್ತಿತರರು ಉಪಸ್ಥಿತರಿದ್ದರು.

# ಕಲಾಕುಂಚದಿಂದ ಸಂಕ್ರಾಂತಿ ಪ್ರಯುಕ್ತ ಉಚಿತ ರಾಜ್ಯ ಮಟ್ಟದ ಕವಿಗೋಷ್ಠಿಗೆ ಆಹ್ವಾನ

**ದಾವಣಗೆರೆ:** ದಾವಣಗೆರೆಯ ಕಲಾಕುಂಚ ಸಾಂಸ್ಕೃತಿಕ ಸಂಸ್ಥೆಯ ಆಶ್ರಯದಲ್ಲಿ ಪ್ರತೀ ವರ್ಷದಂತೆ ಈ ವರ್ಷವೂ ಸಂಕ್ರಾಂತಿ ಪ್ರಯುಕ್ತ ರಾಜ್ಯ ಮಟ್ಟದ ಉಚಿತ ಕವಿಗೋಷ್ಠಿ ಹಮ್ಮಿಕೊಳ್ಳಲಾಗಿದೆ ಎಂದು ಸಂಸ್ಥೆಯ ಸಂಸ್ಥಾಪಕರಾದ ಸಾಲಿಗ್ರಾಮ ಗಣೇಶ್ ಶೆಣೈ ತಿಳಿಸಿದ್ದಾರೆ.

ದಿನಾಂಕ 11–01–2026ರಂದು ಭಾನುವಾರ ಬೆಳಿಗ್ಗೆ ದಾವಣಗೆರೆಯ ಕಲಾಕುಂಚ ಕಛೇರಿ ಸಭಾಂಗಣದಲ್ಲಿ ನಡೆಯುವ ಈ ಕವಿಗೋಷ್ಠಿಯಲ್ಲಿ ಭಾಗವಹಿಸುವವರು 31–12–2025 ರೊಳಗೆ ಈ ಕೆಳಗಿನ ವ್ಯಾಟ್ಸಪ್ ಸಂಖ್ಯೆಗೆ ಹೆಸರು ನೊಂದಾಯಿಸಬಹುದು ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಕೆ.ಸಿ.ಉಮೇಶ್ ವಿನಂತಿಸಿದ್ದಾರೆ.

ರಾಜ್ಯ ಮಟ್ಟದ ಕವಿಗೋಷ್ಠಿಯಲ್ಲಿ ಭಾಗವಹಿಸುವವರಿಗೆ ಅಭಿನಂದನಾ ಪತ್ರ, ಕನ್ನಡತಾಯಿ ಭುವನೇಶ್ವರಿಯ ಸ್ಮರಣಿಕೆ ಹಾಗೂ ಕಾವ್ಯಕುಂಚ 5ನೇ ಭಾಗದ ಕವನ ಸಂಕಲನ ವೇದಿಕೆಯಲ್ಲಿ ವಿತರಿಸಲಾಗುವುದು. ಹೆಸರು ನೊಂದಾಯಿಸುವ ವ್ಯಾಟ್ಸಪ್ ಸಂಖ್ಯೆ ಶ್ರೀಮತಿ ಮಂಜುಳಾ ಪ್ರಸಾದ್ ಬಂಗೇರ 9743377517

# ಜಮೀನು ಬಗ್ಗೆ ಆಕ್ಷೇಪಣೆ ಆಹ್ವಾನ

**ಚಿಕ್ಕಮಗಳೂರು:** ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮದ ಭೂ ಒಡೆತನ ಯೋಜನೆಯಡಿ ಭೂಮಾಲೀಕರಿಂದ ಭೂರಹಿತ ಮಹಿಳೆಯರಿಗೆ ನಿಗಮದಿಂದ ಜಮೀನು ಖರೀದಿಸಿ ವಿತರಣೆ ಮಾಡಬೇಕಾಗಿರುವುದರಿಂದ ಮೂಡಿಗೆರೆ ತಾಲ್ಲೂಕು ಜೆ.ಎಂ.ರಸ್ತೆಯ ಪುಟ್ಟಯ್ಯ ಎಂಬುವವರ ಮಗ ಸುರೇಶ್ ಪಿ. ಎಂಬುವವರ (ಸರ್ವೆ ನಂ.85, 02.10 ವಿಸ್ತೀರ್ಣ) ಜಮೀನಿನ ಮೇಲೆ ಏನಾದರೂ ತಕರಾರು, ಆಕ್ಷೇಪಣೆಗಳು ಇದ್ದಲ್ಲಿ ಸಂಬಂಧಪಟ್ಟವರು ಏಳು ದಿನಗಳ ಒಳಗಾಗಿ ದೂರುಗಳನ್ನು ಸಲ್ಲಿಸಬಹುದು ಎಂದು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಿಧನ ಸುದ್ದಿಗಳು

### ಕೆ.ಎಂ. ಗುರು ಬಸವರಾಜ ನಿಧನ

**ತುಮಕೂರು** : ಜಿಲ್ಲೆಯ ವಾಸಿ ನಿವೃತ್ತ ತಹಶೀಲ್ದಾರ್ ದಾವಣಗೆರೆ ಕೆ.ಎಂ. ಗುರುಬಸವರಾಜ ಅವರು, ದಿನಾಂಕ : 08.12.2025 ರ ಸೋಮವಾರ ಸಂಜೆ 5 ಗಂಟೆಗೆ ನಿಧನರಾದರು. ಪತ್ನಿ, ಓರ್ವ ಪುತ್ರ, ಸೊಸೆ, ಮೊಮ್ಮಕ್ಕಳು ಹಾಗೂ ಅಪಾರ ಬಂಧು–ಬಳಗವನ್ನು ಅಗಲಿರುವ ಮೃತರ ಅಂತ್ಯಕ್ರಿಯೆಯು ದಿನಾಂಕ : 09.12.2025ರ ಮಂಗಳವಾರ ಮಧ್ಯಾಹ್ನ 1 ಗಂಟೆಗೆ ತುಮಕೂರು ಜಿಲ್ಲೆಯ, ವೀರಶೈವ ರುದ್ರಭೂಮಿ ಕುಣಿಗಲ್ ರಸ್ತೆ, ಹತ್ತಿರ ನೆರವೇರಿದೆ.

### ನಲ್ಲೂರು ಜಯರತ್ನ ನಿಧನ

**ದಾವಣಗೆರೆ:** ಕೆ.ಬಿ. ಬಡಾವಣೆ ವಾಸಿ ದಿ. ನಲ್ಲೂರು ಜಯಣ್ಣನವರ ಧರ್ಮಪತ್ನಿ ಶ್ರೀಮತಿ ನಲ್ಲೂರು ಜಯರತ್ನ (73) ಇವರು ದಿನಾಂಕ 08.12.2025ರ ಸೋಮವಾರ ಮಧ್ಯಾಹ್ನ 2ಕ್ಕೆ ನಿಧನರಾದರು. ಓರ್ವ ಪುತ್ರ, ಇಬ್ಬರು ಪುತ್ರಿಯರು, ಅಳಿಯಂದಿರು, ಮೊಮ್ಮಕ್ಕಳು ಹಾಗೂ ಅಪಾರ ಬಂಧು ಬಳಗವನ್ನು ಅಗಲಿರುವ ಮೃತರ ಅಂತ್ಯಕ್ರಿಯೆಯು ದಿನಾಂಕ 09.12.2025ರ ಮಂಗಳವಾರ ಬೆಳಿಗ್ಗೆ 11ಕ್ಕೆ ಬೂದಾಳ್ ರಸ್ತೆಯ ಸಾರ್ವಜನಿಕ 'ಹಿಂದೂ ರುದ್ರಭೂಮಿಯಲ್ಲಿ ನೆರವೇರಿದೆ.

### ಕೆ.ಎಂ. ಶಿವಮೂರ್ತಿ ನಿಧನ

**ದಾವಣಗೆರೆ:** ಎಂ.ಎಂ. ಶಿಕ್ಷಣ ಮಹಾವಿದ್ಯಾಲಯದ ನಿವೃತ್ತ ಉಪನ್ಯಾಸಕರಾದ ಶ್ರೀ ಕೆ.ಎಂ. ಶಿವಮೂರ್ತಿ ಅವರು ದಿನಾಂಕ 08–12–2025ರ ಸೋಮವಾರ ರಾತ್ರಿ 8.30ಕ್ಕೆ ನಿಧನರಾದರೆಂದು ತಿಳಿಸಲು ವಿಷಾದಿಸುತ್ತೇವೆ. ಮೃತರಿಗೆ ಸುಮಾರು 81 ವರ್ಷ ವಯಸ್ಸಾಗಿತ್ತು. ಓರ್ವ ಪುತ್ರ, ಇಬ್ಬರು ಪುತ್ರಿಯರು, ಸೊಸೆ, ಅಳಿಯಂದಿರು, ಇಬ್ಬರು ಮೊಮ್ಮಕ್ಕಳು ಹಾಗೂ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಮೃತರ ಪಾರ್ಥಿವ ಶರೀರವನ್ನು ವಿದ್ಯಾನಗರ (ತರಳಬಾಳು ಬಡಾವಣೆ) 2ನೇ ಮುಖ್ಯರಸ್ತೆ, 7ನೇ ತಿರುವಿನಲ್ಲಿರುವ (ಮನೆ ನಂ. 1162) ಅವರ ಸ್ವಗೃಹದಲ್ಲಿ ದಿನಾಂಕ 09–12–2025ರ ಬೆಳಿಗ್ಗೆ 10.30ರವರೆಗೆ ಇರಿಸಲಾಗುವುದು. ನಂತರ ಬೆಳಿಗ್ಗೆ 11 ಗಂಟೆಗೆ ಎಸ್.ಎಸ್. ಹೈಟೆಕ್ ಆಸ್ಪತ್ರೆಗೆ ದೇಹದಾನ ಮಾಡಲಾಯಿತು.

# ಮುಗುಳುವಳ್ಳಿ ಗ್ರಾಮ ಪಂಚಾಯಿತಿಗೆ ಸುಭದ್ರ ಗ್ರಾಮ ಪಂಚಾಯಿತಿ ಪುರಸ್ಕಾರ



**ಚಿಕ್ಕಮಗಳೂರು:** ಮುಗುಳುವಳ್ಳಿ ಗ್ರಾಮ ಪಂಚಾಯಿತಿಗೆ ಭದ್ರ ಬಾಲ್ಯ ಕಾರ್ಯಕ್ರಮದ ಯಶಸ್ವಿ ಅನುಷ್ಠಾನಕ್ಕಾಗಿ ಸುಭದ್ರ ಗ್ರಾಮ ಪಂಚಾಯಿತಿ ಪುರಸ್ಕಾರವನ್ನು ಜಿಲ್ಲಾ ಉಸ್ತುವಾರಿ ಸಚಿವ ಜಾರ್ಜ್, ಜಿಲ್ಲಾಧಿಕಾರಿ ಸಿ.ಎನ್.ಮೀನಾ ನಾಗರಾಜ್ ಜಿ.ಪಂ. ಕಾರ್ಯ ನಿರ್ವಹಣಾಧಿಕಾರಿ ಹೆಚ್.ಎಸ್.ಕೀರ್ತನಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ವಿಕ್ರಮ್ ಅಮಟೆ, ಅಪರ ಜಿಲ್ಲಾಧಿಕಾರಿ ನಾರಾಯಣ ರಡ್ಡಿ ಕನಕರಡ್ಡಿ, ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಶೃತಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಾದ ಸುಮಾ ರವರಿಗೆ ಪ್ರಶಸ್ತಿ ವಿತರಿಸಿದರು.

## ಬೀದಿ ನಾಯಿಗಳನ್ನು ದತ್ತು ಪಡೆಯಲು ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** ಸರ್ವೋಚ್ಚ ನ್ಯಾಯಾಲಯದ ಆದೇಶದನ್ವಯ ಚಿಂತಾಮಣಿ ನಗರ ವ್ಯಾಪ್ತಿಯಲ್ಲಿ ಬರುವ ಬೀದಿ ನಾಯಿಗಳ ನಿರ್ವಹಣೆ ಹಾಗೂ ಸಂಬಂಧಿಸಿದ ನಾಯಿಗಳನ್ನು ಸಾಕಲು ಸಾರ್ವಜನಿಕರು ಅಥವಾ ಸಂಘ ಸಂಸ್ಥೆಗಳವರು ಬೀದಿ ನಾಯಿಗಳನ್ನು ದತ್ತು ನೀಡಲು/ಪಡೆಯಲು ನಿಯಮಾನುಸಾರ ಕ್ರಮ ವಹಿಸಾಗುವುದು. ದತ್ತು ಪಡೆಯಲು ಇಚ್ಛೆಯುಳ್ಳ ವ್ಯಕ್ತಿ ಅಥವಾ ಸಂಸ್ಥೆಗಳವರು ಆಸಕ್ತಿ ಇದ್ದವರು ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಚಿಂತಾಮಣಿ ನಗರಸಭೆಯನ್ನು ಸಂಪರ್ಕಿಸಬಹುದೆಂದು ಚಿಂತಾಮಣಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಹೆಲಿಟೂರಿಸಂನಿಂದ ಪರಿಸರ ಸೂಕ್ಷ್ಮ ಪ್ರದೇಶಕ್ಕೆ ಮತ್ತೆ ಸಂಚಕಾರವೇ?

# ಪರಿಸರ ಸಂಘಟನೆಗಳಿಂದ ತೀವ್ರ ವಿರೋಧ

**ಚಿಕ್ಕಮಗಳೂರು:** ಅತ್ಯಂತ ಪರಿಸರ ಸೂಕ್ಷ್ಮ ಸ್ಥಳಗಳನ್ನು ಹೊಂದಿರುವ ಚಿಕ್ಕಮಗಳೂರು ಜಿಲ್ಲೆಯಲ್ಲಿ ಪರಿಸರದ ಮೇಲೆ ಆಗುವ ದುಷ್ಪರಿಣಾಮಗಳನ್ನು ಗಣನೆಗೆ ತೆಗೆದುಕೊಳ್ಳದೆ ಜಿಲ್ಲಾ ಪ್ರವಾಸೋದ್ಯಮ ಅಭಿವೃದ್ಧಿ ಸಮಿತಿಯಿಂದ ಕ್ರಿಸ್‌ಮಸ್ ಮತ್ತು ಹೊಸ ವರ್ಷದ ಹೆಸರಿನಲ್ಲಿ ಮತ್ತೊಮ್ಮೆ ಹೆಲಿ ಟೂರಿಸಂಗೆ ನಿರ್ಧರಿಸಿದ್ದು, ಈ ತೀರ್ಮಾನವನ್ನು ಪರಿಸರ ಪ್ರೇಮಿಗಳು ತೀವ್ರವಾಗಿ ಆಕ್ಷೇಪಿಸಿದ್ದಾರೆ. ಭದ್ರಾ ವೈಲ್ಡ್‌ಲೈಫ್ ಕನ್ಸರ್ವೇಶನ್ ಟ್ರಸ್ಟ್‌ನ ಮುಖ್ಯಸ್ಥ ಡಿ.ವಿ.ಗಿರೀಶ್, ರಾಜ್ಯ ವನ್ಯಜೀವಿ ಮಂಡಳಿ ಮಾಜಿ ಸದಸ್ಯ ಸ.ಗಿರಿಜಾಶಂಕರ ಹಾಗೂ ವೈಲ್ಡ್ ಕ್ಯಾಟ್–ಸಿ., ಮುಖ್ಯಸ್ಥ ಹಾಗೂ ಮಾಜಿ ಗೌರವ ವನ್ಯಜೀವಿ ಪರಿಪಾಲಕ ಶ್ರೀದೇವ್ ಹುಲಿಕೆರೆ ಹೆಲಿಟೂರಿಸಂಗೆ ತೀವ್ರ ವಿರೋಧ ವ್ಯಕ್ತಪಡಿಸಿ ಹೇಳಿಕೆಯೊಂದನ್ನು ಬಿಡುಗಡೆ ಮಾಡಿದ್ದು, 2024ರಲ್ಲಿ ಈ ಯೋಜನೆ ಕಾರ್ಯಗತಗೊಳ್ಳುವ ಸಂಭವವಿದ್ದಾಗ ತಾವು ವಿರೋಧಿಸಿರುವುದನ್ನು ನೆನಪಿಸಿದ್ದಾರೆ.

ಮಾಹಿತಿ ಪ್ರಕಾರ ಡಿಸೆಂಬರ್ 13 ರಿಂದ 19 ರವರೆಗೆ ಚಿಕ್ಕಮಗಳೂರು ತಾಲ್ಲೂಕಿನ ಗಿರಿಭಾಗದ ವೀಕ್ಷಣೆ, ಡಿಸೆಂಬರ್ 20 ರಿಂದ 22 ರವರೆಗೆ ಮೂಡಿಗೆರೆ, ಡಿ.23 ರಂದು ಮೂಡಿಗೆರೆ ತಾಲ್ಲೂಕಿನ ಸುಂಕಸಾಲೆ, ಡಿ.24 ಮತ್ತು 25 ರಂದು ಕಳಸ ಹಾಗೂ ಡಿ.26 ರಿಂದ ಜನವರಿ 6ರವರೆಗೆ ಮತ್ತೆ ಗಿರಿಭಾಗ – ಹೀಗೆ ಹೆಲಿಟೂರಿಸಂಗೆ ದಿನಾಂಕಗಳನ್ನು ನಿಗದಿಪಡಿಸಲಾಗಿದೆ. ಈ ಎಲ್ಲ ಸ್ಥಳಗಳು ಪರಿಸರ ಸೂಕ್ಷ್ಮವಾಗಿದ್ದು, ಇಲ್ಲಿ ಈ ರೀತಿ 'ಜಾಯ್‌ರೈಡ್' ಮಾಡುವುದರಿಂದ ಜನರಿಗೇನೋ ಮನರಂಜನೆ ಸಿಗಬಹುದು; ಕೆಲವು ಖಾಸಗಿ ಕಂಪನಿಗಳಿಗೆ ಲಾಭವಾಗಬಹುದು. ಆದರೆ ಈ ಅವೈಜ್ಞಾನಿಕ ಕ್ರಮದಿಂದ ವನ್ಯಪ್ರಾಣಿಗಳ ಸ್ವೇಚ್ಛೆಗೆ ಸಂಚಕಾರವಾಗದೇ?. ಈಗಾಗಲೇ ವನ್ಯಜೀವಿ–ಮಾನವ ಸಂಘರ್ಷದಿಂದ ಸಾಕಷ್ಟು ತತ್ತರಿಸಿದ್ದೇವೆ. ಇಷ್ಟಾಗಿಯೂ ಬುದ್ಧಿ ಕಲಿಯದಿದ್ದರೆ ಇದಕ್ಕೇನನ್ನಬೇಕು ಎಂದು ಅವರು ಪ್ರಶ್ನಿಸಿದ್ದಾರೆ.

ಪ್ರವಾಸೋದ್ಯಮವನ್ನು ಉತ್ತೇಜಿಸುವ ಭರದಲ್ಲಿ ಮುಳ್ಳಯ್ಯನಗಿರಿ ಹಾಗೂ ಅದಕ್ಕೆ ಹೊಂದಿಕೊಂಡಿರುವ ಗಿರಿಶ್ರೇಣಿಗಳ ಸೂಕ್ಷ್ಮತೆ ಅರ್ಥ ಮಾಡಿಕೊಳ್ಳುವಲ್ಲಿ ನಮ್ಮ ವ್ಯವಸ್ಥೆ ಸಂಪೂರ್ಣ ವಿಫಲವಾಗಿದೆ. ರಾಜ್ಯದಲ್ಲೇ ಅತೀ ಎತ್ತರದ ಮುಳ್ಳಯ್ಯನಗಿರಿ ಪಶ್ಚಿಮಘಟ್ಟದ ವಿಶೇಷತೆಯಾದ ಶೋಲಾ ಕಾಡುಗಳನ್ನು ತನ್ನ ಇಳಿಜಾರಿನಲ್ಲಿ ಹೊಂದಿದ್ದು, ಕಾಡುಗಳ ಪಕ್ಕದಲ್ಲೇ ಅತ್ಯಂತ ಎತ್ತರದ ಹುಲ್ಲು ಬೆಳೆಯುವ ಪ್ರದೇಶವೂ ಆಗಿದೆ. ಬಹು ಮುಖ್ಯವಾಗಿ ಹೊನ್ನಮ್ಮನಹಳ್ಳ, ಹೆಬ್ಬೇಹಳ್ಳ, ತಡಬೇಹಳ್ಳ, ವಾಟೇಹಳ್ಳ ನೀರಿನ ಮೂಲವೂ ಆಗಿದ್ದು, ಈ ಹಳ್ಳಗಳ ನೀರು ಭದ್ರಾ ನದಿಯ ಉಪನದಿಯಾದ ಸೋಮವಾಹಿನಿಯನ್ನು ಸೇರುತ್ತಿದೆ. ಇಲ್ಲಿ ವೇದಾ ನದಿ ಹುಟ್ಟುತ್ತದಲ್ಲದೆ, ಮದಗದಕೆರೆ ಮತ್ತು ಅಯ್ಯನಕೆರೆಗೂ ನೀರುಣಿಸುವ ಜಲಮೂಲ ಹೊಂದಿದೆ. ಹಾಗೆಯೇ ಮುಳ್ಳಯ್ಯನಗಿರಿ ಅದರ ತಗ್ಗಿನ ಅನೇಕ ಗ್ರಾಮಗಳಿಗೆ ನೀರುಣಿಸುತ್ತದೆ ಎಂದಿದ್ದಾರೆ.

ಬಹುಮುಖ್ಯವಾಗಿ ಈ ಬೆಟ್ಟ ಪ್ರದೇಶಕ್ಕೆ ಮಧ್ಯ ಏಷ್ಯಾ, ಹಿಮಾಲಯದಿಂದ ಚಳಿಗಾಲದಲ್ಲಿ ವಲಸೆ ಬರುವ ಹಕ್ಕಿಗಳಿಗೆ ಹಾಗೂ ಇಲ್ಲೇ ಕಾಣಸಿಗುವ ಹಕ್ಕಿಗಳು ಸಂತಾನ ಬೆಳೆಸಲು ಗೂಡು ಕಟ್ಟುತ್ತವಲ್ಲದೆ, ಸಮೃದ್ಧ ಆಹಾರದ ಬೇಟೆಗೂ ಈ ಸ್ಥಳ ಅತ್ಯಂತ ಅವಲಂಬಿತ ಪ್ರದೇಶವಾಗಿದೆ. ಹುಲಿ, ಚಿರತೆಗಳ ಓಡಾಟದ ಜೊತೆಗೆ ಹುಲ್ಲುಗಾವಲು ಹಾಗೂ ಶೋಲಾ ಕಾಡುಗಳನ್ನೇ ಆಶ್ರಯಿಸುವ ಕಾಟಿ, ಕಡವೆ ಹಾಗೂ ಕೆಂದಳಿಲುಗಳು ಇವೆ. ಶಬ್ದಕ್ಕೆ ಬಹುಬೇಗ ಸ್ಪಂದಿಸಿ ಆತಂಕಕ್ಕೆ ಒಳಗಾಗುವ ಹಲವು ಪ್ರಭೇದದ ಕಪ್ಪೆ ಮತ್ತು ಹಾವಿಗೂ ಇದು ಆಶ್ರಯತಾಣವಾಗಿದೆ ಎಂದು ಹೇಳಿದ್ದಾರೆ.

ಜೀವ ವೈವಿಧ್ಯತೆ ಹಾಗೂ ಸಸ್ಯ ವೈವಿಧ್ಯತೆಯ ಸೂಕ್ಷ್ಮ ಬೆಟ್ಟ ಪ್ರದೇಶದಲ್ಲಿ ಹೆಲಿಕ್ಯಾಪ್ಟರ್ ಹಾರಾಟದಿಂದ ಆಗುವ ಕಂಪನ ಹಾಗೂ ಶಬ್ದ, ಗಾಳಿಯಲ್ಲಾಗುವ ಬದಲಾವಣೆ ಪ್ರಾಣಿ–ಪಕ್ಷಿಗಳ ನಿರಾತಂಕ ಬದುಕಿಗೆ ಧಕ್ಕೆ ತರುವುದಲ್ಲದೆ, ಜನರ ಗದ್ದಲವೂ ಸಹ ಪರಿಸರ ಸೂಕ್ಷ್ಮತೆಗೆ ಹೆಚ್ಚಿನ ಘಾಸಿ ಉಂಟು ಮಾಡಲಿದೆ. ಈಗಾಗಲೇ ಜನ–ವಾಹನಗಳ ಅಧಿಕ ಓಡಾಟ, ಘನ ತ್ಯಾಜ್ಯ ಹಾಗೂ ನೀರಿನ ಮೂಲ ಕಲುಷಿತಗೊಂಡಿರುವುದನ್ನು ತಡೆಗಟ್ಟುವಲ್ಲಿ ಪ್ರವಾಸೋದ್ಯಮ ಇಲಾಖೆ ವಿಫಲವಾಗಿದೆ. ಹೀಗಿರುವಲ್ಲಿ ಹೆಲಿಕ್ಯಾಪ್ಟರ್ ಹಾರಾಟ ವನ್ಯಜೀವಿಗಳ ಮೇಲೆ ಅತ್ಯಂತ ವ್ಯತಿರಿಕ್ತ ಪರಿಣಾಮ ಉಂಟು ಮಾಡಲಿದೆ ಎಂದು ಅವರು ಹೇಳಿದ್ದಾರೆ. ಮೂಡಿಗೆರೆ ಹಾಗೂ ಸುಂಕಸಾಲೆ ಭಾಗದಲ್ಲಿ ಮೀಸಲು ಅರಣ್ಯ ಪ್ರದೇಶಗಳಿದ್ದು, ಅಲ್ಲೂ ಕೂಡ ಹೆಲಿಟೂರಿಸಂನಿಂದ ವನ್ಯಜೀವಿಗಳಿಗೆ ಸಮಸ್ಯೆಯಾಗಲಿದೆ. ಜಿಲ್ಲಾಡಳಿತ ಹೆಲಿ ಟೂರಿಸಂ ಕೈಬಿಟ್ಟು ಜಿಲ್ಲೆಯ ಸೂಕ್ಷ್ಮ ಪ್ರದೇಶಗಳ ಪ್ರಾಮುಖ್ಯತೆ ಅರಿತು ರಕ್ಷಿಸಲು ಮುಂದಾಗಬೇಕು. ಇಲ್ಲಿ ಹುಟ್ಟಿ ಹರಿಯುವ ಜಲಮೂಲಗಳ ಮಾಲಿನ್ಯ ತಡೆಯಲು ಮುಂದಾಗಬೇಕೆಂದು ಅವರು ಆಗ್ರಹಿಸಿದ್ದಾರೆ.

## ಡಿ.16ರಂದು ಪತ್ರ ಬರಹಗಾರರ ಸಮಸ್ಯೆ ಬಗೆಹರಿಸುವಂತೆ ಒತ್ತಾಯಿಸಿ ಬೆಳಗಾವಿ ಚಲೋ

**ದಾವಣಗೆರೆ:** ರಾಜ್ಯದ ಪತ್ರ ಬರಹಗಾರರಿಗೆ ಆಗುತ್ತಿರುವ ತೊಂದರೆ ನಿವಾರಿಸುವಂತೆ ಒತ್ತಾಯಿಸಿ ಕರ್ನಾಟಕ ರಾಜ್ಯ ನೋಂದಣಿ ಮತ್ತು ಮುದ್ರಾಂಕ ಇಲಾಖೆಯಿಂದ ಪರವಾನಿಗೆ ಪಡೆದ (ದಸ್ತು) ಪತ್ರ ಬರಹಗಾರರ ಒಕ್ಕೂಟವು ಡಿ.16ರಂದು ಬೆಳಗಾವಿ ಚಲೋ ಚಳವಳಿ ಕೈಗೊಳ್ಳಲು ನಿರ್ಧರಿಸಿದೆ.

ಸುದ್ದಿಗೋಷ್ಠಿಯಲ್ಲಿ ಒಕ್ಕೂಟದ ಅಧ್ಯಕ್ಷ ಡಿ.ಕೆ.ಸಂಗಮೇಶ ಎಲಿಗಾರ್ ಮಾತನಾಡಿ, ರಾಜ್ಯ ಸರ್ಕಾರವು ಡಿಜಲೀಕರಣದ ಹೆಸರಿನಲ್ಲಿ ಕಾವೇರಿ 1, ಕಾವೇರಿ 2 ತಂತ್ರಾಂಶಗಳನ್ನು ಜಾರಿಗೆ ತಂದಿದ್ದು, ಇದರ ಮುಂದುವರೆದ ಭಾಗವಾಗಿ ಕಾವೇರಿ 3 ತಂತ್ರಾಂಶದ ಮೂಲಕ ಫೇಸ್ ಲೆಸ್, ಪೇಪರ್ ಲೆಸ್ ನೋಂದಣಿಗೆ ಮುಂದಾಗಿದೆ. ಹೀಗಾದಲ್ಲಿ ಪತ್ರ ಬರಹಗಾರಿಗೆ ಯಾವುದೇ ರೀತಿಯ ಬರವಣಿಗೆ ಕಾರ್ಯ ಇಲ್ಲದಂತಾಗುತ್ತದೆ. ಪತ್ರಬರಹಗಾರರನ್ನು ಸಂಪೂರ್ಣ ತಟಸ್ಥ ಮಾಡಿದಂತಾಗುತ್ತದೆ. ಇದೇ ವೃತ್ತಿಯನ್ನೇ ಅವಲಂಬಿಸಿರುವ ರಾಜ್ಯದ ಸುಮಾರು 12 ಸಾವಿರ ಪತ್ರ ಬರಹಗಾರರು, ಸಹಾಯಕರುಗಳು ಮತ್ತವರ ಕುಟುಂಬ ವರ್ಗ ಅತಂತ್ರವಾಗಲಿದೆ ಎಂದು ಆತಂಕ ವ್ಯಕ್ತಪಡಿಸಿದರು.

ಹೊರ ರಾಜ್ಯದಲ್ಲಿರುವಂತೆ ಕರ್ನಾಟಕ ರಾಜ್ಯದಲ್ಲೂ ಕೂಡ ಪತ್ರ ಬರಹಗಾರರಿಗೆ ಪ್ರತ್ಯೇಕ ಲಾಗಿನ್ ನೀಡಬೇಕು. ನೋಂದಣಿಯಾಗುವ ಎಲ್ಲಾ ದಸ್ತಾವೇಜುಗಳಿಗೆ ಪತ್ರಬರಹಗಾರರ ಅಥವಾ ವಕೀಲ ಸಹಿ ಕಡ್ಡಾಯಗೊಳಿಸಬೇಕು. ಅನಧಿಕೃತ ವ್ಯಕ್ತಿಗಳನ್ನು ತಡೆಗಟ್ಟುವ ಜೊತೆಗೆ ಪತ್ರಬರಹಗಾರರಿಗೆ ಸರ್ಕಾರದಿಂದ ಅಧಿಕೃತ ಗುರುತಿನ ಚೀಟಿ ನೀಡಬೇಕು. ಕಾವೇರಿ ತಂತ್ರಾಂಶದಿಂದ ಆಗುತ್ತಿರುವ ಸಮಸ್ಯೆ ನಿವಾರಿಸಬೇಕು ಎಂದು ಅವರು ಆಗ್ರಹಿಸಿದರು.

ಸಂಘದ ಮುಖಂಡರಾದ ಧರ್ಮರಾಜ್, ಡಿ.ಆರ್.ಗಿರಿರಾಜು, ಈ.ಕೃಷ್ಣಮೂರ್ತಿ, ಕರಿಬಸಪ್ಪ ಬಳ್ಳಿ, ಬಿ.ವಿ.ಶಿವಾನಂದ, ಬಿ.ವಿ.ರಾಜಶೇಖರ ಇತರರು ಸುದ್ದಿಗೋಷ್ಠಿಯಲ್ಲಿದ್ದರು.

# ಗುರುಕುಲ ವಿದ್ಯಾಸಂಸ್ಥೆಯಲ್ಲಿ ಗ್ರಾಮೀಣ ಸೊಗಡು

**ಶಿವಮೊಗ್ಗ :** ನಗರದ ಪ್ರಮುಖ ಭಾಗವಾಗಿರುವ ನವುಲೆಯಲ್ಲಿನ ಗುರುಕುಲ ಆಂಗ್ಲ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಕಳೆದ ವೀಕ್ ಎಂಡ್‌ನ ಶನಿವಾರದಂದು ಹಳ್ಳಿ ವಾತಾವರಣ ಅನಾವರಣಗೊಂಡಿತ್ತು. ರಾಷ್ಟ್ರೀಯ ರೈತರ ದಿನಾಚರಣೆಯ ಪೂರ್ವಭಾವಿಯಾಗಿ ಗ್ರಾಮೀಣ ಸೊಗಡು ಎಂಬ ಪರಿಕಲ್ಪನೆಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಪ್ರೀ ಕೆಜಿಯಿಂದ ಹಿರಿಯ ಪ್ರಾಥಮಿಕ ಶಾಲೆಯವರೆಗಿನ ಮಕ್ಕಳಿಗೆ ಹಳ್ಳಿ ವಾತಾವರಣ ಪರಿಚಯಿಸಲಾಯಿತು.

ಎತ್ತಿನಗಾಡಿ, ಗುಡಿಸಲು, ಕೃಷಿಗೆ ಬಳಸುವ ಕುಂಟೆ, ನೇಗಿಲು, ಕೊಲ್ಡು, ಬಹುತೇಕ ಮನೆಗಳ ಭಾಗವಾಗಿದ್ದ ಒಳಕಲ್ಲು, ಬೀಸೋಕಲ್ಲು, ರುಬ್ಬುವ ಕಲ್ಲು, ಮರದ ಹಲಗೆ ಬಳಸಿ ಆಡುವ ಅಳಗುಳಿ ಮನೆ(ಚೆನ್ನೆಮಣೆ) ಹೀಗೆ ತರಹೇವಾರಿ ಪರಿಕರಗಳು, ಕೃಷಿ ಸಲಕರಣೆಗಳು ಮಕ್ಕಳ ಮನ ಸೆಳೆದವು. ಹಬ್ಬದ ಸಂಭ್ರಮವೆಂಬಂತೆ ಸಿಂಗಾರಗೊಂಡಿದ್ದ ಎತ್ತು–ಕುರಿ ಮಕ್ಕಳ ಮನಸ್ಸನ್ನು ಆಕರ್ಷಿಸಿತು. ಅಲ್ಲದೆ ವಿಭಿನ್ನ ವೇಷಭೂಷಣಗಳಲ್ಲಿ ಮಕ್ಕಳು ಕಂಗೊಳಿಸಿದರು.

ಮಕ್ಕಳು ಹಳ್ಳಿ ಬದುಕನ್ನು ಕೇವಲ ನೋಡಲಿಲ್ಲ, ಅದನ್ನು ಸ್ಪರ್ಶಿಸಿದರು. ಅದರಲ್ಲಿ ಶ್ವಾಸ ತೆಗೆದುಕೊಂಡರು. ಅದರ ಮೌಲ್ಯಗಳನ್ನು ಮನದಾಳದ ಕಮಲದಲ್ಲಿ ಹೂವಿನಂತೆ ನಾಟಿಕೊಂಡರು. ಆ ದಿನ ಶಾಲೆಯ ಮೈದಾನದಲ್ಲಿ




ಹೂಮೆಟ್ಟಿದ ಹಸಿರು ಹೊಲಗಳ ಗಾಳಿ ಬಡಿದಿದ್ದರೆ ಅದು ಗ್ರಾಮೀಣ ಸೊಗಡಿನ ಅಳಿವಿಲ್ಲದ ಯಶಸ್ಸಿನ ಪ್ರತಿಧ್ವನಿಯಾಗಿ ಹೊರಹೊಮ್ಮಿತು.

ಇದೇ ಸಂದರ್ಭದಲ್ಲಿ ನಡೆದ ವೇದಿಕೆ ಕಾರ್ಯಕ್ರಮಕ್ಕೆ ಕೃತಕ ಬಾವಿಯಲ್ಲಿ ನೀರು ಸೇದುವ ಮೂಲಕ ಸಾಮೂಹಿಕವಾಗಿ ಚಾಲನೆ ನೀಡಲಾಯಿತು.

ಅಧ್ಯಕ್ಷತೆ ವಹಿಸಿದ್ದ ಗುರುಕುಲ ವಿದ್ಯಾಸಂಸ್ಥೆಯ ಕಾರ್ಯದರ್ಶಿ ಜಿ.ಟಿ. ಶಿವರಾಜ್ ಮಾತನಾಡಿ ಆಧುನಿಕತೆಯ ಭರಾಟೆಯಲ್ಲಿ ಹಳ್ಳಿಯ ವಾತಾವರಣವೇ ಬದಲಾಗುತ್ತಿದೆ. ಹಿಂದಿನ ಉಡುಗೆ–ತೊಡುಗೆ, ಆಹಾರ ಪದ್ಧತಿ, ಕೃಷಿ, ಹೈನುಗಾರಿಕೆ, ಕ್ರೀಡೆ ಸೇರಿದಂತೆ ಗ್ರಾಮೀಣ ಸೊಗಡನ್ನು ಪ್ರತಿಬಿಂಬಿಸುವ ಪ್ರದರ್ಶನದ ಮೂಲಕ ನಗರದ ಮಕ್ಕಳಿಗೆ ನಮ್ಮ ಸಂಸ್ಕೃತಿ– ಪರಂಪರೆಯನ್ನು ಪರಿಚಯಿಸಿಕೊಡಬೇಕಾಗಿದೆ ಎಂದರು.

ಜಾನಪದ ಕಲೆ, ಸಾಂಪ್ರದಾಯಿಕ ಕ್ರೀಡೆಗಳಿಗೆ ಹಳ್ಳಿಗಳೇ ಮೂಲವಾಗಿವೆ. ಆದರೆ ಆಧುನಿಕತೆಯ ಪ್ರಭಾವದಿಂದಾಗಿ ಈ ಸೊಗಡು ಮರೆಯಾಗುತ್ತಿದೆ. ಹಳ್ಳಿ ಜನರು ಕೃಷಿ, ಹೈನುಗಾರಿಕೆ, ಸಾಂಪ್ರದಾಯಿಕ ಕಸುಬುಗಳನ್ನು ಬಿಟ್ಟು ನಗರ– ಪಟ್ಟಣಗಳಿಗೆ ವಲಸೆ ಹೋಗುತ್ತಿದ್ದಾರೆ. ಗ್ರಾಮೀಣ ಸೊಗಡನ್ನು ಉಳಿಸಿಕೊಳ್ಳಲು ಹಳೆಯ ಮೌಲ್ಯ ಮತ್ತು ಪರಂಪರೆಯನ್ನು ಪೋಷಿಸುವುದು ಅತ್ಯಗತ್ಯ ಎಂದು ಪ್ರತಿಪಾದಿಸಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಗುರುಕುಲ ಗ್ರಾಮಾಂತರ ಪಿಯು ಕಾಲೇಜಿನ ಉಪ ಪ್ರಾಂಶುಪಾಲರಾದ ಲಲಿತಾ ಅವರು ಹಳ್ಳಿ ಕೇವಲ ಒಂದು ಸ್ಥಳವಲ್ಲ, ನಮ್ಮ ಸಂಸ್ಕೃತಿಯ ಉಗಮಸ್ಥಾನ ಎಂದರು. ಗುರುಕುಲ ವಿದ್ಯಾಸಂಸ್ಥೆಯ ಮೂಲ ಸಂಸ್ಥಾಪಕ ಎಸ್.ವಿ. ಶಾಸ್ತ್ರಿ ಉಪಸ್ಥಿತರಿದ್ದರು.

ಟಿ.ಆರ್. ವಿದ್ಯಾ ಪ್ರಾರ್ಥನೆ ಮೂಲಕ ನಿಶ್ಶಬ್ದ ಶಾಂತಿ ನೀಡಿದರು. ಆರ್. ಗಾಯತ್ರಿ ಮಧುರ ಸ್ವಾಗತದಿಂದ ಮನ ಸೆಳೆದರು. ಅಕ್ಷತಾ ನಿರೂಪಣೆಯಿಂದ ಚೈತನ್ಯ ತುಂಬಿದರು. ವೈ. ಆಶಾ ವಂದನಾರ್ಪಣೆ ಮೂಲಕ ಕೃತಜ್ಞತೆಯ ಹೂವುಗಳನ್ನು ಅರಳಿಸಿದರು.

ಎಲ್ಲಾ ಶಿಕ್ಷಕ, ಶಿಕ್ಷಕೇತರ ವರ್ಗದವರ ಸಹಾಯದಿಂದ ಯಶಸ್ವಿಯಾಗಿ ಸಂಪನ್ನಗೊಂಡ ಈ ಕಾರ್ಯಕ್ರಮ ಸಂತೋಷ ತಂದಿತಲ್ಲದೆ, ಪೋಷಕರ ಮೊಗದಲ್ಲಿ ಮಂದಹಾಸ ಮೂಡಿಸಿತು. ನಿರೀಕ್ಷೆಗೂ ಮೀರಿದ ಯಶಸ್ಸನ್ನು ಈ ಕಾರ್ಯಕ್ರಮ ತಂದುಕೊಟ್ಟಿತು

### ಕನ್ನಡ ಯುವಶಕ್ತಿ ಕೇಂದ್ರದ ಕಾರ್ಯಕ್ರಮ

# ಕನ್ನಡದ ಪರಂಪರೆ ಬಗ್ಗೆ ಹೆಮ್ಮೆ ಬೆಳಸಿಕೊಳ್ಳಿ

**ಮಾಯಕೊಂಡ;** 'ಕನ್ನಡದ ಪರಂಪರೆ ಅಧ್ಯಯನ ಮಾಡಿ, ಕನ್ನಡದ ಬಗ್ಗೆ ಹೆಮ್ಮೆ ಬೆಳಸಿಕೊಳ್ಳಬೇಕು ಎಂದು, ಖ್ಯಾತ ಬಂಡಾಯ ಸಾಹಿತಿ ನಾಡೋಜ ಕುಂ.ವೀರಭದ್ರಪ್ಪ ಕರೆನೀಡಿದರು.

ಇಲ್ಲಿನ ಕನ್ನಡ ಯುವಶಕ್ತಿ ಕೇಂದ್ರದಿಂದ ಎಂ.ಎಸ್.ಕೆ. ಶಾಸ್ತ್ರಿ ವೇದಿಕೆಯಲ್ಲಿ ನಡೆದ ನಮ್ಮೂರ ಕನ್ನಡ ಸುಗ್ಗಿ ಸಂಭ್ರಮ ಕಾರ್ಯಕ್ರಮದಲ್ಲಿ ಧ್ವಜಾರೋಹಣ ನೆರವೇರಿಸಿ ಅವರು ಮಾತನಾಡಿದರು.



'ಕನ್ನಡಕ್ಕೆ ಎಂದೂ ಅಳಿವಿಲ್ಲ. ಮಹಾನ್ ರಾಜವಂಶಗಳಾದ ಕದಂಬರು, ಗಂಗರು ಕನ್ನಡಿಗರು. ಮೊನಾಲಿಸಾಕ್ಕಿಂತ ಅದ್ಭುತ ಕಲಾಕೃತಿ ಎಂದರೆ ಶ್ರವಣಬೆಳಗೊಳ ಗೊಮಟೇಶ್ವರ. 372 ಶಾಸನಗಳು ಹೊರರಾಜ್ಯದಲ್ಲಿ ಸಿಕ್ಕಿವೆ. ಎಲ್ಲೋರಾದಲ್ಲಿರುವ ಅಜಂತಾ ಗುಹೆಗಳು ಕನ್ನಡಿಗರು ನಿರ್ಮಿಸಿದವು. ರನ್ನ, ಪಂಪರ ಬಗ್ಗೆ ಅಧ್ಯಯನ ಮಾಡದಿದ್ದರೆ ಕನ್ನಡಿಗರಾಗಿ ಹುಟ್ಟಿಯೂ ಪ್ರಯೋಜನವಿಲ್ಲ. ರಾಘವಾಂಕನ ಹರಿಶ್ಚಂದ್ರ ಕಾವ್ಯ ಓದಬೇಕು.

ಸರ್ಕಾರಿ ಶಾಲೆ ಉಳಿಸಬೇಕು. ಕನ್ನಡ ನಮ್ಮ ಕಣ್ಣಾಗಬೇಕು. ಅಂಕಗಳಿಗಾಗಿ, ಇಂಗ್ಲಿಷ್ ಭಾಷೆಯಲ್ಲಿ ಓದಿಸುತ್ತಿರುವುದು ಮಕ್ಕಳನ್ನು ಸಮಾಜದಿಂದ ದೂರವಿಟ್ಟಂತಾಗಿದೆ. ಇಂಗ್ಲಿಷ್ ಓದಿದರೆ ತಂದೆ ತಾಯಿ ವೃದ್ಧಾಶ್ರಮ ಸೇರಬೇಕಾಗುತ್ತದೆ. ಕನ್ನಡ ಭಾಷೆಯಲ್ಲಿ ಓದಿದರೆ ಮಾತ್ರ ಭಾವಕೋಶ ಬೆಳೆಯುತ್ತೇವೆ. ಮಕ್ಕಳು ಮೊಬೈಲ್ ಹಿಡಿದು ಕೂತು ಹಾಳಾಗಿದ್ದಾರೆ. ಸರ್ಕಾರಗಳು ಫೋರ್ ಜಿ ತಂತ್ರಜ್ಞಾನದಿಂದ ಜನ ಪ್ರಶ್ನಿಸುವುದನ್ನೇ ಮರೆತಿದ್ದಾರೆ. ಮಹಿಳೆಯರು ಧಾರಾವಹಿಗಳಿಗೆ ದಾಸರಾಗಿದ್ದಾರೆ. ಕನ್ನಡದ ಅಸ್ಮಿತೆ ಉಳಿಯದಿದ್ದರೆ ಕನ್ನಡಿಗರಿಗೆ ಭವಿಷ್ಯವಿಲ್ಲ ಎಂದರು ಡಾ. ಎಂ. ಕೆ. ರಮೇಶ್, ಎಲ್ಲಾ ಸನ್ಮಾನಗಳಿಗಿಂತ ಹುಟ್ಟೂರಿನಲ್ಲಿ ಪಡೆಯುವ ಗೌರವ ಸನ್ಮಾನ ದೊಡ್ಡದು. ಕನ್ನಡ ಹೆಚ್ಚಾಗಿ ಬೆಳೆದ ಕಾರಣ ನವಂಬರ್ ತಿಂಗಳಲ್ಲಿ ಆಚರಿಸುವ ಕನ್ನಡ ರಾಜ್ಯೋತ್ಸವ ಡಿಸೆಂಬರ್ ತಿಂಗಳಿಗೆ ಕಾಲಿಟ್ಟಿದೆ ಎಂದರೆ ಅತಿಥಿಗಳು ಸಿಗಲಾರದಷ್ಟು ಬೆಳೆದಿದೆ. ಕನ್ನಡವನ್ನು ಮರೆಯುವ ಭೀತಿ ಹೆಚ್ಚಾಗಿ ರಾಜ್ಯೋತ್ಸವ ಹೆಚ್ಚಾಗಿವೆ ಅನಿಸುತ್ತದೆ. ಪ್ರತಿನಿತ್ಯ ಭಾಷೆಗಳು ನಶಿಸುತ್ತಿವೆ. ನಾವೂ ಬಳಸದೇ ಹೋದರೆ ಕನ್ನಡ ಅಡುಗೆ ಮನೆ ಭಾಷೆಯಾಗುತ್ತದೆ. ಕನ್ನಡದ ಬಗ್ಗೆ ಕೀಳರಿಮೆ ಬೆಳಸಿಕೊಳ್ಳಬಾರದು. ಚಿಕ್ಕವರಿದ್ದಾಗಲೇ ಮಾತೃಭಾಷೆ ಕಲಿಯಬೇಕು, ದೊಡ್ಡವರಾದ ಮೇಲೂ ಬೇರೆ ಭಾಷೆ ಕಲಿಯಬಹುದು. ಹಿಂದಿ ಮಾತ್ರ ರಾಷ್ಟ್ರ ಭಾಷೆಯಲ್ಲ ಎಲ್ಲವೂ ರಾಷ್ಟ್ರದ ಭಾಷೆಗಳು. ಕನ್ನಡ ಭಾಷೆ ಬಳಸಲು ಹಿಂಜರಿಕೆಬೇಡ ಎಂದರು.

ಶಾಸಕ ಬಸವಂತಪ್ಪ, ಕನ್ನಡ ಭಾಷೆ ಉಳಿದಿರುವುದಹ ಗ್ರಾಮೀಣ ಪ್ರದೇಶಗಳಲ್ಲಿ ಮಾತ್ರ. ನಾಡಿನ ಹೆಸರಾಂತ ಸಾಹಿತಿಗಳನ್ನು ಕರೆಯಿಸಿಬಕನ್ನಡ ಅಭಿಮಾನ ಮೂಡಿಸಿರುವುದು ಸಂತಸದ ಸಂಗತಿ. ಇಲ್ಲಿನ ನಿವೇಶನದಲ್ಲಿ ಕನ್ನಡ ಭವನ ನಿರ್ಮಾಣಕ್ಕೆ ಅನುದಾನ ನೀಡುವುದಾಗಿ ಭರವಸೆ ನೀಡಿದರು.

ಕಸಾಪ ಜಿಲ್ಲಾ ಅಧ್ಯಕ್ಷ ಬಿ.ವಾಮದೇವಪ್ಪ ಮಾತನಾಡಿ, ಕನ್ನಡಕ್ಕೆ ಅಪಾರ ಶಕ್ತಿಯಿದೆ. ಮಾಯಕೊಂಡದಲ್ಲಿ ಕನ್ನಡ ಭವನ ನಿರ್ಮಾಣಕ್ಕೆ ಶಾಸಕರು ಮುಂದಾಗಬೇಕು, ಮಾಯಕೊಂಡ ತಾಲ್ಲೂಕು ಕೇಂದ್ರ ಮಾಡಬೇಕು ಎಂದು ಒತ್ತಾಯಿಸಿದರು.

ಲಕ್ಷ್ಮಣ್ ಪ್ರಾಸ್ತಾವಿಕ ಮಾತನಾಡಿದರು. ತಿಪ್ಪೇಸ್ವಾಮಿ ಮಂಜುನಾಥ್ ನಿರೂಪಿಸಿದರು.

# ನಂದಿನಿ ಪಾರ್ಲರ್‌ಗಳಾಗಿ ಬದಲಾಗಲಿವೆ ಇಂದಿರಾ ಕ್ಯಾಂಟಿನ್‌ಗಳು

**ಬೆಂಗಳೂರು:** ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಕನಸಿನ ಯೋಜನೆಯಾದ ಇಂದಿರಾ ಕ್ಯಾಂಟಿನ್‌ಗಳು ಇನ್ನು ಮುಂದೆ ಕೆಎಂಎಫ್ ಉತ್ಪನ್ನಗಳ ಮಾರಾಟ ಕೇಂದ್ರಗಳಾಗಿಯೂ ಬದಲಾಗಲಿವೆ.ಬಡವರ ಹಸಿವು ನೀಗಿಸುವ ಕೇಂದ್ರಗಳೆಂದೇ ಬಿಂಬಿತವಾಗಿದ್ದ ಇಂದಿರಾ ಕ್ಯಾಂಟಿನ್‌ಗಳು ಇತ್ತೀಚೆಗೆ ಖಾಲಿ ಹೊಡೆಯುತ್ತಿವೆ ಹೀಗಾಗಿ ಕ್ಯಾಂಟಿನ್‌ಗಳ ಉತ್ತೇಜನಕ್ಕಾಗಿ ಈ ಹೊಸ ಯೋಜನೆಯನ್ನು ಜಾರಿಗೊಳಿಸಲಾಗುತ್ತಿದೆ.

ಸರ್ಕಾರದ ಪಂಚ ಗ್ಯಾರಂಟಿಗಳಿಂದಾಗಿ ಇಂದಿರಾ ಕ್ಯಾಂಟಿನ್‌ಗಳ ನಿರ್ವಹಣೆಗೆ ಹಣಕಾಸಿನ ತೊಂದರೆ ಎದುರಾಗಿದೆ. ಇರುವ ಕ್ಯಾಂಟಿನ್‌ಗಳಿಗೆ ಬರುತ್ತಿರುವ ಗ್ರಾಹಕರ ಸಂಖ್ಯೆಯೂ ಇಳಿಮುಖವಾಗುತ್ತಿರುವುದರಿಂದ ಕ್ಯಾಂಟಿನ್‌ಗಳಲ್ಲಿ ಬದಲಿ ವ್ಯಾಪಾರಕ್ಕೆ ಅವಕಾಶ ಮಾಡಿಕೊಡಿ ಎಂಬ ಬೇಡಿಕೆ ಹೆಚ್ಚಾಗಿತ್ತು.

ಜನರ ಬೇಡಿಕೆ ಮೇರೆಗೆ ಇಂದಿರಾ ಕ್ಯಾಂಟಿನ್‌ಗಳಲ್ಲಿ ಬದಲಿ ವ್ಯಾಪಾರಕ್ಕೆ ಅವಕಾಶ ಮಾಡಿಕೊಡಬೇಕು ಎಂಬ ಉದ್ದೇಶದಿಂದ ಕ್ಯಾಂಟಿನ್‌ಗಳಲ್ಲಿ ನಂದಿನಿ ಉತ್ಪನ್ನಗಳನ್ನು ಮಾರಾಟ ಮಾಡಲು ತೀರ್ಮಾನಿಸಲಾಗಿದೆ ಎಂದು ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಮುಖ್ಯ ಆಯುಕ್ತ ಮಹೇಶ್ವರ್ ರಾವ್




ತಿಳಿಸಿದ್ದಾರೆ.

ನಂದಿನಿ ಉತ್ಪನ್ನಗಳಿಗೆ ದೇಶಾದ್ಯಂತ ಇನ್ನಿಲ್ಲದ ಬೇಡಿಕೆ ಇದೆ ಅಂತಹ ನಂದಿನಿ ಉತ್ಪನ್ನಗಳನ್ನು ಇಂದಿರಾ ಕ್ಯಾಂಟಿನ್‌ಗಳಲ್ಲಿ ಮಾರಾಟ ಮಾಡಿದರೆ ಹೆಚ್ಚಿನ ಲಾಭವಾಗಲಿದೆ ಎಂಬ ಉದ್ದೇಶದಿಂದ ಇಂತಹ ತೀರ್ಮಾನ ಕೈಗೊಳ್ಳಲಾಗಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

ಹಣಕಾಸಿನ ತೊಂದರೆ ಎದುರಿಸುತ್ತಿರುವ ಇಂದಿರಾ ಕ್ಯಾಂಟಿನ್‌ಗಳಲ್ಲಿ ನಂದಿನಿ ಉತ್ಪನ್ನಗಳಾದ ಹಾಲು, ತುಪ್ಪ, ಬೆಣ್ಣೆ ಮತ್ತಿತರ ಉತ್ಪನ್ನಗಳನ್ನು ಮಾರಾಟ ಮಾಡಲು ಅನುಮತಿ ನೀಡಿದರೆ ಕ್ಯಾಂಟಿನ್‌ಗಳ ಮಾಲೀಕರು ಲಾಭ ಮಾಡಿಕೊಳ್ಳುವುದರ ಜೊತೆಗೆ ಬಡವರ ಹಸಿವು ನೀಗಿಸುತ್ತಿರುವ ಇಂದಿರಾ ಕ್ಯಾಂಟಿನ್‌ಗಳು ಮುಂದುವರೆಯಲಿವೆ ಎಂದು ನಾವು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದ್ದೇವೆ ಸರ್ಕಾರದಿಂದ ಅನುಮತಿ ಸಿಕ್ಕ ಕೂಡಲೆ ಕ್ಯಾಂಟಿನ್‌ಗಳು ನಂದಿನಿ ಪಾರ್ಲರ್‌ಗಳಾಗಿ ಬದಲಾಗಲಿವೆ ಎಂದು ಅವರು ವಿವರಿಸಿದ್ದಾರೆ.

# ಯುನೈಟೆಡ್' ' ಶಾಲೆಯಲ್ಲಿ ತೇಲಿ ಬಂದ ಕನ್ನಡ ಪ್ರೇಮ..!

**ದಾವಣಗೆರೆ :** ಶಿಸ್ತುಬದ್ಧ ಸಮವಸ್ತ್ರ ತಲೆಗೆ ಟೋಪಿ, ಸ್ಕಾರ್ಫ್,ಧರಿಸಿದ ವಿದ್ಯಾರ್ಥಿಗಳು ಶಿಕ್ಷಕರ ಸೂಚನೆ ಮೇರೆಗೆ ಕಾರ್ಯ ಚಟುವಟಿಕೆ ಇವೆಲ್ಲದರ ನಡುವೆ ಸಾಮೂಹಿಕವಾಗಿ ಹಾಡಿದ ನಾಡಗೀತೆ ಇಡೀ ಸಭಾಂಗಣದಲ್ಲಿಯೇ ಘರ್ಜಿಸಿದ ಕನ್ನಡದ ಕಹಳೆ, ಅತಿಥಿಗಳ ಹಿತನುಡಿಯಲ್ಲಿನ ಕನ್ನಡ ಭಾಷಾಭಿಮಾನದ ಸಂದೇಶ ಅಲೆ ಅಲೆಯಾಗಿ ತೇಲಿ ಬಂದಿತು.

ಇವೆಲ್ಲ ದೃಶ್ಯಾವಳಿಗಳು ನಮಗೆ ಕಂಡು ಬಂದಿದ್ದು ಇಲ್ಲಿಯ ಬೂದಿಹಾಳ್ ರಸ್ತೆಯ ಬಿ.ಎನ್.ಲೇಔಟ್ ನಲ್ಲಿರುವ ಯುನೈಟೆಡ್ ಆಂಗ್ಲ ಮಾಧ್ಯಮ (ಸಿಬಿಎಸ್‌ಇ) ಶಾಲೆಯಲ್ಲಿ ಕನ್ನಡ ರಾಜ್ಯೋತ್ಸವದ ಅಂಗವಾಗಿ ಹಮ್ಮಿಕೊಂಡಿದ್ದ ಕನ್ನಡ ಸಿರಿ ಸಮಾರೋಪ ಸಮಾರಂಭದಲ್ಲಿಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದ ಜಿಲ್ಲಾವರದಿಗಾರರ ಕೂಟದ ಅಧ್ಯಕ್ಷ ನಾಗರಾಜ್ ಬಡದಾಳ್ ಅವರು ಮಾತನಾಡಿ ಅಲ್ಪಸಂಖ್ಯಾತರು ಹೆಚ್ಚಿನ ಸಂಖ್ಯೆಯಲ್ಲಿ ವಾಸಿಸುವ ಇಂಥಹ ಪ್ರದೇಶದಲ್ಲಿ ಬೃಹದಾಕಾರ ಶಾಲೆಯನ್ನು ನಿರ್ಮಿಸಿ ಮಕ್ಕಳಿಗೆ ಶಿಕ್ಷಣ ನೀಡುತ್ತಿರುವುದು ಶ್ಲಾಘನೀಯ ಎಂದರು.

ಶಿಕ್ಷಕರ ಈ ಪ್ರಯತ್ನಕ್ಕೆ ಶಾಲೆಯ ಮುಖ್ಯಸ್ಥರು ಪುರಸ್ಕರಿಸುವ ಮೂಲಕ ಶಾಲೆಯ ಅಭಿವೃಧಿಗೆ ಪುಷ್ಠಯಾಗಬೇಕೆಂದು ಸಲಹೆ ನೀಡಿದ ನಾಗರಾಜ್ ಬಡದಾಳ್ ಅವರ ಸಲಹೆಯನ್ನು ಸ್ವೀಕರಿಸಿದ ಶಾಲೆಯ ಸಂಸ್ಥಾಪಕ ಅಧ್ಯಕ್ಷ ಬಿ.ದಾದಾಪೀರ್ ಅವರು ತಮ್ಮ ಗುರುಗಳಾದ ಕೆ.ಇಮಾಂ ಅವರ ಹೆಸರಿನಲ್ಲಿ ಹಿರಿಯ ಪ್ರಾಥಮಿಕ, ಪ್ರೌಢಶಾಲೆ, ಪದವಿ ಪೂರ್ವ ಕಾಲೇಜ್ ಶಿಕ್ಷಕರಿಗೆ ಸೇರಿದಂತೆ ಒಟ್ಟು ನಾಲ್ಕು ಉತ್ತಮ ಶಿಕ್ಷಕ –ಶಿಕ್ಷಕಿಯರನ್ನುಗುರುತಿಸಿ ತಲಾ 7500 ನೀಡಿ ಗೌರವಿಸಲಾಗುವುದು ಎಂದು ಘೋಷಿಸಿ ಪ್ರತಿ ಬುಧುವಾರ ನಮ್ಮ ಶಾಲೆಯಲ್ಲಿ ಒಂದು ದಿನ ಕನ್ನಡ ಭಾಷೆ ಮಾತ್ರ ಬಳಸಲು ಸೂಚಿಸಲಾಗುವುದು ಭಾಷೆಯ ಅಭಿವೃಧಿಗೆ ನಮ್ಮ ಶಾಲೆ ಮಾದರಿಯಾಗಲಿ ಎಂದು ಬಿ. ದಾದಾಪೀರ್ ಅವರು ಈ ಸಂದರ್ಭದಲ್ಲಿ ಆಶಿಸಿದರು.ಇನ್ನೊಬ್ಬ ಮುಖ್ಯ ಅತಿಥಿ ಜನತಾ ವಾಣಿ ಹಿರಿಯ ವರದಿಗಾರ ಬಿ. ಸಿಕಂದರ್ ಅವರು ಮಾತನಾಡಿ ಮಕ್ಕಳಲ್ಲಿರುವ ಪ್ರತಿಭೆಯನ್ನು ಗುರುತಿಸಿ ಮಕ್ಕಳಿಗೆ ಕ್ರಿಯಾತ್ಮಕ ವೇದಿಕೆಯನ್ನು ನಿರ್ಮಿಸಿ ಕಿತ್ತೂರು ರಾಣಿ ಚೆನ್ನಮ್ಮ ಅವರ ಕಿರುನಾಟಕದ ಪ್ರದರ್ಶನ ನಿಜಕ್ಕೂ ಶಿಕ್ಷಕರ ಪ್ರಯತ್ನಕ್ಕೆ ಸಂದ ಪ್ರತಿಫಲ ವಾಗಿದೆ ಎಂದು ಹೇಳಿದರು.ಪ್ರಾಂಶುಪಾಲ ಎಂ. ವಸೀಂಪಾಷ, ಮುಖ್ಯ ಶಿಕ್ಷಕ ನಾಗರಾಜ್, ಸಂಯೋಜಕಿ ಶರ್ಫುನ್ನಿಸಾ, ಅಷ್ಫಾಕ್, ಮುಬೀನಾ, ಜೈಬಾ ನಿಖದ್,ನಸೀಮಾ ಬೇಗಂ, ಫರ್ಹಾ ನಾಜ್, ಗಂಗಮ್ಮ ಶೀರಿನ್, ಸಿಮ್ರಾನ್, ರೋಶನ್ ಖಾನ್,ಸೇರಿದಂತೆ ಇನ್ನು ಅನೇಕರು ಉಪಸ್ಥಿತರಿದ್ದರು.

# ಮಾನ–ಮರ್ಯಾದೆ ಇದ್ದರೆ ಕೇಂದ್ರ ಸರ್ಕಾರದ ವಿರುದ್ಧ ಪ್ರತಿಭಟಿಸಿ : ಬಿಜೆಪಿಗೆ ಡಿಕೆಶಿ ತಿರುಗೇಟು

**ಬೆಳಗಾವಿ:** ಬಿಜೆಪಿಯವರಿಗೆ ಮಾನ–ಮರ್ಯಾದೆ ಇದ್ದರೆ ಕೇಂದ್ರ ಸರ್ಕಾರದ ವಿರುದ್ಧ ಪ್ರತಿಭಟನೆ ನಡೆಸಲಿ. ಅದನ್ನು ಬಿಟ್ಟು ರಾಜ್ಯ ಸರ್ಕಾರದ ವಿರುದ್ಧ ಪ್ರತಿಭಟನೆ ನಡೆಸುವ ನೈತಿಕತೆ ಇಲ್ಲ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿರುಗೇಟು ನೀಡಿದ್ದಾರೆ.

ಬೆಳಗಾವಿಯಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಕೇಂದ್ರದಲ್ಲಿ ಬಿಜೆಪಿ ಅಧಿಕಾರಕ್ಕೆ ಬಂದಾಗಿನಿಂದಲೂ ಕರ್ನಾಟಕಕ್ಕೆ ನಿರಂತರವಾಗಿ ಅನ್ಯಾಯವಾಗುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.ಕಬ್ಬು, ಮೆಕ್ಕೆಜೋಳ ಸೇರಿದಂತೆ ಕೃಷಿ ಉತ್ಪನ್ನಗಳ ಬೆಲೆ ಕುಸಿತವಾದಾಗ ಕೇಂದ್ರ ಸರ್ಕಾರ ರೈತರ ನೆರವಿಗೆ ಬಂದಿಲ್ಲ ಎಂದು ಆರೋಪಿಸಿದರು.

ಎಥೆನಾಲ್ ಖರೀದಿ ಸಾಮರ್ಥ್ಯವನ್ನು ವಿಸ್ತರಣೆ ಮಾಡಿ ಎಂದರೂ ಕೇಂದ್ರ ಸರ್ಕಾರ ಸ್ಪಂದಿಸುತ್ತಿಲ್ಲ. ಯಾವ ಯೋಜನೆಗಳಿಗೂ ಸರಿಯಾದ ಅನುದಾನ ನೀಡುತ್ತಿಲ್ಲ ಎಂದು



ಟೀಕಿಸಿದರು.

ನೆರೆ ಸಂತ್ರಸ್ಥ ರೈತರಿಗೆ 76 ಸಾವಿರ ಕೋಟಿ ರೂಪಾಯಿಗಳನ್ನು ನೀಡುವುದಾಗಿ ನಮ ಸರ್ಕಾರ ಭರವಸೆ ನೀಡಿದೆ. ಕೃಷ್ಣಾ ಮೇಲ್ದಂಡೆ ಯೋಜನೆಯ ಮೂರನೇ ಹಂತದ ಯೋಜನೆಯನ್ನು ಜಾರಿಗೊಳಿಸಲು ನ್ಯಾಯಾಧಿಕರಣದ ತೀರ್ಪಿನ ಅಧಿಸೂಚನೆ ಹೊರಡಿಸಬೇಕು. ಅದಕ್ಕೂ ಕೇಂದ್ರ ಸರ್ಕಾರ ಸ್ಪಂದಿಸಿಲ್ಲ ಎಂದು ಆರೋಪಿಸಿದರು.

ಬಿಜೆಪಿಯ ರಾಜ್ಯ ಸಂಸದರು ಸಂಸತ್ತಿನಲ್ಲಾಗಲಿ, ಕೇಂದ್ರ ಸರ್ಕಾರದ ಪ್ರತಿನಿಧಿಗಳ ಮುಂದೆಯಾಗಲಿ ಒಂದು ದಿನವೂ ಬಾಯಿ ಬಿಟ್ಟಿಲ್ಲ. ಇನ್ನು ಯಾವ ಮರ್ಯಾದೆ ಇಟ್ಟುಕೊಂಡು ಇಲ್ಲಿ ಪ್ರತಿಭಟನೆ ಮಾಡುತ್ತಿದ್ದಾರೆ? ಎಂದು ಆಕ್ರೋಶ ವ್ಯಕ್ತಪಡಿಸಿದರು ಎಂದರು.

ದೆಹಲಿಯಲ್ಲಿ ಡಿಸೆಂಬರ್ 8ರಂದು ಸರ್ವ ಪಕ್ಷ ಸಭೆ ನಡೆಸಲು ಮುಖ್ಯಮಂತ್ರಿ ಅವರು ಎಲ್ಲಾ ಸಂಸದರಿಗೆ ಪತ್ರ ಬರೆದಿದ್ದರು. ಕೇಂದ್ರ ಸಚಿವರು ತಮಗೆ ಬಿಡುವಿಲ್ಲ ಎಂದು ಹೇಳಿದರು. ಹೀಗಾಗಿ ಎರಡು ದಿನದ ಬಳಿಕ ನಿಮ ಜೊತೆಯಲ್ಲಿ ಮಾತನಾಡುವುದಾಗಿ ಭರವಸೆ ನೀಡಿದ್ದೇವೆ ಎಂದು ತಿಳಿಸಿದರು.

## ಚೊಚ್ಚಲ ಕೃತಿಗಳಿಗೆ ಪ್ರೋತ್ಸಾಹಧನಕ್ಕಾಗಿ ಅರ್ಜಿ ಆಹ್ವಾನ

**ದಾವಣಗೆರೆ :** ಕನ್ನಡ ಪುಸ್ತಕ ಪ್ರಾಧಿಕಾರದ ವತಿಯಿಂದ ಪ್ರಸಕ್ತ ಸಾಲಿನಲ್ಲಿ 18 ವರ್ಷಗಳಿಂದ 40 ವರ್ಷಗಳ ವಯೋಮಿತಿಯೊಳಗಿನ ಯುವ ಬರಹಗಾರರು ಕನ್ನಡ ಸಾಹಿತ್ಯದಲ್ಲಿ ರಚಿಸಿರುವ ಚೊಚ್ಚಲ ಕೃತಿಗಳಿಗೆ ಪ್ರೊತ್ಸಾಹ ಧನ ನೀಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಕಥೆ, ಕಾದಂಬರಿ, ಕವನ, ನಾಟಕ, ವಿಮರ್ಶಾ ಲೇಖನ, ಪ್ರಬಂಧ ಮುಂತಾದ ಸಾಹಿತ್ಯದ ಪ್ರಕಾರಗಳಿಗೆ (ಅನುವಾದ ಪಠ್ಯಪುಸ್ತಕ ಹಾಗೂ ಬೇರಾವುದೇ ಪದವಿಗೆ ಸಿದ್ದಪಡಿಸಿದ ಪ್ರಬಂಧಗಳನ್ನು ಹೊರತುಪಡಿಸಿ) ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಡಿಸೆಂಬರ್ 24 ಕೊನೆಯ ದಿನವಾಗಿರುತ್ತದೆ.

ಹೆಚ್ಚಿನ ವಿವರಗಳಿಗಾಗಿ ಆಡಳಿತಾಧಿಕಾರಿಗಳು, ಕನ್ನಡ ಪುಸ್ತಕ ಪ್ರಾಧಿಕಾರ ಕನ್ನಡ ಭವನ, ಮೊದಲನೇ ಮಹಡಿ, ಜೆ.ಸಿ. ರಸ್ತೆ, ಬೆಂಗಳೂರು–560002 ವೆಬ್ ಸೈಟ್ www.kannadapustakapradhikara.com, ದೂ.ಸಂ: 080–22484516, 22107704 ಇಲ್ಲಿ ಸಂಪರ್ಕಿಸಬಹುದೆಂದು ಇಲಾಖೆಯ ಸಹಾಯಕ ನಿರ್ದೇಶಕ ರವಿಚಂದ್ರ ತಿಳಿಸಿದ್ದಾರೆ.

## ಬೀದಿನಾಯಿಗಳನ್ನು ಪೋಷಿಸಲು ಆಸಕ್ತರಿಂದ ಅರ್ಜಿ ಆಹ್ವಾನ

**ದಾವಣಗೆರೆ :** ಘನ ಸರ್ವೋಚ್ಚ ನ್ಯಾಯಾಲಯದ ಸ್ವ–ಪ್ರೇರಿತ ರಿಟ್ ಪಿಟಿಷನ್ ಅನ್ವಯ ಸಾರ್ವಜನಿಕ ಸುರಕ್ಷತೆ, ಆರೋಗ್ಯ ಹಾಗೂ ಬೀದಿ ನಾಯಿಗಳ ಹಾವಳಿ ನಿಯಂತ್ರಣಕ್ಕೆ ಸಂಬಂಧಿಸಿದಂತೆ, ಶಿಕ್ಷಣ ಸಂಸ್ಥೆ, ಆಸ್ಪತ್ರೆ, ಕ್ರೀಡಾ ಸಮುದಾಯ, ಬಸ್ ನಿಲ್ದಾಣ, ರೈಲ್ವೇ ನಿಲ್ದಾಣದಂತಹ ಸಾಂಸ್ಥಿಕ ಪ್ರದೇಶಗಳಲ್ಲಿ ವಾಸಿಸುತ್ತಿರುವ ಬೀದಿ ನಾಯಿಗಳನ್ನು ಗುರುತಿಸಿ ಆಶ್ರಯ ತಾಣಗಳಲ್ಲಿ ಆರೈಕೆ ಮತ್ತು ಪೋಷಣೆಗೆ ಆದೇಶಿಸಲಾಗಿರುತ್ತದೆ.

ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಯಾವುದೇ ವ್ಯಕ್ತಿ, ಸಂಘ–ಸಂಸ್ಥೆಗಳು ಬೀದಿ ನಾಯಿಗಳನ್ನು ದತ್ತು ತೆಗೆದುಕೊಂಡು ಪೋಷಿಸಲು ಆಸಕ್ತರಿದ್ದಲ್ಲಿ,

ಅಥವಾ ಪಾಲಿಕೆಯಿಂದ ನಿರ್ಮಿಸಲಾಗುವ ನಾಯಿಗಳ ಆಶ್ರಯ ತಾಣಗಳನ್ನು ನಿರ್ವಹಿಸಲು ಆಸಕ್ತರಿದ್ದಲ್ಲಿ ಡಿಸೆಂಬರ್ 12 ರೊಳಗಾಗಿ ಆಯುಕ್ತರು, ದಾವಣಗೆರೆ ಮಹಾನಗರ ಪಾಲಿಕೆ ಇವರಿಗೆ ಖುದ್ದಾಗಿ ತಮ್ಮ ಪ್ರಸ್ತಾವನೆಯೊಂದಿಗೆ ಸಂಪರ್ಕಿಸಬಹುದು. ಹೆಚ್ಚಿನ ಮಾಹಿತಿಗಾಗಿ https://awbi.gov.in/Document/general%20guidelines ವೀಕ್ಷಿಸಲು ಪಾಲಿಕೆ ಆಯುಕ್ತೆ ರೇಣುಕಾ ತಿಳಿಸಿದ್ದಾರೆ.

## ಅರಿವು ಮೂಡಿಸುವ ಕಾರ್ಯಕ್ರಮ

**ದಾವಣಗೆರೆ :** ಜಿಲ್ಲಾ ಕೈಗಾರಿಕಾ ಕೇಂದ್ರ ದಾವಣಗೆರೆ, ಕೆ.ಸಿ.ಟಿ.ಯು ಬೆಂಗಳೂರು ಹಾಗೂ ದಾವಣಗೆರೆ ವಿಶ್ವವಿದ್ಯಾಲಯ ದಾವಣಗೆರೆ ಇವರುಗಳ ಸಂಯುಕ್ತಾಶ್ರಯದಲ್ಲಿ ಡಿಸೆಂಬರ್ 10 ರಂದು ಬೆಳಿಗ್ಗೆ 10.30 ಕ್ಕೆ ನಗರದ ತೋಳಹುಣಸೆಯಲ್ಲಿ ಎಂ.ಎಸ್.ಎಂ.ಇ ಗಳ ಕಾರ್ಯಕ್ಷಮತೆಯನ್ನು ಹೆಚ್ಚಿಸುವುದು ಮತ್ತು ವೇಗಗೊಳಿಸುವ ಯೋಜನೆಯಡಿಯಲ್ಲಿ ಇನ್ ಕುಬಿನೇಶನ್ ಯೋಜನೆಯ ಕುರಿತು ಒಂದು ದಿನದ ಅರಿವು ಮೂಡಿಸುವ ಕಾರ್ಯಗಾರವನ್ನು ಆಯೋಜಿಸಲಾಗಿದೆ.

ಕಾರ್ಯಕ್ರಮವನ್ನು ದಾವಣಗೆರೆ ವಿಶ್ವವಿದ್ಯಾಲಯದ ಕುಲಪತಿ ಪ್ರೊ.. ಬಿ.ಡಿ. ಕುಂಬಾರ್ ಉದ್ಘಾಟಿಸುವರು. ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕ ಆರ್. ಗಣೇಶ್ ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಕುಲಸಚಿವರಾದ ಶಬ್ಬೀರ್ ಖಾಶಾ ಜೆಂಟಿ, ಕುಲಸಚಿವರು (ಮೌಲ್ಯಮಾಪನ) ಡಾ. ರಮೇಶ್. ಸಿ.ಕೆ, ಹಣಕಾಸು ಅಧಿಕಾರಿ ವಂದನಾ, ಆರ್.ಆರ್ ಪಾಲ್ಗೊಳುವರು. ಐಇಡಿಐಎಸ್ ನಿವೃತ್ತ ಉಪ ನಿರ್ದೇಶಕರಾದ ಗೋಪಿನಾಥ್ ರಾವ್ ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸುವರು.

## ಡಾಕ್ ಅದಾಲತ್

**ಶಿವಮೊಗ್ಗ:** ಶಿವಮೊಗ್ಗ ಕೋಟೆ ರಸ್ತೆಯಲ್ಲಿರುವ ಅಂಚೆ ಅಧೀಕ್ಷಕರ ಕಚೇರಿಯಲ್ಲಿ ಡಿ. 15 ರಂದು ಬೆಳಗ್ಗೆ 11.00ಕ್ಕೆ ತ್ರೈಮಾಸಿಕ ಡಾಕ್ ಅದಾಲತ್ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ಸಾರ್ವಜನಿಕರು ಅಂಚೆ ಇಲಾಖೆಯ ಕುಂದುಕೊರತೆಗಳನ್ನು ಅಥವಾ ಸಲಹೆಗಳಿದ್ದಲ್ಲಿ ಡಿ. 12 ರೊಳಗಾಗಿ ಲಿಖಿತವಾಗಿ ಸಲ್ಲಿಸಿ, ಡಾಕ್ ಅದಾಲತ್ ಕಾರ್ಯಕ್ರಮದಲ್ಲಿ ಭಾಗವಹಿಸುವಂತೆ ಅಂಚೆ ಅಧೀಕ್ಷಕ ಎಂ. ಕುಮಾರಸ್ವಾಮಿ ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

## ಡಿ.17 ರಂದು ಒಂದು ದಿನದ ಕಾರ್ಯಗಾರ

**ಹಾಸನ :** ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಜಿಲ್ಲಾ ಕೈಗಾರಿಕಾ ಕೇಂದ್ರ, ಹಾಸನ ಹಾಗೂ ಟೆಕ್ಸಾಕ್, ಬೆಂಗಳೂರು ರವರ ಸಂಯುಕ್ತಾಶ್ರಯದಲ್ಲಿ BDSPs One day Awareness Workshop Under RAMP Scheme ಯೋಜನೆಯಡಿಯಲ್ಲಿ ಒಂದು ದಿನದ ಕಾರ್ಯಗಾರವನ್ನು ಡಿ.17 ರಂದು ಬೆಳಿಗ್ಗೆ 10.30 ಗಂಟೆಗೆ, ಕೆನರಾ ಬ್ಯಾಂಕ್ ಗ್ರಾಮೀಣ ಸ್ವ–ಉದ್ಯೋಗ ತರಬೇತಿ ಸಂಸÉÜ(R-SETI),

ಕೆಐಎಡಿಬಿ ಇಂಡಸ್ಟ್ರಿಯಲ್ ಏರಿಯಾ, ಪವನ ಪುತ್ರ ಕಲ್ಯಾಣ ಮಂಟಪದ ಪಕ್ಕ, ಹೊಳೆನರಸೀಪುರ ರಸ್ತೆ, ಹಾಸನದಲ್ಲಿ ಆಯೋಜಿಸಲಾಗಿದ್ದು. ಜಿಲ್ಲೆಯ ಆಸಕ್ತ ಉದ್ದಿಮೆದಾರರು ಭಾಗವಹಿಸಿ ಸದರಿ ಕಾರ್ಯಾಗಾರದ ಸದುಪಯೋಗ ಪಡೆದುಕೊಳ್ಳಬೇಕೆಂದು ಈ ಮೂಲಕ ಕೋರಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕೈಗಾರಿಕಾ ಕೇಂದ್ರ, ಹಾಸನ ದೂರವಾಣಿ ಸಂಖ್ಯೆ: 08172– 296217, 240606 ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರು ತಿಳಿಸಿದ್ದಾರೆ.

## ಸಣ್ಣ ಮತ್ತು ಅತಿ ಸಣ್ಣ ಘಟಕಗಳ ಸ್ಥಾಪನೆಗೆ ಅರ್ಜಿ ಆಹ್ವಾನ

**ಹಾಸನ :** ನೇಕಾರರ ವಿಶೇಷ ಪ್ಯಾಕೇಜ್ ಯೋಜನೆಯ ವಿಶೇಷ ಘಟಕ / ಗಿರಿಜನ ಉಪ ಯೋಜನೆಯಡಿ 2025–26 ನೇ ಸಾಲಿಗೆ ಜವಳಿ ಕ್ಷೇತ್ರಕ್ಕೆ ಸಂಬಂಧಿಸಿದ ಸಣ್ಣ ಮತ್ತು ಅತಿ ಸಣ್ಣ (ಎಸ್.ಎಮ್.ಇ) ಘಟಕಗಳನ್ನು ಪ್ರಾರಂಭಿಸಲು ಉತ್ತೇಜಿಸುವ ಸಲುವಾಗಿ ನೇಕಾರರ

ಪ್ಯಾಕೇಜ್ ಯೋಜನೆಯಡಿ ಜವಳಿ ಕ್ಷೇತ್ರಕ್ಕೆ ಸಂಬಂಧಸಿದಂತೆ ಸಣ್ಣ ಮತ್ತು ಅತಿ ಸಣ್ಣ (ಎಸ್.ಎಮ್.ಇ) ಘಟಕಗಳ ಸ್ಥಾಪನೆಗೆ ಸಹಾಯಧನ ಯೋಜನೆಯಡಿ ಹೊಸ ಘಟಕಗಳ ಪ್ರಸ್ತಾವನೆಯನ್ನು ಸಲ್ಲಿಸುವಂತೆ ಜವಳಿ ಅಭಿವೃದ್ದಿ ಆಯುಕ್ತರು ಹಾಗೂ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ, ಕೇಂದ್ರ ಕಚೇರಿ, ಬೆಂಗಳೂರು ಇವರು ಸೂಚಿಸಿದ್ದು, ಈ ಯೋಜನೆಯಡಿ ಸರ್ಕಾರವು ಮಾರ್ಗಸೂಚಿಯನ್ವಯ ಅನುಷ್ಟಾನಗೊಳಿಸಲಾಗುವುದು.

ಸದರಿ ಯೋಜನೆಯಡಿ ಘಟಕ ಸ್ಥಾಪಿಸಲು ಉದ್ದೇಶಿಸಿರುವ ಅಭ್ಯರ್ಥಿಗಳು ಹೆಚ್ಚಿನ ವಿವರಗಳಿಗಾಗಿ ಸಹಾಯಕ ನಿರ್ದೇಶಕರ ಕಚೇರಿ, ಕೈಮಗ್ಗ ಮತ್ತು ಜವಳಿ ಇಲಾಖೆ, ಜಿಲ್ಲಾ ಕೈಗಾರಿಕಾ ಕೇಂದ್ರ, ಹಾಸನ ಈ ಕಚೇರಿ ದೂರವಾಣಿ ಸಂಖ್ಯೆ:08172–240627 ಗೆ ಸಂಪರ್ಕಿಸಲು ಜಿಲ್ಲಾ ಪಂಚಾಯತ್, ಕೈಮಗ್ಗ ಮತ್ತು ಜವಳಿ ಇಲಾಖೆಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

# ಹೊಸತನಗಳ ನಮ್ರತೆ ಹೊಂದಿರುವ ಅಪರೂಪದ ಕಲೆ ಯಕ್ಷಗಾನ

**ಚಿಕ್ಕಮಗಳೂರು:** ಯಕ್ಷಗಾನ ಕಲೆ ಹಳೆಯದಾದರೂ ನಿತ್ಯ ಹೊಸತನಗಳನ್ನು ಮೈಗೂಡಿಸಿಕೊಂಡು ನಮ್ರತೆಯನ್ನು ಹೊಂದಿರುವ ಅಪರೂಪದ ಕಲೆ ಎಂದು ಬಸವತತ್ವ ಪೀಠದ ಡಾ. ಬಸವ ಮರುಳಸಿದ್ಧ ಸ್ವಾಮೀಜಿ ಹೇಳಿದರು.

ಅವರು ಕುವೆಂಪು ಕಲಾಮಂದಿರದಲ್ಲಿ ಯಕ್ಷಸಿರಿ ನಾಟ್ಯವೃಂದ, ಲಯನ್ಸ್ ಸಂಸ್ಥೆ, ಬಿಂಡಿಗ ಶ್ರೀ ದೇವೀರಮ್ಮ ದೇವಸ್ಥಾನ ಸಮಿತಿ ಇವರ ಸಂಯುಕ್ತಾಶ್ರಯದಲ್ಲಿ ಡಾ. ಜೆ.ಪಿ ಕೃಷ್ಣೇಗೌಡರ ಸಾರಥ್ಯದಲ್ಲಿ ಆಯೋಜಿಸಲಾಗಿದ್ದ 'ಮಾಯಾ ಶೂರ್ಪನಕಿ' ತೆಂಕುತಿಟ್ಟು ಯಕ್ಷಗಾನ ಪ್ರದರ್ಶನವನ್ನು ಉದ್ಘಾಟಿಸಿ ಮಾತನಾಡಿದರು.



ಚಿಕ್ಕಮಗಳೂರಿನಲ್ಲಿ ಡಾ. ಜೆ.ಪಿ ಕೃಷ್ಣೇಗೌಡರ ಸಾರಥ್ಯದಲ್ಲಿ ಸಾಂಸ್ಕೃತಿಕ ವಲಯ ತುಂಬಾ ಶ್ರೀಮಂತವಾಗಿದೆ. ಕಳೆದ 45 ವರ್ಷಗಳಿಂದ ಯಕ್ಷಗಾನಕ್ಕೆ ಪಾತ್ರಧಾರಿ ವೇಷಧಾರಿಯಾಗಿ ದುಡಿದ ಹಿರಿಯ ಕಲಾವಿದ ಶಿವಕುಮಾರ್ ಬೇಗೂರ್‌ರವರನ್ನು ಸನ್ಮಾನಿಸಿ ಗೌರವಿಸಿರುವುದು ಈ ಮೂರು ಸಾಂಸ್ಕೃತಿಕ ಸಂಘಟನೆಗಳ ಗೌರವ ಹೆಚ್ಚಳವಾಗಿದೆ ಎಂದರು.

ಯಕ್ಷಗಾನ ಹುಟ್ಟಿದ್ದೇ ದಶಾವತಾರ ಕಥೆಗಳನ್ನು ಸಾರ್ವಜನಿಕರಿಗೆ ಮುಟ್ಟಿಸುವ ಉದ್ದೇಶದಿಂದ ಹುಟ್ಟಿರುವ ಜಾನಪದ ಕಲೆಯಾಗಿದ್ದು, ಹೊಸತನಗಳಿಗೆ ಪ್ರವೇಶ ಪಡೆದುಕೊಳ್ಳುತ್ತ, ತನ್ನ ಅಸ್ತಿತ್ವವನ್ನು ಗಟ್ಟಿಗೊಳಿಸುವ ಕಲೆಯಾಗಿದ್ದು. ಇದು ಅಳಿಯುವ ಕಲೆಯಲ್ಲ ಎಂದು ಸ್ಪಷ್ಟಪಡಿಸಿದರು.

ಒಂದು ವಸ್ತುವಿನ ವೈವಿಧ್ಯತೆಗಳನ್ನು ಸಿಂಗಾರ ಮಾಡಿಕೊಂಡಿರುವ ಕಲೆ ಯಕ್ಷಗಾನವಾಗಿದೆ. ಜನಸಾಮಾನ್ಯರಿಗೆ ಸರ್ಕಾರದ ಕಾರ್ಯಕ್ರಮಗಳ ಬಗ್ಗೆ ಅರಿವು ಮೂಡಿಸುವಲ್ಲಿ ಈ ಕಲೆ ಪ್ರಸಿದ್ಧಿಯಾಗಿದೆ ಎಂದ ಅವರು, ಧೂಮಪಾನ, ಮದ್ಯಪಾನ, ಸಾಕ್ಷರತೆ ಮುಂತಾದವುಗಳ ಕುರಿತು ಜಾಗೃತಿ ಮೂಡಿಸುವುದಕ್ಕಾಗಿ ಈ ಯಕ್ಷಗಾನ ಕಲೆಯನ್ನು ಬಳಸಲಾಗುತ್ತಿದೆ ಎಂದು ಹೇಳಿದರು.

ಕಥೆ ಒಳಗೊಳ್ಳುವಿಕೆಯನ್ನು ಮೈಗೂಡಿಸಿಕೊಂಡು ಅಪರೂಪದ ಕಲೆಯ ಮೂಲಕ ಮಾಯಾಶೂರ್ಪನಕಿ ಯಕ್ಷಗಾನ ಪ್ರದರ್ಶನವಾಗುತ್ತಿದೆ ಎಂದು ಶ್ಲಾಘಿಸಿದರು.

ಖ್ಯಾತ ಮಕ್ಕಳ ವೈದ್ಯ ಡಾ. ಜೆ.ಪಿ ಕೃಷ್ಣೇಗೌಡ ಮಾತನಾಡಿ, 16ನೇ ಶತಮಾನದಲ್ಲಿದ್ದ ಬಹುಮುಖ್ಯವಾದ ಕಲೆ ಯಕ್ಷಗಾನ ಎಂದ ಅವರು, ಇದರಲ್ಲಿ ಗಾನ, ನಾಟ್ಯ, ಮಾತುಕತೆಯನ್ನು ಹೊಂದಿರುವ ಅದ್ಭುತವಾದ ಕಲೆಯಾಗಿದೆ ಎಂದು ಬಣ್ಣಿಸಿದರು.

ಸಾಹಿತಿ ಡಾ. ಶಿವರಾಂ ಕಾರಂತರು ಈ ಕಲೆಯ ಪಿತಾಮಹರಾಗಿದ್ದು, ಉಳಿಸಿ ಬೆಳೆಸಿದ್ದಾರೆ. ಅಂತಹ ಅದ್ಭುತ ಕಲೆಯ ಪ್ರದರ್ಶನದಲ್ಲಿ ಸ್ಥಳೀಯ 9 ಮಹಿಳೆಯರು ಭಾಗವಹಿಸಿರುವುದು ಹೆಮ್ಮೆಯ ಸಂಗತಿ ಎಂದರು.

ತಬಲ, ವಾದ್ಯ, ಹಿನ್ನೆಲೆ, ನೃತ್ಯ, ಸಂಗೀತ ಎಲ್ಲವನ್ನೂ ಮೀರಿದ ಕಲೆ ಯಕ್ಷಗಾನವಾಗಿದೆ. 21 ನೇ ಶತಮಾನದಲ್ಲಿ ಕಲೆ ನಶಿಸುತ್ತಿರುವ ಈ ಸಂದರ್ಭದಲ್ಲಿ ಕಲೆಯನ್ನು ಉಳಿಸಲು ಯಕ್ಷಸಿರಿ ನಾಟ್ಯವೃಂದದ ಪ್ರಯತ್ನ ಶ್ಲಾಘನೀಯ ಎಂದು ಹೇಳಿದರು.

ಹಿರಿಯ ಯಕ್ಷಗಾನ ಕಲಾವಿದ ಶಿವಕುಮಾರ್ ಬೇಗಾರ್ ಯಕ್ಷಸಿರಿ ನಾಟ್ಯವೃಂದದವರ ವಾರ್ಷಿಕ ಗೌರವ ಸ್ವೀಕರಿಸಿ ಮಾತನಾಡಿ ಕನ್ನಡ ಭಾಷೆಯನ್ನು ಸ್ವಚ್ಛವಾಗಿ ಕಲಿಯುವುದರ ಜೊತೆಗೆ ಭಾಷೆಯನ್ನು ಉಳಿಸಿ ಬೆಳೆಸಬೇಕಾದರೆ ಅದು ಯಕ್ಷಗಾನ ಕಲಿಕೆಯಿಂದ ಮಾತ್ರ ಸಾಧ್ಯ. ಭಾಷಾ ಶುದ್ಧತೆಯ ಯಕ್ಷಗಾನ ಭಾವ ಶುದ್ಧಿಗೂ ಪ್ರೇರಣೆ ನೀಡುತ್ತದೆ. ಚಿಕ್ಕಮಗಳೂರಿನ ಹವ್ಯಾಸಿ ಕಲಾವಿದರುಗಳು ವೃತ್ತಿಪರರಿಗೆ ಬೆರಗು ಮೂಡಿಸುವಂತೆ ಕಲಾವಿದರಾಗಿ ರೂಪುಗೊಳ್ಳುತ್ತಿರುವುದು ಶ್ಲಾಘನೀಯ. ಕಲಾವಿದರನ್ನು ಗೌರವಿಸುವುದೆಂದರೆ ಒಂದು ನೆಲದ ಸಂಸ್ಕೃತಿಯನ್ನು ಗೌರವಿಸಿದಂತೆ ಎಂದು ತಿಳಿಸಿದರು.

ಹಿಮ್ಮೇಳನದಲ್ಲಿ ಶಾಲಿನಿ ಹೆಬ್ಬಾಳ್, ಮುರಾರಿ ಕಡಂಬಳಿತ್ತಾಯ, ವರುಣ್ ಹೆಬ್ಬಾರ್, ಮಹೇಶ್‌ಕಾಕತ್ಕರ್, ಮುಮ್ಮೇಳದಲ್ಲಿ ಪರಮೇಶ್ವರ್, ಶೋಭಾ, ಅಶ್ವತ್ಥ್‌ಕುಲಾಲ್, ರೇಖಾನಾಗರಾಜರಾವ್, ಸುರೇಶ್ ಭಟ್, ಅನುರುದ್ಧ. ಎಮ್ ಕಾಕತ್ಕರ್, ರವಿಶಂಕರ ಭಟ್. ಕೆ.ಎಸ್, ವೈಷ್ಣವಿ.ಎನ್.ರಾವ್, ಅಪೂರ್ವವೆಂಕಟೇಶ್, ಪೂರ್ಣಿಮಾ, ಶ್ರೀವತ್ಸ, ರಮ್ಯ, ಸುರಭಿ, ಹಿಮಗಿರಿ, ಸೌಮ್ಯವಿರೇಂದ್ರ ಭಾಗವಹಿಸಿದ್ದರು.

ಈ ಸಂದರ್ಭದಲ್ಲಿ ಲಯನ್ಸ್ ಸಂಸ್ಥೆ ಅಧ್ಯಕ್ಷ ಸಿ.ಎನ್. ಕುಮಾರ್, ಮಾಜಿ ಅಧ್ಯಕ್ಷ ಜಿ.ರಮೇಶ್, ಗಾಯಕ ಮಲ್ಲಿಗೆ ಸುಧೀರ್, ಡಾ. ಸಿ.ಕೆ ಸುಬ್ರಾಯ, ನಾಗರಾಜ್‌ರಾವ್ ಕಲ್ಕಟ್ಟೆ, ರಮೇಶ್ ಬೇಗಾರ್, ಅಣ್ಣಾವೇಲು ವೆಂಕಟೇಶ್, ಗೋಪಿಕೃಷ್ಣ, ಯಕ್ಷಗಾನ ಅಭಿಮಾನಿ ಬಳಗದ ಸುರೇಂದ್ರ ಶೆಟ್ಟಿ, ಗಾಯಕ, ಎಂ ಎಸ್ ಸುಧೀರ್ ಮತ್ತಿತರರು ಉಪಸ್ಥಿತರಿದ್ದರು.

# ಸಾವಿರಾರು ಜನರಿಗೆ ಬದುಕು ಕೊಟ್ಟ ಶ್ರೀ ಸತ್ಯಸಾಯಿಬಾಬಾ

**ಚಿಕ್ಕಮಗಳೂರು:** ಶ್ರೀಸತ್ಯ ಸಾಯಿಬಾಬಾ ಅವರು ಹೃದಯ ಶಸ್ತ್ರ ಚಿಕಿತ್ಸೆಗಾಗಿ ಉಚಿತ ಆಸ್ಪತ್ರೆ ಆರಂಭಿಸುವ ಮೂಲಕ ಸಾವಿರಾರು ಜನರಿಗೆ ಬದುಕು ಕೊಟ್ಟಿದ್ದಾರೆ. ಅಲ್ಲದೆ ತಮ್ಮಲ್ಲಿದ್ದ ಅಗಾಧ ಶಕ್ತಿಯಿಂದಾಗಿ ಲಕ್ಷಾಂತರ ಜನರನ್ನು ಸನ್ಮಾರ್ಗದಲ್ಲಿ ನಡೆಸಿದ್ದಾರೆ ಎಂದು ಶಾಸಕ ಎಚ್.ಡಿ.ತಮ್ಮಯ್ಯ ಬಣ್ಣಿಸಿದರು.



ನಗರದ ಮಧುವನ ಬಡಾವಣೆಯ ಶ್ರೀ ಸತ್ಯಸಾಯಿ ಸೇವಾ ಕ್ಷೇತ್ರದಲ್ಲಿ ಭಾನುವಾರ ಆಯೋಜಿಸಲಾಗಿದ್ದ ಭಗವಾನ್ ಶ್ರೀ ಸತ್ಯಸಾಯಿ ಬಾಬಾರ ಜನ್ಮಶತಾಬ್ಧ ವರ್ಷಾಚರಣೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಸಾವಿರಾರು ವರ್ಷಗಳ ಇತಿಹಾಸ ಹೊಂದಿರುವ ದೇಶ ಭಾರತ. ಹಾಗೆಯೇ ವಿವಿಧತೆಯಲ್ಲಿ ಏಕತೆ ಇರುವ ದೇಶವೂ ನಮ್ಮದು. ಆದರೆ ವೈವಿಧ್ಯತೆ ನಡುವೆಯೂ ನಮ್ಮ ಭಕ್ತಿ, ಶ್ರದ್ಧೆ ಎಲ್ಲವೂ ಒಂದೇ ಆಗಿರುವುದು ವಿಶೇಷ ಎಂದರು.

ನಮ್ಮಲ್ಲಿನ ಧಾರ್ಮಿಕತೆ ಹಾಗೂ ಸಂಸ್ಕೃತಿಯಿಂದಾಗಿ ಇಂದಿಗೂ ನಾವೆಲ್ಲರೂ ಗಟ್ಟಿಯಾಗಿದ್ದೇವೆ ಇದೇ ಕಾರಣದಿಂದಲೇ ನಾವು ಪರಸ್ಪರ ನಂಬಿಕೆಯಿಂದಲೇ ಬದುಕು ಕಟ್ಟಿಕೊಂಡು ಬದುಕುತ್ತಿದ್ದೇವೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ನಗರಸಭಾಧ್ಯಕ್ಷೆ ಶೀಲಾ ದಿನೇಶ್, ಸಮಿತಿ ಅಧ್ಯಕ್ಷ ಎಂ.ಆರ್.ನಾಗರಾಜ್, ಜಿಲ್ಲಾಧ್ಯಕ್ಷ ಶಿವಮೂರ್ತಿ, ಖಜಾಂಚಿ ಭೋಜೇಗೌಡ ಮತ್ತಿತರರಿದ್ದರು.

ಭಗವಾನ್ ಶ್ರೀ ಸತ್ಯಸಾಯಿ ಬಾಬಾರ ಜನ್ಮಶತಾಬ್ಧ ವರ್ಷಾಚರಣೆ ಹಿನ್ನೆಲೆಯಲ್ಲಿ ಬೆಳಗ್ಗೆ 5.15ಕ್ಕೆ ಓಂಕಾರ ಮತ್ತು ಸುಪ್ರಭಾತ ನಂತರ ನಗರ ಸಂಕೀರ್ತನೆ ನಡೆಯಿತು. 8ಗಂಟೆಗೆ ಪ್ರಶಾಂತಿ ಧ್ವಜಾರೋಹಣವನ್ನು ಸತ್ಯಸಾಯಿ ಸೇವಾ ಸಂಸ್ಥೆಗಳ ಬಿ.ಪಿ.ಶಿವಮೂರ್ತಿ ನೆರವೇರಿಸಿದರು. ಬಳಿಕ ಐ.ಜಿ.ರಸ್ತೆಯಿಂದ ಸಾಯಿಮಂದಿರದವರೆಗಿನ ಮಾರ್ಗಕ್ಕೆ ಶ್ರೀಸತ್ಯಸಾಯಿ ರಸ್ತೆ ಎಂಬ ನಾಮಕರಣ ಮಾಡಿ ನಾಮಫಲಕ ಅನಾವರಣಗೊಳಿಸಲಾಯಿತು.

ಬೆಳಿಗ್ಗೆ 9 ಗಂಟೆಯಿಂದ ಶ್ರೀ ದೇವಿ ಗುರುಕುಲದ ವೇ.ಬ್ರ.ವಿದ್ವಾನ್ ಡಾ.ಜಿ.ದ ಂ'ಾನ'ಂದ ವ'ುೂರ್ತಿ ಶಾಸ್ತ್ರಿ ತಂಡದವರಿಂದ ಶ್ರೀಗಿರಿಜಾ ಕಲ್ಯಾಣ ಮಹೋತ್ಸವ ನಡೆಯಿತು. ಬೆಳಗ್ಗೆ 11ಗಂಟೆಗೆ ಭಜನೆ, ಸತ್ಸಂಗ ನಂತರ ಮಹಾಮಂಗಳಾರತಿ, ಮಧ್ಯಾಹ್ನ 12.30ರಿಂದ 2ರವರೆಗೆ ನಗರದ ವಿವಿಧೆಡೆಯ ಸಾಯಿಭಕ್ತರಿಂದ ನಾರಾಯಣಸೇವೆ, ವಸ್ತ್ರ ವಿತರಣೆ, ಪ್ರಸಾದ ವಿತರಣೆ ನೆರವೇರಿತು.

ಸಂಜೆ 4.30ಕ್ಕೆ ಶ್ರೀಕಾಮಧೇನು ಗಣಪತಿ ದೇವಸ್ಥಾನದಿಂದ ನಗರಸಂಕೀರ್ತನೆ ಮತ್ತು ಶ್ರೀಸತ್ಯ ಬಾಬಾರ ಮೆರವಣಿಗೆ ಉತ್ಸವ ಆರಂಭಗೊಂಡು ಬಸವನಹಳ್ಳಿ, ಎಂ.ಜಿ.ರಸ್ತೆಯ ಮೂಲಕ ಮಂದಿರ ತಲುಪಿತು. ಸಂಜೆ 6.30ಕ್ಕೆ ನೃತ್ಯ ಮತ್ತಿತರ ಸಾಂಸ್ಕೃತಿ ಕಾರ್ಯಕ್ರಮ, ಬಾಲವಿಕಾಸ ಮಕ್ಕಳಿಂದ ಶ್ರೀಸಾಯಿ ದಿವ್ಯಕಥಾ ಪ್ರದರ್ಶನ, ಭಗವಾನ್ ಬಾಬಾರ ದಿವ್ಯೋಪನ್ಯಾಸದ ವಿಡೀಯೋ ಪ್ರದರ್ಶನ, ಬಳಿಕ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪುರಸ್ಕಾರ, ರಂಗೋಲಿ ಸ್ಪರ್ಧೆ ವಿಜೇತರಿಗೆ ಬಹುಮಾನ ವಿತರಣೆ ನೆರವೇರಿತು.

## ಗ್ಯಾರಂಟಿ ಯೋಜನೆಗಳ ಅನುಷ್ಟಾನ ಪ್ರಾಧಿಕಾರದ ತಾಲೂಕು ಮಟ್ಟದ ಸದಸ್ಯರಿಗೆ ಗ್ರಾಮ ಪಂಚಾಯತಿಗಳ ಉಸ್ತುವಾರಿ

**ಗದಗ :** ಗ್ಯಾರಂಟಿ ಯೋಜನೆಗಳ ಸಂಪೂರ್ಣವಾದ ಸಮರ್ಪಕ ನಿರ್ವಹಣೆ ಪರಿಣಾಮಕಾರಿಯಾಗಿ ಗದಗ ತಾಲೂಕಿನಲ್ಲಿ ಜಾರಿಗೊಳಿಸುವ ದೃಷ್ಟಿಯಿಂದ ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಟಾನ ಪ್ರಾಧಿಕಾರದ ತಾಲೂಕು ಸಮಿತಿಯ ಸದಸ್ಯರನ್ನು ತಾಲೂಕು ಮಟ್ಟದ ಜವಾಬ್ದಾರಿಯೊಂದಿಗೆ ಕೆಳಕಂಡ ಗ್ರಾಮ ಪಂಚಾಯತಿಗಳಿಗೆ ಉಸ್ತುವಾರಿಗಳನ್ನಾಗಿ ಕರ್ತವ್ಯ ನಿರ್ವಹಿಸಲು ತಾಲೂಕಾಧ್ಯಕ್ಷ ಅಶೋಕ ಮಂದಾಲಿ ತಿಳಿಸಿದ್ದಾರೆ.

ಗ್ರಾಮ ಪಂಚಾಯತಿಗಳಿಗೆ ಉಸ್ತುವಾರಿಗಳನ್ನಾಗಿ ಕರ್ತವ್ಯ ನಿರ್ವಹಿಸಲು ದಯಾನಂದ ಪವಾರ ಅವರಿಗೆ ನಾಗಾವಿ ಮತ್ತು ಕಳಸಾಪುರ (ಮೊ ಸಂ 9980632306), ಸಂಗು ಕರಕಲಮಟ್ಟಿ ಅವರಿಗೆ ವಾರ್ಡ್ ನಂಬರ್ 19, 20, 22, 30, ಮತ್ತು 34 (ಮೊ ಸಂ 9148220894), ಎನ್ ಬಿ ದೇಸಾಯಿ ಅವರಿಗೆ ಸೊರಟೂರ ಮತ್ತು ಬೆಳದಡಿ (ಮೊ ಸಂ 9972126009), ಸಂಗಮೇಶ ಹಾದಿಮನಿ ಅವರಿಗೆ ವಾರ್ಡ್ ನಂಬರ್ 3, 4, 5, ಮತ್ತು 6 (ಮೊ ಸಂ 9900236935), ರಮೇಶ ಹೊನ್ನಿನಾಯ್ಕರ ಅವರಿಗೆ ಹರ್ತಿ ಮತ್ತು ಯಲಿಶಿರುಂದ (ಮೊ ಸಂ 6366306230) ಉಸ್ತುವಾರಿಗಳನ್ನಾಗಿ ಕರ್ತವ್ಯ ನಿರ್ವಹಿಸಲು ತಿಳಿಸಲಾಗಿದೆ.

## ಪರಿಸರ ರಕ್ಷಣೆ ಪ್ರತಿಯೊಬ್ಬರ ಜವಾಬ್ದಾರಿ – ಡಾ ರಾಜೇಂದ್ರ ಗಡಾದ

**ಗದಗ :** ಪ್ಲಾಸ್ಟಿಕ್‌ನಂತಹ ವಿಷಕಾರಿ ವಸ್ತುಗಳು ನೈಸರ್ಗಿಕ ಸಂಪನ್ಮೂಲಗಳಾದ ಮಣ್ಣು ನೀರು ಗಾಳಿ ಇವುಗಳೊಂದಿಗೆ ಬೆರೆಯುವುದರಿಂದ ಮತ್ತು ಇನ್ನಿತರ ಹಾನಿಕಾರಕ ಪದಾರ್ಥಗಳು ಪರಿಸರದೊಂದಿಗೆ ಬೆರೆತು ಜೀವಿಗಳ ಆರೋಗ್ಯಕ್ಕೆ ಸಂಚಕಾರವನ್ನು ಉಂಟು ಮಾಡಿ ಮಾರಣಾಂತಿಕ ಕಾಯಿಲೆಗಳಿಗೆ ನೂಕುತ್ತಿವೆ ಆದ್ದರಿಂದ ಪ್ರತಿಯೊಬ್ಬರೂ ಪರಿಸರವನ್ನು ಜವಾಬ್ದಾರಿಯಿಂದ ರಕ್ಷಣೆ ಮಾಡಬೇಕು ಎಂದು ತಾಲೂಕ ಆರೋಗ್ಯ ಶಿಕ್ಷಣಾಧಿಕಾರಿಗಳಾದ ಡಾ. ರಾಜೇಂದ್ರ ಎಸ್ ಗಡಾದ ಅವರು ಹೇಳಿದರು.



ಗದಗ ತಾಲೂಕ ಆರೋಗ್ಯ ಅಧಿಕಾರಿಗಳ ಕಾರ್ಯಾಲಯ ವತಿಯಿಂದ ಇಲ್ಲಿಯ ದಂಡಪ್ಪ ಮಾನ್ವಿ ಹೆರಿಗೆ ಆಸ್ಪತ್ರೆಯಲ್ಲಿ ಏರ್ಪಡಿಸಲಾಗಿದ್ದ ರಾಷ್ಟ್ರೀಯ ಮಾಲಿನ್ಯ ನಿಯಂತ್ರಣ ದಿನಾಚರಣೆಯ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಅವರು ಪರಿಸರ ಮಾಲಿನ್ಯ ಜೀವಸಂಕುಲದ ಮೇಲೂ ಅಪಾರವಾದ ವ್ಯತಿರಿಕ್ತ ಪರಿಣಾಮವನ್ನು ಬೀರುತ್ತಿದ್ದು ಇದು ಹಲವು ರೋಗಗಳಿಗೆ ಕಾರಣವಾಗಿದೆ ಮುಂದಿನ ಪೀಳಿಗೆಗೆ ಉತ್ತಮ ಜೀವನ ನೀಡಲು ಉತ್ತಮ ಪರಿಸರ ಅಗತ್ಯವಾಗಿದ್ದು ಮಾಲಿನ್ಯ ಮುಕ್ತ ಪರಿಸರಕ್ಕೆ ಸಾರ್ವಜನಿಕರು ನಾಗರಿಕರು ವಿದ್ಯಾರ್ಥಿಗಳು ಮಹಿಳೆಯರು ಸ್ವಯಂ ಜಾಗೃತರಾಗಿ ಶ್ರಮಿಸಬೇಕಾಗಿದೆ ಮತ್ತು ಇವುಗಳ ಬಗ್ಗೆ ಇತರರಿಗೆ ತಿಳಿಸಬೇಕಾಗಿರುವುದು ತೀರ ಅವಶ್ಯವಾಗಿದೆ ಎಂದರು.

ಈ ಕಾರ್ಯಕ್ರಮದ ವೇದಿಕೆಯಲ್ಲಿ ತಾಲೂಕ ಆರೋಗ್ಯ ಅಧಿಕಾರಿಗಳ ಕಾರ್ಯಾಲಯದ ಶ್ರೀಮತಿ ಸುಧಾ ಬೆಂತೂರ, ಗುಡದಪ್ಪ ಜಗ್ಗಿನ ಭೂದೇಶ್ ಸಿದ್ದನಗೌಡರ ಆಸೀನರಾಗಿದ್ದರು.

ಆರಂಭದಲ್ಲಿ ಶ್ರೀಮತಿ ನಿರ್ಮಲ ಮರಿಗೌಡ ಪ್ರಾರ್ಥಿಸಿದರು ಲೀಲಾವತಿ ಚಲವಾದಿ ಸ್ವಾಗತಿಸಿದರು. ಬಿಎಸ್ ಸಿದ್ದನಗೌಡ ಕಾರ್ಯಕ್ರಮ ರೂಪಿಸಿದರು ಕೊನೆಯಲ್ಲಿ ಮೌಲಾನ ಸಿದ್ದಿ ವಂದಿಸಿದರು.

ಈ ಕಾರ್ಯಕ್ರಮದಲ್ಲಿ ತಾಲೂಕಿನ ವಿವಿಧ ಪ್ರಾಥಮಿಕ ಆರೋಗ್ಯ ಕೇಂದ್ರದ ಸಿಬ್ಬಂದಿ ವರ್ಗದವರು ಆಶಾ ಕಾರ್ಯಕರ್ತೆಯರು ಸಾರ್ವಜನಿಕರು ವಿದ್ಯಾರ್ಥಿಗಳು ಮಕ್ಕಳು ಮತ್ತು ರೋಗಿಗಳು ಪಾಲಕರು ಪಾಲ್ಗೊಂಡಿದ್ದರು.

## ನೂತನ ಸ್ವಸ್ತಿಕ್ ಚಾಯ್ ಹೊಸ ಶಾಖೆ ಉದ್ಘಾಟಿಸಿದ ಕೆ.ಎಸ್. ಈಶ್ವರಪ್ಪ

**ಶಿವಮೊಗ್ಗ :** ನಗರದ ರಾಜೇಂದ್ರನಗರ, ಲಕ್ಷ್ಮೀ ಟಾಕೀಸ್ ಹಿಂಭಾಗ ಆಕ್ಸಿಸ್ ಬ್ಯಾಂಕ್ ಹತ್ತಿರ ಸ್ಥಾಪಿತವಾಗಿರುವ ಸ್ವಸ್ತಿಕ್ ಚಾಯ್‌ನ ಹೊಸ ಶಾಖೆಯನ್ನು ಮಾಜಿ ಉಪಮುಖ್ಯಮಂತ್ರಿ ಕೆ.ಎಸ್. ಈಶ್ವರಪ್ಪ ಇಂದು ಬೆಳಿಗ್ಗೆ ಉದ್ಘಾಟನೆಯನ್ನು ನೆರವೇರಿಸಿದರು.




ಹೊಸ ಶಾಖೆಯ ಉದ್ಘಾಟನೆಯೊಂದಿಗೆ ನಗರದಲ್ಲಿ ಗುಣಮಟ್ಟದ ಚಹಾ ಸೇವೆ ಮತ್ತು ಕುಟುಂಬಸ್ನೇಹಿ ವಾತಾವರಣ ಒದಗಿಸುವತ್ತ ಸಂಸ್ಥೆಯ ಬದ್ಧತೆ ಮತ್ತಷ್ಟು ಬಲಪಡಲಿದೆ ಎಂದು ವ್ಯವಸ್ಥಾಪಕ ತಿಳಿಸಿದರು.

ಈ ಸಂದರ್ಭದಲ್ಲಿ ಭಾರತೀ ಕ್ರೆಡಿಟ್ ಕೋ ಆಪರೇಟಿವ್ ಸೊಸೈಟಿ ಅಧ್ಯಕ್ಷ ಎ. ಶಿವಕುಮಾರ್, ರೇಖಾ ರಂಗನಾಥ್, ಮಾಲೀಕರಾದ ಸುರೇಶ್, ಕಿಶನ್, ನಿತೀನ್ ಸೇರಿದಂತೆ ಕುಟುಂಬದವರು, ಸ್ನೇಹಿತರು ಪಾಲ್ಗೊಂಡು ಶುಭ ಹಾರೈಸಿದರು.

## ಜಿಲ್ಲಾ ಮಟ್ಟದ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರಿಗೆ ಸಹಪಠ್ಯ ಚಟುವಟಿಕೆ

**ಶಿವಮೊಗ್ಗ:** 2025–26ನೇ ಸಾಲಿನ ಜಿಲ್ಲಾ ಮಟ್ಟದ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರುಗಳಿಗೆ ಡಿ. 11 ರಂದು ಬೆಳಗ್ಗೆ 10.00 ರಿಂದ ಬಿ.ಹೆಚ್.ರಸ್ತೆಯ ಕರ್ನಾಟಕ ಪಬ್ಲಿಕ್ ಶಾಲೆಯಲ್ಲಿ ಸಹಪಠ್ಯ ಚಟುವಟಿಕೆ ಸ್ಪರ್ಧೆಗಳನ್ನು ಆಯೋಜಿಸಲಾಗಿದೆ.
ಭಕ್ತಿಗೀತೆ, ಆಶುಭಾಷಣ, ಪ್ರಬಂಧ ಸ್ಪರ್ಧೆ, ಸ್ಥಳದಲ್ಲೇ ಪಾಠೋಪಕರಣ ತಯಾರಿಕಾ ಸ್ಪರ್ಧೆ, ಸ್ಥಳದಲ್ಲೇ ಚಿತ್ರ ಬರೆಯುವ ಸ್ಪರ್ಧೆ ಹಾಗೂ ಸಾಮಾನ್ಯ ಜ್ಞಾನ ಮತ್ತು ವಿಜ್ಞಾನ ವಿಷಯಗಳ ಕುರಿತು ರಸಪ್ರಶ್ನೆ ಸ್ಪರ್ಧೆಗಳನ್ನು ನಡೆಸಲಾಗುತ್ತಿದ್ದು, ತಾಲೂಕು ಮಟ್ಟದಲ್ಲಿ ಪ್ರಥಮ ಸ್ಥಾನ ಪಡೆದ ಶಿಕ್ಷಕರು ಭಾಗವಹಿಸುವಂತೆ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರು (ಆ) ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

# ಮಠಗಳು ಉತ್ತಮ ಸಂಸ್ಕಾರ ನೀಡುವ ಕಾರ್ಯ ಮಾಡುತ್ತಿವೆ

**ಚನ್ನಗಿರಿ :** ಮಠಗಳು ಕೇವಲ ಧಾರ್ಮಿಕ ಕೇಂದ್ರಗಳು ಮಾತ್ರ ಆಗದೇ ದಾಸೋಹ ಮತ್ತು ಗುರುಕುಲಗಳಂತಾಗಿದ್ದು ಜನರಲ್ಲಿ ಉತ್ತಮ ಸಂಸ್ಕಾರ ನೀಡುವ ಕಾರ್ಯ ಮಾಡುತ್ತಿವೆ ಎಂದು ಮಾಜಿ ಶಾಸಕ ಮಾಡಾಳ್ ವಿರೂಪಾಕ್ಷಪ್ಪ ಹೇಳಿದರು.



**ಪಟ್ಟಣದ ಹಿರೇಮಠದಲ್ಲಿ ಹಮ್ಮಿಕೊಳ್ಳಲಾಗಿದ್ದ ಕಾರ್ತಿಕೋತ್ಸವ ಕಾರ್ಯಕ್ರಮವನ್ನು ಮಾಜಿ ಶಾಸಕ ಮಾಡಾಳ್ ವಿರೂಪಾಕ್ಷಪ್ಪ ದೀಪ ಬೆಳಗಿಸುವ ಮೂಲಕ ಉದ್ಘಾಟಿಸಿದರು.**

ಭಾನುವಾರ ಸಂಜೆ ಪಟ್ಟಣದ ಹಿರೇಮಠದಲ್ಲಿ ಹಮ್ಮಿಕೊಳ್ಳಲಾಗಿದ್ದ ಕಾರ್ತಿಕೋತ್ಸವ ಕಾರ್ಯಕ್ರಮವನ್ನು ದೀಪ ಬೆಳಗಿಸುವ ಮೂಲಕ ಉದ್ಘಾಟಿಸಿ ಮಾತನಾಡಿ ಪಟ್ಟಣದಲ್ಲಿ ಇರುವ ಎರಡು ಮಠಗಳು ಎರಡು ಕಣ್ಣುಗಳಂತೆ ಎರಡೂ ಮಠದ ಸ್ವಾಮಿಗಳು ಸಹೋದರತ್ವ ಬೆಳೆಸಿಕೊಂಡಿದ್ದು ಸಹ ಚಿಕ್ಕ ವಯಸ್ಸಿನಲ್ಲಿಯೇ ಸನ್ಯಾಸತ್ವವನ್ನು ಸ್ವೀಕರಿಸಿ ಮಠಗಳ ಅಭಿವೃದ್ದಿ ಮಾಡಿದ್ದು ಜೊತೆಗೆ ಜನಜಾಗೃತಿಯನ್ನು ಸಹ ಮೂಡಿಸಿದ್ದಾರೆ ಎಂದರು.

ಶ'ಂಕ'ರಾಚಾಂ'ರ್ಯ'ರು ಜಗತ್ಪ್ರಸಿದ್ದರಾಗಿದ್ದು ಅವರು ರೇಣುಕರ ಶಿಷ್ಯರಾಗಿದ್ದು ಅವರಿಗೆ ಲಿಂಗ ಬೋಧನೆಯನ್ನು ಮಾಡಿ ಶಿವಲಿಂಗವನ್ನು ದೀಕ್ಷೆ ಮಾಡಿದ್ದರು. ಅಂತಹ ರೇಣುಕ ಕೃಪಾಶೀರ್ವಾದದಿಂದ ಇಂತಹ ಮಠಗಳು ನಡೆಯುತ್ತಿವೆ ಎಂದರು. ಈ ಮಠದ ಅಭಿವೃದ್ದಿಗೆ ನಾನು ಶಾಸಕನಾಗಿದ್ದ ಸಂದರ್ಭದಲ್ಲಿ ಅನುದಾನವನ್ನು ಮಂಜೂರು ಮಾಡಿದ್ದು ಅದನ್ನು ಉತ್ತಮವಾದ ರೀತಿಯಲ್ಲಿ ಸದ್ಬಳಕೆ ಮಾಡಿಕೊಂಡು ಮಠವನ್ನುಉತ್ತಮ ರೀತಿಯಲ್ಲಿ ಶ್ರೀ ಬೆಳೆಸಿದ್ದಾರೆ ಎಂದರು. ಮತ್ತು ಮಠದಲ್ಲಿ ಕಾರ್ಯಕ್ರಮಕ್ಕೆ ಬಂದಂತಹ ಭಕ್ತಾದಿಗಳು ಕುಳಿತುಕೊಳ್ಳಲು 100 ಕುರ್ಚಿಗಳನ್ನು ನೀಡುವುದಾಗಿ ತಿಳಿಸಿದರು.

ಕಾರ್ಯಕ್ರಮದ ಸಾನಿಧ್ಯವನ್ನು ವಹಿಸಿದ್ದ ಚನ್ನಗಿರಿ ಹಾಲಸ್ವಾಮಿ ವಿರಕ್ತ ಮಠದ ಡಾ. ಬಸವಜಯಚಂದ್ರಸ್ವಾಮಿಗಳು ಮಾತನಾಡಿ ಮಾನವನು ಧರ್ಮವಂತನಾಗಲು ಲಿಂಗವನ್ನು ಅಂಗೈನಲ್ಲಿ ನೀಡಿದವರು ಬಸವೇಶ್ವರರು. ಆ ಲಿಂಗದ ಪೂಜೆ ಅನುಷ್ಠಾನವನ್ನು ಸರಿಯಾದ ರೀತಿಯಲ್ಲಿ ಮಾಡುವ ಮೂಲಕ

ನಮ್ಮ ನಿತ್ಯ ಕಾಯಕಕ್ಕೆ ಹೆಚ್ಚಾಇನ ಮಹತ್ವ ನೀಡಬೇಕು. ಧರ್ಮದ ಜಾಗೃತಿ ಮತ್ತು ಜನರ ಮನದಲ್ಲಿ ಉತ್ತಮ ಸಂಸ್ಕಾರ ಮತ್ತು ಒಳ್ಳೆಯ ಬಾವನೆಗಳನ್ನು ಬಿತ್ತುವಂತಹ ಕಾರ್ಯವನ್ನು ಹಿರೇಮಠದ ಶ್ರೀಗಳು ಮಾಡುತ್ತಾ ಬಂದಿದ್ದಾರೆ ಎಂದರು.

ಹಿರೇಮಠದ ಕೇದಾರಲಿಂಗ ಶಿವ'ಶಾಂತ'ವೀರ'ಸ್ವಾಮಿಗ'ಳು ಮಾತನಾಡಿ ಷಟಸ್ಥಲ, ಅಷ್ಟಾವರಣ, ಪಂಚ ಆಚಾರಗಳು,ದಶಸೂತ್ರಗಳು ಆತ್ಮೋದ್ದಾರ ಮಾಡಿಕೊಳ್ಳಲು ರೇಣಕಾಧಿ ಪಂಚಾಚಾರ್ಯರು ಕೊಟ್ಟಂತಹ ಮಹಿಮೆ ದೊಡ್ಡದು. ಅಂತಹ ಚಿಂತನೆಗಳ ಆದಾರದ ಮೇಲೆ ಕಾರ್ತಿಕೋತ್ಸವ ಮಾಡಲಾಗುತ್ತಿದೆ.

ಇದುವರೆಗೂ ಮಠದ ಅಭಿವೃದ್ದಿ ಮಾಜಿ ಶಾಸಕರು ಸೇರಿದಂತೆ ಸಾಕಷ್ಟು ಜನರು ಸಹಕಾರ ನೀಡಿದ್ದಾರೆ. ಮುಂದಿನ ದಿನ ಮಾನಗಳಲ್ಲಿ ಭಕ್ತಾದಿಗಳ ಸಹಕಾರದೊಂದಿಗೆ ಮತ್ತಷ್ಟು ಅಭಿವೃದ್ದಿ ಮಾಡಲಾಗವುದು ಎಂದರು. ಈ ಸಂದರ್ಭದಲ್ಲಿ ವೀರಶೈವ ಸಮಾಜದ ಗೌರವಾಧ್ಯಕ್ಷ ರಾಜಶೇಖರಯ್ಯ, ಪುರಸಭೆ ಮಾಜಿ ಸದಸ್ಯೆ ಕಮಲ, ಜ್ಯೋತಿ ಕೋರಿ ,ಮಹೇಶ್ ಜವಳಿ, ಸಾಗರದ ಶಿವಲಿಂಗಪ್ಪ ಬೂದಿಸ್ವಾಮಿ, ರುದ್ರಯ್ಯ, ಗೌಡ್ರು ಮಂಜಣ್ಣ ಸೇರಿದಂತೆ ಇತರರು ಹಾಜರಿದ್ದರು.

# ಚನ್ನಕೇಶವ ದೇವಾಲಯದ ಮುಂಭಾಗ ವಾಹನಗಳ ನಿಲುಗಡೆ ನಿಷೇಧ

**ಹಾಸನ :** ಯುನೆಸ್ಕೋ ವಿಶ್ವ ಪರಂಪರೆ ತಾಣವಾದ ಬೇಲೂರಿನ ಶ್ರೀ ಚನ್ನಕೇಶವ ದೇವಾಲಯದ ಸೌಂದರ್ಯ, ಪ್ರವಾಸಿಗರ ಭದ್ರತೆ ಮತ್ತು ಸಂಸ್ಕೃತಿಕ ಶಿಸ್ತಿಗೆ ಧಕ್ಕೆಯಾಗುವುದನ್ನು ತಪ್ಪಿಸುವ ನಿಟ್ಟಿನಲ್ಲಿ ಹಾಗೂ ಸಾರ್ವಜನಿಕ/ಪ್ರವಾಸಿಗರ ಹಿತದೃಷ್ಟಿಯಿಂದ ಶ್ರೀ ಚನ್ನಕೇಶವ ದೇವಾಲಯದ ಮುಂಭಾಗ ಪ್ರವಾಸಿಗರ ಹಾಗೂ ಸಾರ್ವಜನಿಕರ ಎಲ್ಲಾ ರೀತಿಯ ವಾಹನಗಳ ನಿಲುಗಡೆಯನ್ನು ಜಿಲ್ಲಾಧಿಕಾರಿ ಹಾಗೂ ಜಿಲ್ಲಾದಂಡಾಧಿಕಾರಿ ಲತಾ ಕುಮಾರಿ ಅವರು ನಿಷೇಧಿಸಿ ಆದೇಶಿಸಿರುತ್ತಾರೆ.

ಶ್ರೀ ಚನ್ನಕೇಶವ ದೇವಾಲಯಕ್ಕೆ ಭೇಟಿ ನೀಡುವ ಪ್ರವಾಸಿಗರು/ಭಕ್ತಾಧಿಗಳು ಹಾಗೂ ಸಾರ್ವಜನಿಕರ ವಾಹನಗಳನ್ನು ದೇವಾಲಯದ ಹಿಂಭಾಗ ನಿಗಧಿಪಡಿಸಿರುವ ಪಾರ್ಕಿಂಗ್ ಸ್ಥಳದಲ್ಲಿ ನಿಲುಗಡೆ ಮಾಡಲು ಅವಕಾಶ ಕಲ್ಪಿಸಲಾಗಿದೆ. ಈ ಆದೇಶ ಉಲ್ಲಂಘಿಸಿದ ವಾಹನ ಮಾಲೀಕರಿಗೆ ರೂ.500 ಗಳ ದಂಡವನ್ನು ವಿಧಿಸಲಾಗುವುದು ಮತ್ತು ವಾಹನವನ್ನು ಟೋ (ಖಿಂತಿ) ಮಾಡುವ ಅಧಿಕಾರವನ್ನು ಸ್ಥಳೀಯ ಪೊಲೀಸರಿಗೆ ನೀಡಲಾಗಿದೆ ಎಂದು ತಿಳಿಸಿದ್ದಾರೆ.

# ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ವಿವಿಧ ಯೋಜನೆಗಳಿಗೆ ಅರ್ಜಿ ಆಹ್ವಾನ

**ಹಾಸನ :** ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮವು 2025-26 ನೇ ಸಾಲಿನ ಉದ್ಯೋಗಿನಿ, ಚೇತನಾ, ಧನಶ್ರೀ ಮತ್ತು ಲಿಂಗತ್ವ ಅಲ್ಪಸಂಖ್ಯಾತರ ಪುರ್ನವಸತಿ ಯೋಜನೆಗಳಡಿ ಸಾಲ ಸೌಲಭ್ಯ ಪಡೆಯಲು ಆಸಕ್ತಿವುಳ್ಳ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಿದೆ.

ಜಿಲ್ಲೆಯ ಅರ್ಹ ಮಹಿಳೆಯರು ಸೇವಾ ಸಿಂಧು ಪೋರ್ಟಲ್‌ನಲ್ಲಿ ಡಿಸೆಂಬರ್ 15 ರೊಳಗಾಗಿ ಬಾಪೂಜಿ ಸೇವಾ ಕೇಂದ್ರ, ಗ್ರಾಮ ಒನ್, ಕರ್ನಾಟಕ ಒನ್ ಕೇಂದ್ರಗಳಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ.

ಉದ್ಯೋಗಿನಿ ಯೋಜನೆ: 55 ವರ್ಷದ ಒಳಗಿನ ಮತ್ತು ವಾರ್ಷಿಕ ಆದಾಯ ರೂ 1,50,000 ದ ಒಳಗಿರುವ ನಿರುದ್ಯೋಗಿ ಮಹಿಳೆಯರು ಆದಾಯೋತ್ಪನ್ನ ಚಟುವಟಿಕೆ ಕೈಕೊಳ್ಳಲು ಬ್ಯಾಂಕ್ ಗಳಿಂದ ಗರಿಷ್ಟ ರೂ 3,00,000 ದವರೆಗೆ ಸಾಲ ಮತ್ತು ನಿಗಮದಿಂದ ಪರಿಶಿಷ್ಟ ಜಾತಿ ಮತ್ತು ಪಂಗಡದ ಸಮುದಾಯದವರಿಗೆ ಬ್ಯಾಂಕ್ ಸಾಲದ ಶೇ.50 (ಗರಿಷ್ಠ ರೂ 1,50,000) ಸಹಾಯಧನ ಮತ್ತು ಎಸ್.ಸಿ/ಎಸ್.ಟಿ ಹೊರತುಪಡಿಸಿ ಉಳಿದ ಎಲ್ಲಾ ಸಮುದಾಯದವರಿಗೂ ಶೇ.30 (ಗರಿಷ್ಟ 90,000) ಸಹಾಯಧನ ನೀಡಲಾಗುವುದು.

ಚೇತನಾ ಯೋಜನೆ : ದಮನಿತ ಮಹಿಳೆಯರು ಸ್ವಯಂ ಉದ್ಯೋಗ ಕೈಗೊಳ್ಳಲು ರೂ 30,000 ಪ್ರೋತ್ಸಾಹಧನ ನೀಡಲಾಗುವುದು. ಧನಶ್ರೀ ಯೋಜನೆ: ಹೆಚ್.ಐ.ವಿ ಸೋಂಕಿತ ಮತ್ತು ಭಾದಿತ ಮಹಿಳೆಯರು ಸ್ವಯಂ ಉದ್ಯೋಗ ಕೈಗೊಳ್ಳಲು ರೂ 30,000 ಪ್ರೋತ್ಸಾಹಧನ ನೀಡಲಾಗುವುದು. ಅರ್ಜಿಗಳನ್ನು ಆಫ್‌ಲೈನ್ ನಲ್ಲೂ ಸಹ ಸಲ್ಲಿಸಬಹುದಾಗಿದೆ.

ಲಿಂಗತ್ವ ಅಲ್ಪ ಸಂಖ್ಯಾತರ ಪುರ್ನವಸತಿ ಯೋಜನೆ: ಟ್ರಾನ್ಸ್‌ಜೆಂಡರ್ಸ್ ತೃತೀಯ ಲಿಂಗಿಗಳು ಸ್ವಯಂ ಉದ್ಯೋಗ ಕೈಗೊಳ್ಳಲು ರೂ.30,000 ಪ್ರೋತ್ಸಾಹಧನ ನೀಡಲಾಗುವುದು. ಅರ್ಜಿಗಳನ್ನು ಆಫ್‌ಲೈನ್ ನಲ್ಲೂ ಸಹ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಮಹಿಳಾ ಅಭಿವೃದ್ಧಿ ನಿಗಮ, ಉಪ ನಿರ್ದೇಶಕರ ಕಚೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕೆ.ಆರ್.ಪುರಂ, 9ನೇ ಅಡ್ಡರಸ್ತೆ, ಹಾಸನ ಇವರನ್ನು ಬೇಟಿ ಮಾಡಲು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರು ತಿಳಿಸಿದ್ದಾರೆ.

# ಡಿ.15 ರಂದು ವಿಕಲಚೇತನರುಗಳ ಕುಂದುಕೊರತೆ ಸಭೆ

**ಹಾಸನ :** ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಡಿ.15 ರಂದು ಬೆಳಿಗ್ಗೆ 10 ಗಂಟೆಗೆ ಜಿಲ್ಲಾಧಿಕಾರಿಯವರ ಕಚೇರಿ ಸಭಾಂಗಣದಲ್ಲಿ ವಿಕಲಚೇತನರುಗಳ ಕುಂದುಕೊರತೆ ಸಭೆ ನಡೆಯಲಿದ್ದು, ಸದರಿ ಸಭೆಗೆ ಜಿಲ್ಲೆಯಲ್ಲಿನ ವಿಕಲಚೇತನರು/ಸಂಘಸಂಸ್ಥೆಗಳ ಪದಾಧಿಕಾರಿಗಳು ಹಾಜರಾಗಿ ತಮ್ಮ ಕುಂದು ಕೊರತೆಗಳ ಬಗ್ಗೆ ಅಹವಾಲುಗಳನ್ನು ಸಲ್ಲಿಸಲು ಕೋರಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು, ಕೆ.ಆರ್.ಪುರಂ, ಹಾಸನ ರವರ ದೂರವಾಣಿ ಸಂಖ್ಯೆ: 08172-264546/48 ನ್ನು ಸಂಪರ್ಕಿಸಲು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಅವರು ತಿಳಿಸಿದ್ದಾರೆ.

# ವಿಭಾಗೀಯ ಕಚೇರಿಯ ಉದ್ಘಾಟನಾ ಸಮಾರಂಭ

**ಬಳ್ಳಾರಿ:** ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆಯ ನೂತನ ಕಾನೂನು ಅಧಿಕಾರಿ (ಹಿರಿಯ) ಯವರ ಬಳ್ಳಾರಿ ವಿಭಾಗೀಯ ಕಚೇರಿಯ ಉದ್ಘಾಟನಾ ಸಮಾರಂಭ ಕಾರ್ಯಕ್ರಮವನ್ನು ಡಿ.13 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಹಳೆಯ ನ್ಯಾಯಾಲಯ ಆವರಣದ ಅಭಿಯೋಜಕ ಭವನದಲ್ಲಿ ಏರ್ಪಡಿಸಲಾಗಿದೆ.ಗೃಹ ಸಚಿವ ಡಾ.ಜಿ.ಪರಮೇಶ್ವರ ಅವರು ನೂತನ ಕಚೇರಿಯ ಉದ್ಘಾಟನೆ ನೆರವೇರಿಸುವರು. ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಹಾಗೂ ಪ್ರವಾಸೋದ್ಯಮ ಸಚಿವ ಡಾ.ಎಚ್.ಕೆ ಪಾಟೀಲ್ ಅವರು 'ನೊಂದವರಿಗೆ ನ್ಯಾಯ' ಜಾಗೃತಿ ಅಭಿಯಾನ ಉದ್ಘಾಟಿಸುವರು.

ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಹಾಗೂ ಬಳ್ಳಾರಿ ಜಿಲ್ಲಾ ಉಸ್ತುವಾರಿ ಸಚಿವ ಬಿ.ಜಡ್ ಜಮೀರ್ ಅಹ್ಮದ್ ಖಾನ್ ಅವರು 'ನ್ಯಾಯ ಜ್ಯೋತಿ' ಸ್ಮರಣ ಸಂಚಿಕೆ ಬಿಡುಗಡೆ ಮಾಡುವರು. ಮಾಜಿ ಸಚಿವರು ಹಾಗೂ ಬಳ್ಳಾರಿ ಗ್ರಾಮೀಣ ಶಾಸಕ ಬಿ.ನಾಗೇಂದ್ರ ಅವರು ವಿಭಾಗೀಯ ಕಚೇರಿಯ ವೆಬ್ ಸೈಟ್ ಗೆ ಚಾಲನೆ ನೀಡಿವರು.

ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು.ಒಳಾಡಳಿತ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ತುಷಾರ್ ಗಿರಿನಾಥ್, ಬಳ್ಳಾರಿ ವಲಯ ಪೊಲೀಸ್ ಉಪ ಮಹಾನಿರೀಕ್ಷಕರಾದ ವರ್ತಿಕಾ ಕಟಿಯಾರ್, ಬಳ್ಳಾರಿ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್, ಕೊಪ್ಪಳ ಜಿಲ್ಲಾಧಿಕಾರಿ ಡಾ.ಬಿ.ಸುರೇಶ್ ಹಿಟ್ನಾಳ, ವಿಜಯನಗರ ಜಿಲ್ಲಾಧಿಕಾರಿ ಕವಿತಾ ಎಸ್.ಮನ್ನಿಕೇರಿ, ರಾಯಚೂರು ಜಿಲ್ಲಾಧಿಕಾರಿ ನಿತೀಶ್ ಕೆ., ಬಳ್ಳಾರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ ವಿ.ಜೆ., ಕೊಪ್ಪಳ ಜಿಲ್ಲಾ ಪೊಲೀಸ್‌ವರಿಷ್ಠಾಧಿಕಾರಿ ಡಾ.ರಾಮಅರಸಿದ್ದಿ,

ವಿಜಯನಗರಜಿಲ್ಲಾಪೊಲೀಸ್ ವರಿಷ್ಠಾಧಿಕಾರಿ ಎಸ್.ಜಾಹ್ನವಿ., ರಾಯಚೂರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪುಟ್ಟ ಮಾದಯ್ಯ, ಬಳ್ಳಾರಿ ವಿಭಾಗ ಲೋಕೋಪಯೋಗಿ ಇಲಾಖೆಯ ಕಾರ್ಯಪಾಲಕ ಅಭಿಯಂತರ ಹೇಮರಾಜ ಕೆ., ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆಯ ಬೆಂಗಳೂರಿನ ನಿರ್ದೇಶಕರಾದ ಅಂಜಲಿದೇವಿ, ಬಳ್ಳಾರಿ ವಿಭಾಗೀಯ ಕಚೇರಿಯ ಕಾನೂನು ಅಧಿಕಾರಿ(ಹಿರಿಯ) ಬಿ.ಎಸ್.ಪಾಟೀಲ ಸೇರಿದಂತೆ ಇತರರು ಉಪಸ್ಥಿತರಿರುವರು ಎಂದು ಪ್ರಕಟಣೆ ತಿಳಿಸಿದೆ.

# ಜೈನ್ ಇನ್ಸಿಟ್ಯೂಟ್ ಆಫ್ ಟೆಕ್ನಾಲಜಿ ಯಲ್ಲಿ ಪಿ-ಎಕ್ಸ್‌ಪೋ 2025




**ದಾವಣಗೆರೆ:** ಜೈನ್ ಇನ್ಸಿಟ್ಯೂಟ್ ಆಫ್ ಟೆಕ್ನಾಲಜಿ, ದಾವಣಗೆರೆಯಲ್ಲಿ ವಾರ್ಷಿಕ ಪಿ-ಎಕ್ಸ್‌ಪೋ 2025 ಯಶಸ್ವಿಯಾಗಿ ಆಯೋಜಿಸಲಾಯಿತು. ಕಾಲೇಜಿನ ವಿವಿಧ ವಿಭಾಗಗಳಿಂದ 200 ಕ್ಕೂ ಹೆಚ್ಚು ವಿದ್ಯಾರ್ಥಿಗಳು ತಮ್ಮ ನವೀನ ಯೋಜನೆಗಳನ್ನು ಪ್ರದರ್ಶಿಸಿದರು. ಕಾರ್ಯಕ್ರಮಕ್ಕೆ ಗಣ್ಯ ಉದ್ಯಮ ತಜ್ಞರನ್ನು ಆಹ್ವಾನಿಸಲಾಗಿತ್ತು. ಮುಖ್ಯ ಅತಿಥಿಗಳಾಗಿ ಆರ್‌ಡಿಎಲ್ ಟೆಕ್ನಾಲಜೀಸ್, ಮಂಗಳೂರು ಸಂಸ್ಥೆಯ ಸಿಇಓ ಮತ್ತು ಎಂ ಡಿ ಶ್ರೀ ರಾಘವ್ ಜಿ ಶೆಟ್ಟಿ, ನೊಯೆಟಿಕ್‌ಮೈಂಡ್ಸ್ ಕನ್ಸಲ್ಟಿಂಗ್ (ಇಂಡಿಯಾ & ಯುಎಸ್‌ಎ) ಸಂಸ್ಥೆಯ ಸ್ಥಾಪಕ ಮತ್ತು ನಿರ್ದೇಶಕ ಶ್ರೀ. ನವೀನ್ ಉದೋಶಿ, ಹಾಗೂ ರಿಲಯನ್ಸ ಜಿಯೋ ಒಯಸಿಸ್ ನೇಟ್‌ವರ್ಕ ಆಪರೇಷನ್ ಸೆಂಟರ್‌ನ ಅಸಿಸ್ಟೆಂಟ್ ವೈಸ್ ಪ್ರೆಸಿಡೆಂಟ್ ಶ್ರೀ ಹರ್ಷ ಎನ್ ಎಸ್ ಉಪಸ್ಥಿತರಿದ್ದರು.

ಶ್ರೀ ರಾಘವ್ ಜಿ ಶೆಟ್ಟಿ ಅವರು ವಿದ್ಯಾರ್ಥಿಗಳು ನವೀನತೆ ಹೊಂದಿದ ಯೋಜನೆಗಳನ್ನು ರೂಪಿಸಬೇಕು ಎಂದು ಪ್ರೋತ್ಸಾಹಿಸಿದರು. ಜೊತೆಗೆ ಟೆಕ್ನಾಲಜಿ ರೆಡಿನೆಸ್ ಲೆವೆಲ್ (ಟಿಆರ್‌ಎಲ್) ಕುರಿತು ಮಾಹಿತಿ ಪ್ರಧಾನ ಉಪನ್ಯಾಸ ನೀಡಿದರು.

ಸಂವಾದದಲ್ಲಿ ಮಾತನಾಡಿದ ಶ್ರೀ ಹರ್ಷ ಎನ್ ಎಸ್ ಅವರು, ಪಿ-ಎಕ್ಸ್‌ಪೋ ವಿದ್ಯಾರ್ಥಿಗಳ ಭವಿಷ್ಯ ರೂಪಿಸುವ ಮಹತ್ವದ ವೇದಿಕೆ ಎಂದು ಹೇಳಿದರು. ಇಂತಹ ಪ್ರದರ್ಶನಗಳು ವಿದ್ಯಾರ್ಥಿಗಳ ಆತ್ಮವಿಶ್ವಾಸ ಮತ್ತು ಭವಿಷ್ಯದ ತಯಾರಿಕೆಗೆ ಅತ್ಯಂತ ಮುಖ್ಯವೆಂದು ಅಭಿಪ್ರಾಯಪಟ್ಟರು.


ಶ್ರೀನವೀನ್ ಉದೋಶಿ ಅವರು, ಪ್ರಾಜೆಕ್ಟ್ ಪ್ರೆಸೆಂಟೇಷನ್ ಕೌಶಲ್ಯವು ಇಂಜಿನಿಯರಿಂಗ್ ವಿದ್ಯಾರ್ಥಿಗಳಿಗೆ ಅತ್ಯಂತ ಅಗತ್ಯ ಎಂದು ಹೇಳಿದರು. ಉತ್ತಮ ಪ್ರೆಸೆಂಟೇಷನ್ ಕೌಶಲ್ಯಗಳು ನೇಮಕಾತಿ ಪ್ರಕ್ರಿಯೆಯಲ್ಲಿ ಮಹತ್ವದ ಪಾತ್ರ ವಹಿಸುತ್ತವೆ ಎಂದು ಅವರು ತಿಳಿಸಿದರು.

ಕಾರ್ಯಕ್ರಮದಲ್ಲಿ ಸಲಹೆಗಾರ ಡಾ. ಮಂಜಪ್ಪ ಸಾರಥಿ, ಪ್ರಾಂಶುಪಾಲರು ಮತ್ತು ನಿರ್ದೇಶಕ ಡಾ. ಗಣೇಶ್ ಡಿ.ಬಿ, ಅಕಾಡೆಮಿಕ್ಸ್ ಡೀನ್ ಡಾ. ಪ್ರಕಾಶ್ ಕೆ.ಬಿ, ಮತ್ತು ಸಮನ್ವಯಕರು ಡಾ. ರಮೇಶ್ ಆರ್ ಎಸ್ ಹಾಗೂ ಎಲ್ಲಾ ಅಧ್ಯಾಪಕರುಗಳು ಉಪಸ್ಥಿತರಿದ್ದು, ವಿದ್ಯಾರ್ಥಿಗಳ ಪರಿಶ್ರಮವನ್ನು ಮೆಚ್ಚಿ ಅಭಿನಂದಿಸಿದರು.

# ಶಿಷ್ಯವೇತನಕ್ಕಾಗಿ ಅರ್ಜಿ ಆಹ್ವಾನ

**ಚಿತ್ರದುರ್ಗ:** ಕರ್ನಾಟಕ ಸಂಗೀತ ನೃತ್ಯ ಅಕಾಡೆಮಿಯು 2025-26ನೇ ಸಾಲಿನ ಶಿಷ್ಯವೇತನಕ್ಕಾಗಿ ಅರ್ಜಿ ಆಹ್ವಾನಿಸಿದೆ. ಅರ್ಜಿ ಸಲ್ಲಿಸಲು ಡಿ.20 ಕೊನೆಯ ದಿನವಾಗಿದೆ.ಕರ್ನಾಟಕ ಸಂಗೀತ, ಹಿಂದೂಸ್ತಾನಿ ಸಂಗೀತ, ನೃತ್ಯ, ಸುಗಮ ಸಂಗೀತ, ಕಥಾಕೀರ್ತನ ಮತ್ತು ಗಮಕ ಕಲಾಕ್ಷೇತ್ರದಲ್ಲಿ ಅಭ್ಯಾಸ ಮಾಡುತ್ತಿರುವ 16 ರಿಂದ 24 ವರ್ಷ ವಯೋಮಾನದ ಒಳಗಿರುವ ಅಭ್ಯರ್ಥಿಗಳು ಶಿಷ್ಯವೇತನಕ್ಕೆ ಅರ್ಜಿ ಸಲ್ಲಿಸಲು ಆರ್ಹರಾಗಿರುತ್ತಾರೆ.ಶಿಷ್ಯ ವೇತನ ಅರ್ಜಿಯನ್ನು ಅಂತರ್ಜಾಲತಾಣ https://sangeetanrityaacademy.karnataka.gov.in ಮೂಲಕ ಪಡೆದು ಸಲ್ಲಿಸಬಹುದು. ಕರ್ನಾಟಕ ಸಂಗೀತ ನೃತ್ಯ ಅಕಾಡೆಮಿ ಹೆಸರಿನ ಫೇಸ್ ಬುಕ್ ಪುಟದಲ್ಲಿ ಅರ್ಜಿಗಳನ್ನು ಪಡೆಯಬಹುದಾಗಿದೆ. ಅರ್ಜಿಯನ್ನು ಆಯಾ ಜಿಲ್ಲೆಯ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ಪಡೆಯಬಹುದು. ಸಂದರ್ಶನದ ಬದಲಿಗೆ ಅಭ್ಯರ್ಥಿಯು ಇನ್ನು ಮುಂದೆ ಅರ್ಜಿಯಲ್ಲಿ ನೀಡಿರುವ ಪಠ್ಯಕ್ರಮವನ್ನು ಮೊಬೈಲ್, ವಿಡಿಯೋ ಚಿತ್ರೀಕರಿಸಿ ಪೆನ್‌ಡ್ರೈವ್‌ನಲ್ಲಿ ಅಳವಡಿಸಿ, ಪೆನ್‌ಡ್ರೈವ್ ನೊಂದಿಗೆ ಅರ್ಜಿಯನ್ನು ರಿಜಿಸ್ಟ್ರಾರ್, ಕರ್ನಾಟಕ ಸಂಗೀತ ನೃತ್ಯ ಅಕಾಡೆಮಿ, ಕನ್ನಡ ಭವನ, 2ನೇ ಮಹಡಿ, ಜೆ.ಸಿ ರಸ್ತೆ, ಬೆಂಗಳೂರು-560002 ಕಾರ್ಯಾಲಯಕ್ಕೆ ಅಂಚೆ ಮೂಲಕ ಅಥವಾ ಖುದ್ದಾಗಿ ತಲುಪಿಸಬಹುದು. ಬಂದ ಅರ್ಜಿಗಳನ್ನು ಆಯಾ ಕಲಾ ಪ್ರಕಾರಕ, ಅನುಗುಣವಾಗಿ ತೀರ್ಪುಗಾರರು, ಅಭ್ಯರ್ಥಿಗಳು ಚಿತ್ರೀಕರಿಸಿ ಕಳುಹಿಸಿಕೊಟ್ಟಿರುವ ಪೆನ್‌ಡ್ರೈವ್‌ಅನ್ನು ಪರಿಶೀಲಿಸಿ ಶಿಷ್ಯವೇತನಕ್ಕೆ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು. ಪಠ್ಯಕ್ರಮ ಚಿತ್ರೀಕರಿಸಿದ ಪೆನ್‌ಡ್ರೈವ್‌ನೊಂದಿಗೆ ಅರ್ಜಿಯನ್ನು ಸ್ವೀಕರಿಸಲು ಡಿ.20 ಕೊನೆಯ ದಿನ.

# ಶಾಸಕ ಎ. ಮಂಜು ಅರೋಗ್ಯಕ್ಕಾಗಿ ಫೋಟೊ ಹಿಡಿದು ಅಭಿಮಾನಿಗಳಿಂದ ಶಬರಿಮಲೆ ದರ್ಶನ




**ಅರಕಲಗೂಡು:** ವಿಧಾನಸಭಾ ಕ್ಷೇತ್ರದ ಶಾಸಕ ಎ. ಮಂಜು ಅವರು ಮತ್ತೊಮ್ಮೆ ಸಚಿವರಾಗಿ ಸೇವೆ ಸಲ್ಲಿಸಬೇಕು ಮತ್ತು 2028ರ ವೇಳೆಗೆ ಮತ್ತೆ ಶಾಸಕರಾಗಿ ಗೆಲ್ಲಬೇಕು ಎಂಬ ಹಾರೈಕೆಯೊಂದಿಗೆ ಹಳ್ಳಿ ಮೈಸೂರು ಹೋಬಳಿಯ ನಗರನಹಳ್ಳಿಕೊಪ್ಪಲು ಗ್ರಾಮದ ಯುವಕರು ಅಯ್ಯಪ್ಪ ಮಾಲೆ ಧರಿಸಿ ಶಬರಿಮಲೆ ದರ್ಶನ ಪಡೆದು ವಿಶೇಷ ಪ್ರಾರ್ಥನೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಎ.ಮಂಜು ಅಭಿಮಾನಿ ಎನ್.ಡಿ. ಮನು ಕುಮಾರ್ ಮಾತನಾಡಿ,"ನಮ್ಮ ಅರಕಲಗೂಡು ಕ್ಷೇತ್ರದ ಶಾಸಕ ಎ. ಮಂಜು ಅವರು ಕ್ಷೇತ್ರದ ಅಭಿವೃದ್ಧಿಗೆ ನಿಸ್ವಾರ್ಥವಾಗಿ ದುಡಿಯುತ್ತಿದ್ದಾರೆ. ಜನರ ಸಮಸ್ಯೆಗಳಿಗೆ ಸ್ಪಂದಿಸುವ ಗುಣ, ಸರಳತೆ ಮತ್ತು ಅಚಲವಾದ ಜನಪರ ಬದ್ಧತೆ ನಮ್ಮಲ್ಲಿ ದೊಡ್ಡ ವಿಶ್ವಾಸ ಹುಟ್ಟಿಸಿದೆ. 2028ರ ಚುನಾವಣೆಯಲ್ಲೂ ಅವರು ಅದೇ ಜನಬೆಂಬಲದಿಂದ ಗೆಲ್ಲಲಿ ಹಾಗೂ ಮುಂದಿನ ದಿನಗಳಲ್ಲಿ ಸಚಿವ ಸ್ಥಾನದಿಂದಲೂ ಹೆಚ್ಚಿನ ಜನಸೇವೆಗೆ ಅವಕಾಶ ಸಿಗಲಿ ಎಂದು ಶಾಸಕರವರ ಫೋಟೋ ಹಿಡಿದು ಶಬರಿಮಲೆ ದೇವರ ದರ್ಶನ ಪಡೆದು ಪ್ರಾರ್ಥನೆ ಮಾಡಿದ್ದೇವೆ" ಎಂದು ಹೇಳಿದರು.

ಈ ಭಕ್ತಿಯಾತ್ರೆಯಲ್ಲಿ ಪ್ರಭುದೇವ, ಹರೀಶ, ಶಶಿ, ವಿನಯ್, ವರದರಾಜ್, ಕೇಶವ, ಚಂದ್ರ, ಕೃಷ್ಣ, ಉಮೇಶ್, ರವಿ, ಆನಂದ, ದರ್ಶನ್, ದೇವರಾಜ್, ವಿರುಪಾಕ್ಷಿ, ಧರ್ಮ, ತೇಜ, ಅವಿನಾಶ್, ಯೋಗೇಶ್ ಸೇರಿದಂತೆ ಹಲವಾರು ಯುವಕರು ಭಾಗವಹಿಸಿದ್ದರು.

# ಧ್ವಜ ವಂತಿಗೆ ನೀಡುವ ಮೂಲಕ ನಿವೃತ್ತ ಸೈನಿಕರಿಗೆ ನೆರವಾಗೋಣ : ಡಿಸಿ



**ಶಿವಮೊಗ್ಗ:** ಸಶಸ್ತ್ರ ಪಡೆಗಳಲ್ಲಿ ಸೇವೆ ಸಲ್ಲಿಸಿದ ಸೈನಿಕರನ್ನು ಗೌರವಿಸುವ ಉದ್ದೇಶದಿಂದ ಸೈನಿಕ ಧ್ವಜ ದಿನಾಚರಣೆಯನ್ನು ಪ್ರತಿ ವರ್ಷ ಕೈಗೊಳ್ಳಲಾಗುತ್ತಿದ್ದು, ಧ್ವಜ ವಂತಿಗೆ ನೀಡುವ ಮೂಲಕ ನಿವೃತ್ತ ಸೈನಿಕರು ಮತ್ತು ಅವರ ಅವಲಂಬಿತರಿಗೆ ನೆರವಾಗೋಣ ಎಂದು ಎಂದು ಜಿಲ್ಲಾಧಿಕಾರಿಗಳಾದ ಗುರುದತ್ತ ಹೆಗಡೆ ತಿಳಿಸಿದರು.

ಜಿಲ್ಲಾಡಳಿತ ಕಚೇರಿಯಲ್ಲಿ ಸೋಮವಾರ ಸಶಸ್ತ್ರ ಪಡೆಗಳ ಧ್ವಜ ದಿನಾಚರಣೆ ಅಂಗವಾಗಿ ಏರ್ಪಡಿಸಲಾಗಿದ್ದ ಧ್ವಜ ಬಿಡುಗಡೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

1949 ರಿಂದ ಪ್ರತಿ ವರ್ಷ ಸೈನಿಕ ಧ್ವಜ ದಿನವನ್ನು ಆಚರಿಸಲಾಗುತ್ತಿದೆ. ಧ್ವಜ ದಿನಾಚರಣೆ ಅಂಗವಾಗಿ ಸಂಗ್ರಹವಾಗುವ ವಂತಿಗೆ ಹಣವನ್ನು ನಿವೃತ್ತ ಸೈನಿಕರ ಕುಟುಂಬ, ಅವರ ಅವಲಂಬಿತರ ಕಲ್ಯಾಣಕ್ಕಾಗಿ ಹಾಗೂ ಯುದ್ಧದಲ್ಲಿ ಅಂಗವಿಕಲತೆಗೆ ಒಳಗಾದ ಸೈನಿಕರ ನೆರವಿಗಾಗಿ ಬಳಕೆ ಮಾಡಿಕೊಳ್ಳಲಾಗುವುದು. ಆದ್ದರಿಂದ ಎಲ್ಲ ಅಧಿಕಾರಿಗಳು, ಸಾರ್ವಜನಿಕರು ಉತ್ತಮ ರೀತಿಯಲ್ಲಿ ಸಹಕರಿಸಬೇಕೆಂದು ಮನವಿ ಮಾಡುತ್ತೇನೆ ಎಂದ ಅವರು ಶಿವಮೊಗ್ಗ ಜಿಲ್ಲೆ ಧ್ವಜ ವಂತಿಗೆ ಸಂಗ್ರಹದಲ್ಲಿ ಮತ್ತು ಕಲ್ಯಾಣ ಕಾರ್ಯಕ್ರಮಗಳಲ್ಲಿ ಮಾದರಿಯಾಗಲಿ ಎಂದರು ಆಶಿಸಿದರು.

ಪುರೋಹಿತರಾದ ನಾಗರಾಜ್ ಎಂಬುವವರು ಧ್ವಜ ದಿನಾಚರಣೆ ಅಂಗವಾಗಿ ರೂ.25000 ಗಳ ವಂತಿಗೆಯನ್ನು ನೀಡಿದ್ದು ಅವರನ್ನು ಜಿಲ್ಲಾಧಿಕಾರಿಗಳು ಇದೇ ಸಂದರ್ಭದಲ್ಲಿ ಗೌರವಿಸಿ, ನಾಗರಾಜ್‌ರವರು ಎಲ್ಲರಿಗೂ ಪ್ರೇರಣೆಯಾಗಿದ್ದಾರೆ ಎಂದರು.

ಆದ್ದರಿಂದ ಅಧಿಕಾರಿಗಳು, ಸಾರ್ವಜನಿಕ ಸಹಕಾರ ಸಿಕ್ಕರೆ ಒಳ್ಳೆಯದು ಎಂದರು.

ಈ ಸಂದರ್ಭದಲ್ಲಿ ಜಿಲ್ಲೆಯ ಮಾಜಿ ಸೈನಿಕರ ಸಂಘದ ಪದಾಧಿಕಾರಿಗಳು, ಮಾಜಿ ಸೈನಿಕರ ಅವಲಂಬಿತರು, ಎನ್‌ಸಿಸಿ ಅಧಿಕಾರಿಗಳು, ಇತರೆ ಅಧಿಕಾರಿಗಳು ಪಾಲ್ಗೊಂಡಿದ್ದರು.

# ಹಗರಿ ಕೃಷಿ ವಿಜ್ಞಾನ ಕೇಂದ್ರದಲ್ಲಿ ವಿಶ್ವ ಮಣ್ಣು ದಿನಾಚರಣೆ

## ಮಣ್ಣು ರಕ್ಷಣೆಗೆ ಸಾವಯವ ಗೊಬ್ಬರ ಬಳಸಿ: ಡಾ.ರಮೇಶ್ ಬಿ.ಕೆ ಸಲಹೆ



**ಬಳ್ಳಾರಿ:** ಪ್ರಸ್ತುತದಲ್ಲಿ ಮಣ್ಣು ಮಲಿನವಾಗುತ್ತಿದ್ದು, ಇದರ ಸಂರಕ್ಷಣೆಗೆ ಸಾವಯವ ಗೊಬ್ಬರ ಮತ್ತು ಜೈವಿಕ ಗೊಬ್ಬರಗಳ ಬಳಕೆ ಮಾಡಬೇಕು. ಇದರಿಂದ ಮಣ್ಣಿನ ಫಲವತ್ತತೆ ಕಾಪಾಡಿಕೊಳ್ಳಬಹುದು ಎಂದು ಹಗರಿ ಐ.ಸಿ.ಎ.ಆರ್-ಕೃಷಿ ವಿಜ್ಞಾನ ಕೇಂದ್ರದ ಪ್ರಾಧ್ಯಾಪಕ ಡಾ.ರಮೇಶ್ ಬಿ.ಕೆ ಅವರು ಹೇಳಿದರು.

ಬಳ್ಳಾರಿ ತಾಲ್ಲೂಕಿನ ಹಗರಿ ಐ.ಸಿ.ಎ.ಆರ್-ಕೃಷಿ ವಿಜ್ಞಾನ ಕೇಂದ್ರದಲ್ಲಿ "ಆರೋಗ್ಯಕರ ನಗರಗಳಿಗೆ ಆರೋಗ್ಯಕರ ಮಣ್ಣು" ಎಂಬ ಧ್ಯೇಯವಾಕ್ಯದಡಿ ಶನಿವಾರ ಆಯೋಜಿಸಿದ್ದ ವಿಶ್ವ ಮಣ್ಣು ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

2014 ಡಿಸೆಂಬರ್ 5ರಂದು ಮೊದಲ ಬಾರಿಗೆ ವಿಶ್ವ ಮಣ್ಣು ದಿನವನ್ನು ಅಂತರಾಷ್ಟ್ರೀಯ ಮಟ್ಟದಲ್ಲಿ ಆಚರಿಸಲಾಯಿತು. ಪ್ರಪಂಚದಾದ್ಯಂತ ಜನರಿಗೆ ಮಣ್ಣಿನ ಸಂರಕ್ಷಣೆ ಹಾಗೂ ಮಣ್ಣಿನ ಗುಣ-ಧರ್ಮಗಳ ಬಗ್ಗೆ ಜಾಗೃತಿ ಮೂಡಿಸುವುದು ಮುಖ್ಯ ಉದ್ದೇಶವಾಗಿದೆ ಎಂದು ತಿಳಿಸಿದರು.

ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥ ಡಾ.ಪಾಲಯ್ಯ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ಪರಿಸರದಲ್ಲಿ ಪ್ರತಿಶತ 60ರಷ್ಟು ಜೀವರಾಶಿಗಳ ಯೋಗಕ್ಷೇಮಕ್ಕೆ ಮಣ್ಣು ಪ್ರಮುಖ ಅಡಿಪಾಯವಾಗಿದೆ. ಮಣ್ಣಿನ ಅಮೂಲ್ಯವಾದ ಗುಣವನ್ನು ಗಮನದಲ್ಲಿಟ್ಟುಕೊಂಡು ಮಣ್ಣು ಹಾಗೂ ಮಣ್ಣಿನ ಆರೋಗ್ಯವನ್ನು ಸಂರಕ್ಷಿಸಲು ಪ್ರತಿಯೊಬ್ಬರೂ ಕೈಜೋಡಿಸಬೇಕು ಎಂದು ಹೇಳಿದರು.

ಮಣ್ಣು ಒಂದು ಪ್ರಮುಖ ಸಂಪನ್ಮೂಲವಾಗಿದೆ. ಇದು ಆಹಾರ ಉತ್ಪಾದನೆ, ನೀರು ಶುದ್ಧೀಕರಣ ಮತ್ತು ಉಷ್ಣತೆಯನ್ನು ನಿಯಂತ್ರಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ. ಆರೋಗ್ಯಕರ ನಗರ ನಿರ್ಮಾಣಕ್ಕೆ ಮಣ್ಣಿನ ಸಂರಕ್ಷಣೆ ಬಹು ಮುಖ್ಯವಾಗಿದ್ದು, ಸುಸ್ಥಿರ ಭವಿಷ್ಯಕ್ಕಾಗಿ ಮಣ್ಣಿನ ಸಂರಕ್ಷಣೆ ಅಷ್ಟೇ ಮುಖ್ಯವಾಗಿದೆ ಎಂದರು.

ಕೃಷಿ ವಿಜ್ಞಾನ ಕೇಂದ್ರದ ಹಿರಿಯ ಮಣ್ಣು ವಿಜ್ಞಾನಿ ಡಾ.ರವಿ ಎಸ್ ಅವರು ಮಾತನಾಡಿ, ಆಹಾರ ಉತ್ಪಾದನೆ, ಉತ್ಪಾದಕತೆಗೆ ಮತ್ತು ಸುಸ್ಥಿರ ಭವಿಷ್ಯವನ್ನು ಕಾಪಾಡಿಕೊಳ್ಳಲು ಮಣ್ಣು ಮತ್ತು ಮಣ್ಣಿನ ಆರೋಗ್ಯ ಸುರಕ್ಷ ಮಾಡುವುದು ಅಗತ್ಯವಾಗಿದೆ ಎಂದು ಮಣ್ಣಿನ ಸಂರಕ್ಷಣೆಯ ಕುರಿತು ವಿವರವಾಗಿ ತಿಳಿಸಿದರು.

ಕೃಷಿ ಸಂಶೋಧನಾ ಕೇಂದ್ರದ ಮುಖ್ಯಸ್ಥ ಡಾ.ಗಿರೀಶ್ ಅವರು ಮಾತನಾಡಿ, ಮಿತಿ ಮೀರಿದ ರಾಸಾಯನಿಕಗಳ ಬಳಕೆಯಿಂದ ಮಣ್ಣಿನ ಫಲವತ್ತತೆ ಕುಂದುತ್ತಿದೆ. ರೈತರು ಸಾವಯವ ಕೃಷಿಯ ಕಡೆ ಒತ್ತು ನೀಡಿ ಮಣ್ಣಿನ ಆರೋಗ್ಯ ಕಾಪಾಡಬೇಕಾಗಿದೆ ಎಂದು ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ಹಗರಿ ಕೃಷಿ ಮಹಾವಿದ್ಯಾಲಯದ ಬೋಧಕ ಸಿಬ್ಬಂದಿಗಳಾದ ಡಾ.ಗೋವಿಂದಪ್ಪ ಎಂ.ಆರ್., ಡಾ.ಮಂಜುನಾಥ್, ಎನ್. ಡಾ.ಬಸವರಾಜ್, ಡಾ.ನಾಗೇಶ್ ಬಸಪ್ಪ, ಡಾ.ಆನಂದ್ ಹಾಗೂ ಡಾ.ಜಾನವಿ ಸೇರಿದಂತೆ ಮಹಾವಿದ್ಯಾಲಯದ ವಿದ್ಯಾರ್ಥಿಗಳು ಹಾಗೂ ವಿದ್ಯಾರ್ಥಿನಿಯರು, ಇತರರು ಉಪಸ್ಥಿತರಿದ್ದರು.

ಕೃಷಿ ವಿಜ್ಞಾನ ಕೇಂದ್ರದ ಗೃಹ ವಿಜ್ಞಾನಿ ಡಾ.ರಾಜೇಶ್ವರಿ ಮತ್ತು ಕೃಷಿ ವಿಸ್ತರಣಾ ವಿಜ್ಞಾನಿ ಡಾ.ನವೀನ್ ಕುಮಾರ್.ಪಿ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

# ರೈತರು ಕಾಮಗಾರಿಗಳ ನಿರ್ವಹಣೆಗೆ ಕೈಜೋಡಿಸಬೇಕು ಜಿಪಂ ಸಿಇಓ ಮಹಮ್ಮದ್ ಹಾರೀಸ್ ಸುಮೇರ್



**ಬಳ್ಳಾರಿ:** ಗೋಕಟ್ಟೆ, ಚೆಕ್ ಡ್ಯಾಂ, ಕಂದಕ ಬದು ನಿರ್ಮಾಣ ಇನ್ನು ಹಲವಾರು ಕಾಮಗಾರಿಗಳನ್ನು ನಿರ್ಮಿಸಿದ್ದು, ಇವುಗಳ ನಿರ್ವಹಣೆ ಕೇವಲ ಇಲಾಖೆ ಅಥವಾ ಪಂಚಾಯತಿಯ ಕರ್ತವ್ಯವೆಂದು ಪರಿಗಣಿಸದೇ, ರೈತರು ಸಹ ಸಹಕಾರ ನೀಡಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ ಅವರು ಹೇಳಿದರು.

ಬುಧವಾರ ಬಳ್ಳಾರಿ ತಾಲ್ಲೂಕಿನ ರೂಪನಗುಡಿ ಹೋಬಳಿಯ ಯಾಳ್ಪಿ ಕಗ್ಗಲ್ಲು ಗ್ರಾಮದಲ್ಲಿ ಕೃಷಿ ಇಲಾಖೆಯ ಜಲಾನಯನ ಅಭಿವೃದ್ಧಿ ಇಲಾಖೆಯಡಿ ವಾಟರ್‌ಶೆಡ್ ಮಹೋತ್ಸವ ಅಭಿಯಾನ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಹೊಸ ರೈತ ಉತ್ಪಾದಕ ಸಂಘವನ್ನು ರಚನೆ ಮಾಡಬೇಕು. ಪಿಎಂಎಫ್‌ಎಂಇ ಯೋಜನೆಯನ್ನು ರೈತ ಮಹಿಳೆಯರು ಹಾಗೂ ಸ್ವ ಸಹಾಯ ಸಂಘದವರು ಸದುಪಯೋಗಪಡಿಸಿಕೊಳ್ಳಬೇಕು ಎಂದರು.

ಮಣ್ಣಿನ ಗುಣಲಕ್ಷಣ ಕಾಪಾಡಲು ರೈತರು ಸಾವಯವ ಹಾಗೂ ನೈಸರ್ಗಿಕ ಕೃಷಿಗೆ ಒತ್ತು ನೀಡಬೇಕು. ವ್ಯವಸಾಯವು ಕೈಗಾರಿಕೆ ಹಾಗೂ ಇತರೆ ವಲಯಗಳಿಗಿಂತ ಅತಿ ಮುಖ್ಯ ವಲಯ ಎಂದು ತಿಳಿಸಿದರು.

ಹಗರಿಯ ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥ ಹಾಗೂ ಕೃಷಿ ವಿಜ್ಞಾನಿ ಡಾ.ಪಾಲಯ್ಯ, ಡಾ.ರವಿ ಹಾಗೂ ಡಾ.ಕೃಷ್ಣಮೂರ್ತಿಯವರ ಸಮ್ಮುಖದಲ್ಲಿ ಮಣ್ಣು ಮತ್ತು ನೀರು ಸಂರಕ್ಷಣೆಯ ಬಗ್ಗೆ ತಾಂತ್ರಿಕ ಅಧಿವೇಶನ ಏರ್ಪಡಿಸಲಾಯಿತು.

ಕಾರ್ಯಕ್ರಮದಲ್ಲಿ ಬಳ್ಳಾರಿ ತಾಲ್ಲೂಕು ಕೃಷಿಕ ಸಮಾಜ ನಿರ್ದೇಶಕರಾದ ಸಮುದ್ರರಾಜ, ವೈ.ಗೋಪಾಲರೆಡ್ಡಿ ಹಾಗೂ ಗ್ರಾಮ ಪಂಚಾಯಿತಿ ಉಪಾಧ್ಯಕ್ಷೆ ಲಿಂಗಮ್ಮ ಪೂಜಾರಿ, ಮಾಜಿ ಅಧ್ಯಕ್ಷ ಸೋಮಲಿಂಗಪ್ಪ, ಸದಸ್ಯರಾದ ಶಂಕರಗೌಡ, ಪದ್ಮಾವತಿ ಕರಿಬಸವನಗೌಡ, ಕೆ ಬಸವನಗೌಡ, ಲಕ್ಷ್ಮಿ ಮಹಾಲಿಂಗ, ಲಕ್ಷ್ಮಿ ದ್ಯಾವಣ್ಣ, ಗ್ರಾಮದ ರೈತರಾದ ಲೋಕನಗೌಡ, ಜನಾರ್ದನರೆಡ್ಡಿ ಸೇರಿದಂತೆ ಕೃಷಿ ಇಲಾಖೆಯ ಕೃಷಿ ಅಧಿಕಾರಿಗಳು, ಸಹಾಯಕ ಕೃಷಿ ಅಧಿಕಾರಿಗಳು, ಆತ್ಮ ಸಿಬ್ಬಂದಿ, ಕರ್ನಾಟಕ ಗಣಿ ಪರಿಸರ ಪುನಶ್ಚೇನ ಸಿಬ್ಬಂದಿ, ಕೃಷಿ ಸಂಜೀವಿನಿ ಸಿಬ್ಬಂದಿ, ತೋಟಗಾರಿಕಾ ಇಲಾಖೆಯ ಅಧಿಕಾರಿಗಳು, ಅರಣ್ಯ ಇಲಾಖೆಯ ಅಧಿಕಾರಿಗಳು ಹಾಗೂ ಇತರೆ ಸಿಬ್ಬಂದಿ ವರ್ಗದವರು ಇದ್ದರು.

## ಸಂತಪೌಲರ ಹಳೇ ವಿದ್ಯಾರ್ಥಿಗಳ ಸಂಘವು ಅಧಿಕೃತವಾಗಿ ನೊಂದಣಿಗೊಂಡಿದೆ

**ದಾವಣಗೆರೆ:** ನಗರದ ಸಂತ ಪೌಲರ ವಿದ್ಯಾಸಂಸ್ಥೆಯ ಹಳೇ ವಿದ್ಯಾರ್ಥಿಗಳ ಸಂಘವು 2014ರಲ್ಲಿ ಸ್ಥಾಪನೆಗೊಂಡಿದ್ದು, ಈಗ ಅಧಿಕೃತವಾಗಿ ನೊಂದಣಿಗೊಂಡಿದೆ ಎಂದು ಸಂಘದ ನೂತನ ಅಧ್ಯಕ್ಷ ದಿನೇಶ್ ಕೆ.ಶೆಟ್ಟಿ ತಿಳಿಸಿದರು.ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಹಳೇ ವಿದ್ಯಾರ್ಥಿನಿಯರ ಸಂಘ 2014ರಲ್ಲಿ ಸ್ಥಾಪನೆಗೊಂಡಿತ್ತು. ಸಮಿತಿಯ ಮೊದಲ ಅಧ್ಯಕ್ಷರಾಗಿ ಡಾ.ಶುಕ್ಲ ಶೆಟ್ಟಿ ಆಯ್ಕೆಯಾಗಿದ್ದರು. ಪದಾಧಿಕಾರಿಗಳು ಹಾಗೂ ಸದಸ್ಯರನ್ನೊಳಗೊಂಡ ಈ ಸಂಘವು ಅನೇಕ ಉತ್ತಮ ಕಾರ್ಯಗಳನ್ನು ನಡೆಸುತ್ತಾ, ಒಂದು ಒಳ್ಳೆಯ ಮಾದರಿ ಸಂಘವೆನಿಸಿಕೊಂಡಿದೆ. ಮೊದಲು ವಿದ್ಯಾರ್ಥಿ-ವಿದ್ಯಾರ್ಥಿನಿಯರು ಶಾಲೆಯಲ್ಲಿ ಓದುತ್ತಿದ್ದರು. ಕೆಲ ವರ್ಷಗಳ ನಂತರ ಬರೀ ಹೆಣ್ಣು ಮಕ್ಕಳಿಗೆ ಮಾತ್ರ ಓದಲು ಅವಕಾಶ ಇದೆ. ಆದ್ದರಿಂದ ಸಂಘವನ್ನು ವಿದ್ಯಾರ್ಥಿನಿಯರ ಸಂಘ ಎಂದು ನೊಂದಯಿಸಲಾಗಿದೆ ಎಂದು ಹೇಳಿದರು.ಸಂತಪೌಲರ ಶಾಲೆಯ ಸಿಸ್ಟರ್ ವೆನಿಸ್ಸಾ ಮಾತನಾಡಿ, ಇದೀಗ ಹಳೆಯ ವಿದ್ಯಾರ್ಥಿನಿಯರ ಸಂಘ ಅಧಿಕೃತವಾಗಿ ನೊಂದಣಿ ಆಗಿದೆ. ವಿದ್ಯಾಸಂಸ್ಥೆಯ ಹಳೇ ವಿದ್ಯಾರ್ಥಿಗಳ ಸಂಘದ ನೂತನ ಅಧ್ಯಕ್ಷರಾಗಿ ದಿನೇಶ್ ಕೆ.ಶೆಟ್ಟಿ ಆಯ್ಕೆಯಾಗಿದ್ದಾರೆ. ಈ ಸಂಘದಿಂದ ಆರ್ಥಿಕವಾಗಿ ಅರ್ಹ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ, ಆರೋಗ್ಯ ಶಿಬಿರಗಳು, ಪ್ರೇರಣೆ ಮತ್ತು ವ್ಯಕ್ತಿತ್ವ ವಿಕಸನ ಮಾತುಕತೆಗಳು, ಜೀವನ ಕೌಶಲ್ಯ ಮತ್ತು ಸಾಮಾಜಿಕ ಜಾಗೃತಿ ಕಾರ್ಯಕ್ರಮಗಳು, ಸಾಂಸ್ಕೃತಿಕ, ಕ್ರೀಡೆ ಮತ್ತು ಪ್ರತಿಭಾ ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದು. ಮುಂಬರುವ 2026ರ ಜನವರಿಯ 17ಕ್ಕೆ ಹಳೇ ವಿದ್ಯಾರ್ಥಿಗಳ ಸಂಘದ ಸಭೆ ಕರೆಯಲಾಗಿದೆ ಎಂದು ಮಾಹಿತಿ ನೀಡಿದರು.

## ಜನರಿಗೆ ಮೋಸ ಮಾಡುವುದೇ ಡಿಎಂಕೆ ಕೆಲಸ; ಪುದುಚೇರಿಯಲ್ಲಿ ವಿಜಯ್ ವಾಗ್ದಾಳಿ



**ಪುದುಚೇರಿ:** ಕರೂರು ದುರಂತದ ಬಳಿಕ ಮೊದಲ ಬಾರಿಗೆ ನಟ ವಿಜಯ್ ಸಾರ್ವಜನಿಕ ರ್ಯಾಲಿಯಲ್ಲಿ ಇಂದು ಭಾಗವಹಿಸಿದ್ದರು. ಬೃಹತ್ ರ್ಯಾಲಿಯಲ್ಲಿ ವಿಜಯ್ ತಮ್ಮ ಅಭಿಮಾನಿಗಳನ್ನುದ್ದೇಶಿಸಿ ಮಾತನಾಡಿ, ವಿಪಕ್ಷಗಳ ಮೇಲೆ ಆಕ್ರೋಶ ವ್ಯಕ್ತಪಡಿಸಿದರು. 'ಪುದುಚೇರಿ ಮಕ್ಕಳ್ ಸಂತಿಪ್ಪು ನೀದಿ ಪಯಣಂ' ರ‍್ಯಾಲಿ ಉಪ್ಪಲಂನ ಎಕ್ಸ್‌ಪೋ ಮೈದಾನದಲ್ಲಿ ರ‍್ಯಾಲಿಯನ್ನು ಆಯೋಜಿಸಲಾಗಿತ್ತು. ವೇದಿಕೆಯಲ್ಲಿ ಮಾತನಾಡಿದ ವಿಜಯ್ ಡಿಎಂಕೆ ಮೇಲೆ ಕಿಡಿ ಕಾರಿದರು.

ಪುದುಚೇರಿ ಸರ್ಕಾರ ಪಕ್ಷಪಾತವಿಲ್ಲದೆ ನಮಗೆ ಭದ್ರತೆ ನೀಡಿದೆ. ತಮಿಳುನಾಡಿನ ಡಿಎಂಕೆ ಸರ್ಕಾರ ಇದನ್ನು ನೋಡಿ ಕಲಿಯಬೇಕು.ಎಂದು ಪುದುಚೇರಿ ಮುಖ್ಯಮಂತ್ರಿ ಎನ್. ರಂಗಸ್ವಾಮಿ ಅವರ ಆಡಳಿತವನ್ನು ವಿಜಯ್ ಹಾಡಿ ಹೊಗಳಿದರು. ಮುಂದುರೆದು, ಡಿಎಂಕೆ ಸರ್ಕಾರ ಈಗ ಬುದ್ಧಿ ಕಲಿಯುವುದಿಲ್ಲ, 2026ರ ಚುನಾವಣೆಯಲ್ಲಿ ಜನರೇ ಅವರಿಗೆ ಪಾಠ ಕಲಿಸುತ್ತಾರೆ. ವಿಜಯ್ ತಮಿಳುನಾಡಲ್ಲಿ ಮಾತ್ರ ಮಾತನಾಡುತ್ತಾರೆ ಎಂದು ಭಾವಿಸಬೇಡಿ. ನಾನು ಪುದುಚೇರಿ ಪರವಾಗಿಯೂ ಇದ್ದೇನೆ ಎಂದು ವಿಜಯ್ ಹೇಳಿದ್ದಾರೆ. ಜನರು ಡಿಎಂಕೆ ಸರ್ಕಾರವನ್ನು ನಂಬಬಾರದು, ಅವರು ಜನರನ್ನು ಮೋಸಗೊಳಿಸುತ್ತಾರೆ ಎಂದು ಅವರು ಹೇಳಿದ್ದಾರೆ. ತಮಿಳಿನ ಡಿಎಂಕೆ ಆಡಳಿತವು ನಿಷ್ಪಕ್ಷಪಾತ ಪುದುಚೇರಿ ಸರ್ಕಾರದಿಂದ ಕಲಿತರೆ ಒಳ್ಳೆಯದು, ಆದರೆ ಅವರು ಈಗ ಕಲಿಯುವುದಿಲ್ಲ. ಕೇಂದ್ರವನ್ನು ಗುರಿಯಾಗಿಸಿಕೊಂಡು ಮಾತನಾಡಿದ ವಿಜಯ್, ಪುದುಚೇರಿಗೆ ರಾಜ್ಯ ಸ್ಥಾನಮಾನ ನೀಡಬೇಕೆಂಬ ದೀರ್ಘಕಾಲದ ಬೇಡಿಕೆಯನ್ನು ಒತ್ತಿ ಹೇಳಿದರು. "ಪುದುಚೇರಿಯ ಅಭಿವೃದ್ಧಿಯಲ್ಲಿ ಕೇಂದ್ರವು ಬೆಂಬಲವಾಗಿ ನಿಂತಿಲ್ಲ ಎಂದು ಹೇಳಿದ್ದಾರೆ.ಟಿವಿಕೆ ರ‍್ಯಾಲಿ ವೇಳೆ ಭದ್ರತಾ ಲೋಪವಾಗಿದ್ದು, ಹ್ಯಾಂಡ್‌ಗನ್ ಹಿಡಿದು ನಟನ ಬಳಿ ತೆರಳಲು ಯತ್ನಿಸಿದ ತಮಿಳುನಾಡಿನ ವ್ಯಕ್ತಿಯೊಬ್ಬನನ್ನು ಪೊಲೀಸರು ಬಂಧಿಸಿದ್ದಾರೆ. ಬಂಧಿತ ವ್ಯಕ್ತಿ ತಮಿಳುನಾಡಿನ ಶಿವಗಂಗಾ ಜಿಲ್ಲೆಯವನೆಂದು ಮತ್ತು ತಾನು ಖಾಸಗಿ ಭದ್ರತಾ ಅಧಿಕಾರಿಯಾಗಿದ್ದು, ಸಮಯಕ್ಕೆ ಸರಿಯಾಗಿ ತನ್ನ ತಂಡವನ್ನು ಸೇರಲು ಸಾಧ್ಯವಾಗಲಿಲ್ಲ ಎಂದು ಹೇಳಿರುವುದಾಗಿ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

## ಜಪಾನ್‌ನಲ್ಲಿ 7.5 ತೀವ್ರತೆಯ ಭೂಕಂಪ; 20 ಕ್ಕೂ ಅಧಿಕ ಜನರಿಗೆ ಗಾಯ, ಭಾರೀ ಸುನಾಮಿ ಎಚ್ಚರಿಕೆ



**ಟೋಕಿಯೋ:** ಸೋಮವಾರ ತಡರಾತ್ರಿ ಉತ್ತರ ಜಪಾನ್‌ನಲ್ಲಿ 7.5 ತೀವ್ರತೆಯ ಪ್ರಬಲ ಭೂಕಂಪ ಸಂಭವಿಸಿದ್ದು, 20 ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದಾರೆ. ಭೂಕಂಪದ ಪರಿಣಾಮ ಹಲವು ಮನೆಗಳು ನೆಲಸಮಗೊಂಡಿವೆ. ಅಮೋರಿ ಕರಾವಳಿಯಿಂದ ಸುಮಾರು 80 ಕಿ.ಮೀ ದೂರದಲ್ಲಿರುವ ಪೆಸಿಫಿಕ್ ಮಹಾಸಾಗರದಲ್ಲಿ ರಾತ್ರಿ 11.15 ಕ್ಕೆ ಭೂಕಂಪ ಸಂಭವಿಸಿದೆ. ಪೆಸಿಫಿಕ್ ಕರಾವಳಿ ತೀರದಲ್ಲಿ 70 ಸೆಂಟಿಮೀಟರ್ (28 ಇಂಚು) ವರೆಗಿನ ಸುನಾಮಿ ಉಂಟಾಗಿದೆ. ಜಪಾನ್ ಸ್ಥಳೀಯ ಸಮಯ ರಾತ್ರಿ 11:15 ರ ಸುಮಾರಿಗೆ ಅಮೋರಿ ಕರಾವಳಿಯಲ್ಲಿ ತಡರಾತ್ರಿ ಭೂಕಂಪ ಮತ್ತು ಸುನಾಮಿ ಅಪ್ಪಳಿಸಿದೆ.

ಹೊನ್ಶುವಿನ ಉತ್ತರ ತುದಿಯಿಂದ ಸುಮಾರು 80 ಕಿಲೋಮೀಟರ್ ದೂರದಲ್ಲಿ ಭೂಕಂಪ ಸಂಭವಿಸಿದ್ದು, ಹಲವಾರು ಕರಾವಳಿ ಪಟ್ಟಣಗಳಿಗೆ ಸಣ್ಣ ಸುನಾಮಿಯಿಂದ ಹಾನಿ ಉಂಟಾಗಿದೆ. ಅಮೋರಿಯ ದಕ್ಷಿಣದಲ್ಲಿರುವ ಇವಾಟೆಯಲ್ಲಿರುವ ಕುಜಿ ಬಂದರನ್ನು 70 ಸೆಂಟಿಮೀಟರ್‌ಗಳಷ್ಟು ಅಲೆಗಳು ತಲುಪಿದವು. ಇವಾಟೆ ಪ್ರಿಫೆಕ್ಚರ್‌ನ ಕುಜಿ ಬಂದರಿನಲ್ಲಿ 70 ಸೆಂ.ಮೀ.ವರೆಗಿನ ಸುನಾಮಿ ಅಲೆಗಳು ಎದ್ದಿವೆ. ಮುನ್ನೆಚ್ಚರಿಕೆಯಾಗಿ ದುರ್ಬಲ ಪ್ರದೇಶಗಳಲ್ಲಿರುವ ನಿವಾಸಿಗಳು ಎತ್ತರದ ಪ್ರದೇಶಗಳಿಗೆ ತೆರಳುವಂತೆ ಸೂಚನೆ ನೀಡಲಾಗಿದೆ.

ಹಚಿನೋಹೆಯಲ್ಲಿರುವ ಹೋಟೆಲ್‌ನಲ್ಲಿ ಹಲವಾರು ಜನರು ಗಾಯಗೊಂಡಿದ್ದಾರೆ ಮತ್ತು ಟೊಹೊಕುದಲ್ಲಿ ಒಬ್ಬ ವ್ಯಕ್ತಿಯ ಕಾರು ಮ್ಯಾನ್‌ಹೋಲ್‌ಗೆ ಬಿದ್ದಿದೆ. ಹವಾಮಾನ ಸಂಸ್ಥೆಯು 7.5 ತೀವ್ರತೆಯನ್ನು ಪರಿಷ್ಕರಿಸಿ ಕೆಲವು ಪ್ರದೇಶಗಳಲ್ಲಿ ಸುನಾಮಿ ಅಲೆಗಳು ಮೂರು ಮೀಟರ್ ತಲುಪಬಹುದು ಎಂದು ಎಚ್ಚರಿಸಿತ್ತು.

## ಕೃಷಿ ಕ್ಷೇತ್ರದಲ್ಲಿ ಶೇ.44ರಷ್ಟು ಬೆಳವಣಿಗೆ

**ನವದೆಹಲಿ:** ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದಲ್ಲಿ ಭಾರತದ ಕೃಷಿ ಕ್ಷೇತ್ರವು ಗಮನಾರ್ಹ ಪ್ರಗತಿಯನ್ನು ಸಾಧಿಸಿದೆ, ಇದರಲ್ಲಿ 2014 ರಿಂದ ಕಬ್ಬು ಉತ್ಪಾದನೆಯಲ್ಲಿ ಶೇಕಡಾ 44 ರಷ್ಟು ಹೆಚ್ಚಳವಾಗಿದೆ ಎಂದು ಕೇಂದ್ರ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಹೇಳಿದ್ದಾರೆ

2025 ರ ಕೃಷಿ ವ್ಯವಹಾರ ಶೃಂಗಸಭೆಯಲ್ಲಿ ಮಾತನಾಡಿದ ಸಚಿವರು, ಸಣ್ಣ ಸಾಕಣೆ ಕೇಂದ್ರಗಳಿಗೆ ಸಮಗ್ರ ಕೃಷಿ ಮಾದರಿಗಳು, ಮೌಲ್ಯವರ್ಧನೆ, ಮೀನು ಮತ್ತು ಜಾನುವಾರುಗಳಲ್ಲಿ ವೈವಿಧ್ಯೀಕರಣ ಮತ್ತು ಜೈವಿಕ ಒಳಹರಿವಿನ ಮೇಲೆ ಕಠಿಣ ನಿಯಮಗಳ ಅಗತ್ಯವನ್ನು ಒತ್ತಿ ಹೇಳಿದರು. ಅನುಸರಣಾ ಉತ್ಪಾದಕರ ಸಂಖ್ಯೆ 30,000 ರಿಂದ ಕೇವಲ 8,000 ಕ್ಕೆ ಇಳಿದಿದೆ ಮತ್ತು ಮಣ್ಣಿನ ಸವೆತವನ್ನು ತಡೆಗಟ್ಟಲು ಮತ್ತು ಭವಿಷ್ಯದ ಪೀಳಿಗೆಗೆ ಸಮೃದ್ಧಿಯನ್ನು ಖಚಿತಪಡಿಸಿಕೊಳ್ಳಲು ಸಮತೋಲಿತ ರಸಗೊಬ್ಬರ ಬಳಕೆಗೆ ಗಮನ ನೀಡಬೇಕಾಗಿದೆ ಎಂದು ಅವರು ಗಮನಸೆಳೆದಿದ್ದಾರೆ.

ಭಾರತದ ಕೃಷಿ ಕಾರ್ಯಪಡೆಯು ಕೃಷಿಯಲ್ಲಿ ಆಳವಾಗಿ ತೊಡಗಿಸಿಕೊಂಡಿದ್ದರೂ, ಪ್ರತಿ ಎಕರೆಗೆ ಹೆಚ್ಚಿನ ಉತ್ಪಾದನೆಯ ಅವಶ್ಯಕತೆಯಿರುವುದರಿಂದ 'ಉತ್ಪಾದನೆ' ಮತ್ತು 'ಉತ್ಪಾದಕತೆ'ಯನ್ನು ಹೆಚ್ಚಿಸುವುದು ಮುಖ್ಯ ಎಂದು ನೀತಿ ಆಯೋಗದ ಸದಸ್ಯ ರಮೇಶ್ ಚಂದ್ ಹೇಳಿದ್ದಾರೆ.

ಚೀನಾದ $5 ಟ್ರಿಲಿಯನ್ ಆರ್ಥಿಕತೆಯ ಉದಾಹರಣೆಯನ್ನು ಉಲ್ಲೇಖಿಸಿದ ಅವರು, ಅಲ್ಲಿನ ರೈತರು ತೋಟಗಾರಿಕಾ ತಜ್ಞರು, ನಾವೀನ್ಯಕಾರರು ಮತ್ತು ನಿಖರವಾದ ಭೂ ವ್ಯವಸ್ಥಾಪಕರಾಗಿ ಕಾರ್ಯನಿರ್ವಹಿಸುತ್ತಾರೆ, ತೀವ್ರ ಅಭ್ಯಾಸಗಳ ಮೂಲಕ ಉತ್ತಮ ಇಳುವರಿಯನ್ನು ಸಾಧಿಸುತ್ತಾರೆ ಎಂದು ಹೇಳಿದರು.

# ನನ್ನ ಹಾಗೂ ಮುಖ್ಯಮಂತ್ರಿಯವರ ನಡುವೆ ಯಾವುದೇ ಭಿನ್ನಾಭಿಪ್ರಾಯವಿಲ್ಲ: ಡಿ.ಕೆ. ಶಿವಕುಮಾರ್

**ಬೆಳಗಾವಿ:** ರಾಜ್ಯಕ್ಕೆ ಅನ್ಯಾಯ ಆಗಿರುವುದು ಕೇಂದ್ರ ಸರ್ಕಾರದಿಂದ. ಹೀಗಾಗಿ ಬಿಜೆಪಿಯು ಕೇಂದ್ರ ಸರ್ಕಾರದ ವಿರುದ್ಧ ಪ್ರತಿಭಟನೆ ಮಾಡಬೇಕು ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ತಿರುಗೇಟು ನೀಡಿದರು. ಬೆಳಗಾವಿ ಸರ್ಕಿಟ್ ಹೌಸ್ ಬಳಿ ಮಾಧ್ಯಮಗಳ ಪ್ರಶ್ನೆಗಳಿಗೆ ಮಂಗಳವಾರ ಅವರು ಪ್ರತಿಕ್ರಿಯೆ ನೀಡಿದರು. ರಾಜ್ಯ ಸರ್ಕಾರ ವಿರುದ್ಧ ಬಿಜೆಪಿಯ ಪ್ರತಿಭಟನೆ ಬಗ್ಗೆ ಕೇಳಿದಾಗ, ಕಬ್ಬು, ಮೆಕ್ಕೆಜೋಳ, ಸಕ್ಕರೆ, ಎಥನಾಲ್ ಸೇರಿದಂತೆ ಪ್ರತಿ ವಿಚಾರದಲ್ಲಿ ಅನ್ಯಾಯ ಆಗಿರುವುದು ಕೇಂದ್ರ ಸರ್ಕಾರದಿಂದ. ಕೇಂದ್ರ ಸರ್ಕಾರ ನಮ್ಮ ರಾಜ್ಯಕ್ಕೆ ನೀಡಬೇಕಾದ ಅನುದಾನ ಸರಿಯಾಗಿ ಸಿಗುತ್ತಿಲ್ಲ. ರೈತರಿಗೆ ಸಹಾಯ ಮಾಡಲು ಮಹದಾಯಿ ಯೋಜನೆ ಬಗ್ಗೆ ತೀರ್ಮಾನ ಮಾಡಲು ಇವರೆಗೂ ಕೇಂದ್ರ ಸರ್ಕಾರಕ್ಕೆ ಸಾಧ್ಯವಾಗಿಲ್ಲ ಎಂದು ಅಸಮಾಧಾನ ಹೊರಹಾಕಿದರು.



ಮೇಕೆದಾಟು ವಿಚಾರದಲ್ಲಿ ನಮ್ಮ ಹೋರಾಟದಿಂದ ನ್ಯಾಯಾಲಯದಲ್ಲಿ ನಮಗೆ ನ್ಯಾಯ ಸಿಕ್ಕಿದ್ದು, ಒಂದೇ ದಿನದಲ್ಲಿ ಅನುಮತಿ ಕೊಡಿಸುತ್ತೇವೆ ಎಂದು ಹೇಳಿದ್ದವರು ಇನ್ನೂ ಕೊಡಿಸಿಲ್ಲ. ಭದ್ರ ಮೇಲ್ದಂಡೆ ಯೋಜನೆಗೆ ಬಜೆಟ್‌ನಲ್ಲಿ ಘೋಷಿಸಿದ 5,400 ಹಣವನ್ನು ಇದುವರೆಗೂ ಕೊಟ್ಟಿಲ್ಲ. ಕೃಷ್ಣಾ ಮೇಲ್ದಂಡೆ ಯೋಜನೆ ವಿಚಾರದಲ್ಲಿ ಭೂ ಸಂತ್ರಸ್ತ ರೈತರಿಗೆ 76 ಸಾವಿರ ಕೋಟಿ ಪರಿಹಾರ ನೀಡಲು ನಮ್ಮ ಸರ್ಕಾರ ತೀರ್ಮಾನಿಸಿದೆ. ಈ ಯೋಜನೆಗೆ ಕೇಂದ್ರ ಸರ್ಕಾರ ಗೆಜೆಟ್ ಅಧಿಸೂಚನೆ ಹೊರಡಿಸಿಲ್ಲ. ಹೀಗಾಗಿ ಬಿಜೆಪಿ ಕೇಂದ್ರ ಸರ್ಕಾರದ ವಿರುದ್ಧ ಹೋರಾಟ ಮಾಡಬೇಕು ಎಂದು ಕಿಡಿ–ಕಾರಿದರು.

ಬಿಜೆಪಿಯವರಿಗೆ ಮಾನ ಮರ್ಯಾದೆ ಇಲ್ಲ ಬಿಜೆಪಿಯ ಯಾವೊಬ್ಬ ಸಂಸದರು ಕೇಂದ್ರ ಸರ್ಕಾರದ ಜತೆ ಈ ವಿಚಾರವಾಗಿ ಮಾತನಾಡಿಲ್ಲ. ಬಿಜೆಪಿಯವರಿಗೆ ಮಾನ ಮರ್ಯಾದೆ ಇಲ್ಲ ಎಂದು ವಾಗ್ದಾಳಿ ನಡೆಸಿದರು.

ಸರ್ವಪಕ್ಷ ನಿಯೋಗ ಭೇಟಿ ಬಗ್ಗೆ ಕೇಳಿದಾಗ, ಈ ವಿಚಾರವಾಗಿ ಡಿ.8ರಂದು ಸಭೆ ಮಾಡಲು ನಾವು ನಿರ್ಧರಿಸಿದ್ದೆವು. ಆದರೆ ಅವರು ಸಮಯದ ಇಕ್ಕಟ್ಟಿದೆ ಎಂದು ನಮಗೆ ಪತ್ರ ಬರೆದರು. ಹೀಗಾಗಿ ಅವರು ನಾವು ಅವರಿಗೆ ಸಮಯ ನಿಗದಿ ಮಾಡಲು ಹೇಳಿದ್ದು, ಅವರು ಹೇಳಿದ ದಿನ ಸಭೆ ಮಾಡಲು ಸಿದ್ಧವಿದ್ದೇವೆ ಎಂದು ಸ್ಪಷ್ಟಪಡಿಸಿದರು.

ಐದು ವರ್ಷ ಸಿದ್ದರಾಮಯ್ಯ ಅವರೇ ಸಿಎಂ ಎಂಬ ಯತೀಂದ್ರ ಅವರ ಹೇಳಿಕೆ ಬಗ್ಗೆ ಕೇಳಿದಾಗ, ನನ್ನ ಹಾಗೂ ಸಿಎಂ ನಡುವೆ ಯಾವುದೇ ಭಿನ್ನಾಭಿಪ್ರಾಯ ಇಲ್ಲ. ನಮ್ಮಲ್ಲಿ ಈ ಹಿಂದೆಯೂ ಗೊಂದಲವಿಲ್ಲ, ಈಗಲೂ ಇಲ್ಲ, ಮುಂದೆಯೂ ಇಲ್ಲ. ಅವರು ಯಾವ ರೀತಿ ಹೇಳಿದ್ದಾರೆ.

ನನಗೆ ಗೊತ್ತಿಲ್ಲ. ನಾನು ಅವರ ಜತೆ ಮಾತನಾಡುವೆ? ಎಂದು ತಿಳಿಸಿದರು. ಉ. ಕರ್ನಾಟಕದ ಸಮಸ್ಯೆಗಳಿಗೆ ಉತ್ತರ ಕೊಡಬೇಕಿರೋದು ಕೇಂದ್ರ ಸರ್ಕಾರ: ಡಿ.ಕೆ. ಶಿವಕುಮಾರ್

ಹೈಕಮಾಂಡ್ ನಿಮ್ಮನ್ನು ಯಾವಾಗ ಕರೆಯಬಹುದು ಎಂದು ಕೇಳಿದಾಗ, ನನಗೆ ಗೊತ್ತಿಲ್ಲ. ಅವರು ನನ್ನ ಜತೆ ಚರ್ಚೆ ಮಾಡಿರುವ ವಿಚಾರವನ್ನು ನಿಮ್ಮ (ಮಾಧ್ಯಮಗಳ) ಮುಂದೆ ಬಹಿರಂಗಪಡಿಸುವುದಿಲ್ಲ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದರು.

# ತೊಗರಿ ಖರೀದಿ ಕೇಂದ್ರ ತೆರೆಯಲು ಪ್ರಧಾನಿ ಮೋದಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಪತ್ರ

**ಬೆಂಗಳೂರು:** ಕರ್ನಾಟಕದಲ್ಲಿ ತೊಗರಿ ಬೆಳೆ ಕಟಾವಿಗೆ ಬಂದಿದ್ದು, ಬೆಲೆ ಕುಸಿತದಿಂದ ಕಂಗಾಲಾಗಿರುವ ರೈತರ ನೆರವಿಗೆ ಧಾವಿಸಬೇಕು ಎಂದು ಪ್ರಧಾನಿ ನರೇಂದ್ರ ಮೋದಿ ಹಾಗೂ ಕೇಂದ್ರ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಪ್ರಲ್ಹಾದ್ ಜೋಶಿ ಅವರಿಗೆ ಸಿಎಂ ಸಿದ್ದರಾಮಯ್ಯ ಅವರು ಪತ್ರ ಬರೆದಿದ್ದಾರೆ. ಕೂಡಲೇ ಕನಿಷ್ಠ ಬೆಂಬಲ ಬೆಲೆಯಲ್ಲಿ ತೊಗರಿ ಖರೀದಿ ಕೇಂದ್ರಗಳನ್ನು ತೆರೆಯುವಂತೆ ಕೇಂದ್ರ ಸರ್ಕಾರಕ್ಕೆ ಸಿಎಂ ಮನವಿ ಮಾಡಿದ್ದಾರೆ.



ಪ್ರಸ್ತುತ ಖಾರಿಫ್ ಹಂಗಾಮಿನಲ್ಲಿ (2025–26) ರಾಜ್ಯಾದ್ಯಂತ ಸುಮಾರು 16.80 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ತೊಗರಿ ಬಿತ್ತನೆ ಮಾಡಲಾಗಿದ್ದು, 12.60 ಲಕ್ಷ ಮೆಟ್ರಿಕ್ ಟನ್‌ಗೂ ಅಧಿಕ ಇಳುವರಿ ನಿರೀಕ್ಷಿಸಲಾಗಿದೆ. ಕಲಬುರಗಿ, ಯಾದಗಿರಿ, ಬೀದರ್, ರಾಯಚೂರು, ವಿಜಯಪುರ ಸೇರಿದಂತೆ ಉತ್ತರ ಕರ್ನಾಟಕದ ಪ್ರಮುಖ ಜಿಲ್ಲೆಗಳ ರೈತರಿಗೆ ತೊಗರಿ ಪ್ರಮುಖ ಆದಾಯದ ಮೂಲವಾಗಿದೆ. ಆದರೆ, ಮಾರುಕಟ್ಟೆಯಲ್ಲಿ ತೊಗರಿ ಧಾರಣೆ ಕ್ವಿಂಟಲ್‌ಗೆ 5,830 ರೂ.ಗಳಿಂದ 6,700 ರೂ.ಗಳ ಆಸುಪಾಸಿನಲ್ಲಿದೆ. ಕೇಂದ್ರ ಸರ್ಕಾರ ನಿಗದಿಪಡಿಸಿರುವ ಬೆಂಬಲ ಬೆಲೆ 8,000 ರೂಪಾಯಿ ಆಗಿದ್ದರೂ, ಮಾರುಕಟ್ಟೆ ದರ ಅದಕ್ಕಿಂತ ತೀರಾ ಕಡಿಮೆಯಿರುವುದು ರೈತರನ್ನು ಸಂಕಷ್ಟಕ್ಕೆ ಸಿಲುಕಿಸಿದೆ. ಡಿಸೆಂಬರ್ ಮತ್ತು ಜನವರಿ ತಿಂಗಳಲ್ಲಿ ಮಾರುಕಟ್ಟೆಗೆ ತೊಗರಿ ಬರುವ ಪ್ರಕ್ರಿಯೆ ಚುರುಕುಗೊಳ್ಳಲಿದೆ. ಆದರೆ, ಕೇಂದ್ರ ಸರ್ಕಾರ ಫೆಬ್ರವರಿ ಅಥವಾ ಮಾರ್ಚ್‌ನಲ್ಲಿ ಖರೀದಿ ಕೇಂದ್ರಗಳನ್ನು ತೆರೆಯುತ್ತದೆ. ಇದು ವಿಳಂಬವಾಗುವುದರಿಂದ ರೈತರು ಕಡಿಮೆ ಬೆಲೆಗೆ ಬೆಳೆಯನ್ನು ಮಾರಾಟ ಮಾಡಿ ಆರ್ಥಿಕ ನಷ್ಟ ಅನುಭವಿಸಬೇಕಾಗುತ್ತದೆ. ಆದ್ದರಿಂದ ಕೂಡಲೇ ಓಂಈಇಆ ಮತ್ತು ಓಅಅಈ ಮೂಲಕ ಬೆಂಬಲ ಬೆಲೆ ಯೋಜನೆಯಡಿ ತೊಗರಿ ಖರೀದಿಗೆ ಕ್ರಮ ಕೈಗೊಳ್ಳಬೇಕು ಎಂದು ಸಿಎಂ ಸಿದ್ದರಾಮಯ್ಯ ಕೋರಿದ್ದಾರೆ. ಬೆಳಗಾವಿಯ ಸುವರ್ಣ ಸೌಧದಲ್ಲಿ ಜಗತ್ತಿನ 2ನೇ ಅತಿ ದೊಡ್ಡ ಖಾದಿ ತ್ರಿವರ್ಣ ಧ್ವಜ ಅನಾವರಣ ಈ ಬಗ್ಗೆ ನವೆಂಬರ್ 6ರಂದೇ ರಾಜ್ಯ ಸರ್ಕಾರ ಪ್ರಸ್ತಾವನೆ ಸಲ್ಲಿಸಿದ್ದರೂ ಕೇಂದ್ರದಿಂದ ಇನ್ನೂ ಯಾವುದೇ ಪ್ರತಿಕ್ರಿಯೆ ಬಂದಿಲ್ಲ ಎಂದಿರುವ ಸಿಎಂ, ರೈತರು ಸರ್ಕಾರದ ಮೇಲಿಟ್ಟಿರುವ ನಂಬಿಕೆಯನ್ನು ಉಳಿಸಿಕೊಳ್ಳಲು ಮತ್ತು ಅವರನ್ನು ಸಾಲದ ಸುಳಿಯಿಂದ ಪಾರು ಮಾಡಲು ಕೇಂದ್ರ ಸರ್ಕಾರ ತಕ್ಷಣವೇ ಮಧ್ಯಪ್ರವೇಶಿಸಬೇಕು.

ವಿಳಂಬ ಮಾಡಿದರೆ ಅದು ರೈತರ ಆಕ್ರೋಶಕ್ಕೆ ಕಾರಣವಾಗುವುದಲ್ಲದೆ, ಎಂಎಸ್‌ಪಿ ನೀತಿಯ ಮೇಲಿನ ವಿಶ್ವಾಸವನ್ನೇ ಕಳೆದುಕೊಳ್ಳುವಂತೆ ಮಾಡುತ್ತದೆ ಎಂದು ಸಿದ್ದರಾಮಯ್ಯ ಎಚ್ಚರಿಸಿದ್ದಾರೆ. ತೊಗರಿ ಬೆಳೆಗಾರರ ಹಿತರಕ್ಷಣೆಗಾಗಿ ಕೇಂದ್ರ ಸರ್ಕಾರ ಕೂಡಲೇ ಸ್ಪಂದಿಸಬೇಕು ಎಂದು ಅವರು ಪತ್ರದಲ್ಲಿ ಮನವಿ ಮಾಡಿದ್ದಾರೆ.

# ರಾಜ್ಯದಲ್ಲಿ ಮತ್ತೆ ಟಿಪ್ಪು ಜಯಂತಿ: ಸದನದಲ್ಲಿ ಕಾಂಗ್ರೆಸ್ ಶಾಸಕ ಪ್ರಸ್ತಾಪ

**ಬೆಳಗಾವಿ:** ಬೆಳಗಾವಿಯ ಸುವರ್ಣ ಸೌಧದಲ್ಲಿ ನಡೆಯುತ್ತಿರುವ ಚಳಿಗಾಲದ ಅಧಿವೇಶನದಲ್ಲಿ ಟಿಪ್ಪು ಜಯಂತಿ ವಿಚಾರ ಇಂದು (ಡಿ. ಮತ್ತೆ ಮುನ್ನೆಲೆಗೆ ಬಂದಿದ್ದು, ಈ ಕುರಿತು ಕಾಂಗ್ರೆಸ್ ಶಾಸಕ ವಿಜಯಾನಂದ ಕಾಶಪ್ಪನವರ್ ಸರ್ಕಾರದ ಗಮನ ಸೆಳೆಯುವ ಸೂಚನೆಯಲ್ಲಿ ಉಲ್ಲೇಖಿಸಿದ್ದಾರೆ. ಆದರೆ, ವಿಪಕ್ಷಗಳು ಟಿಪ್ಪು ಜಯಂತಿ ಆಚರಣೆಗೆ ತೀವ್ರ ವಿರೋಧ ವ್ಯಕ್ತಪಡಿಸಿ, ಸದನದ ಬಾವಿಗಿಳಿದು ಸರ್ಕಾರದ ವಿರುದ್ಧ ಮುಗಿಬೀಳುವ ಸಾಧ್ಯತೆಯಿದೆ.



ಈ ಮೂಲಕ ಕೆಲವು ವರ್ಷಗಳಿಂದ ಶಮನಗೊಂಡಿದ್ದ ಟಿಪ್ಪು ಜಯಂತಿಯ ಕಿಡಿ ರಾಜ್ಯದಲ್ಲಿ ಪುನಃ ಹೊತ್ತಿಕೊಳ್ಳಬಹುದು.

ಸದನದಲ್ಲಿ ಟಿಪ್ಪು ಜಯಂತಿ ವಿಚಾರವನ್ನು ಪ್ರಸ್ತಾಪಿಸಿದ ಕಾಶಪ್ಪನವರ್ ನಮ್ಮ ರಾಷ್ಟ್ರದಲ್ಲಿ ಎಲ್ಲಾ ಜಾತಿ, ಜನಾಂಗ ಇದ್ದು, ಜಾತ್ಯತೀತ ರಾಷ್ಟ್ರದಲ್ಲಿ ವಿರೋಧ ಯಾಕೆ? ಅಲ್ಪಸಂಖ್ಯಾತರು ಸ್ವಾತಂತ್ರ್ಯ ಹೋರಾಟದಲ್ಲಿ ಭಾಗವಹಿಸಿಲ್ವಾ? ಈ ಹಿಂದೆ ಯಡಿಯೂರಪ್ಪ ಹಾಗೂ ಜಗದೀಶ್ ಶೆಟ್ಟರ್ ಟಿಪ್ಪು ವೇಷ ಹಾಕಿರಲಿಲ್ವಾ ಎಂದು ಪ್ರಶ್ನಿಸಿದ್ದಾರೆ. ಇತ್ತ ವಿಪಕ್ಷದಿಂದ ಅಧಿವೇಶನದಲ್ಲಿ ಕಾಲಹರಣ ಮಾಡಲು ಟಿಪ್ಪು ವಿಚಾರ ಉಪಯೋಗಿಸುತ್ತಿದ್ದಾರೆ. ಎಂದು ಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಸರ್ಕಾರದ ವಿರುದ್ಧ ಆಕ್ರೋಶ ಹೊರಹಾಕಿದ್ದಾರೆ. ಸಿದ್ದರಾಮಯ್ಯ ನೇತೃತ್ವದ 2013–18ರ ಸರ್ಕಾರದಲ್ಲಿ ಟಿಪ್ಪು ಜಯಂತಿ ಆಚರಣೆಗೆ ಅಂದಿನ ಸರ್ಕಾರ ಅಸ್ತು ಎಂದಿತ್ತು.

ಆದರೆ, ಬಿಜೆಪಿ ಈ ವಿಚಾರಕ್ಕೆ ತೀವ್ರ ವಿರೋಧ ವ್ಯಕ್ತಪಡಿಸಿತ್ತು. ಇದೇ ಕಾರಣದಿಂದಾಗಿ ಕರಾವಳಿ ಭಾಗದಲ್ಲಿ ಸಂಘರ್ಷದ ಸನ್ನಿವೇಶ ನಿರ್ಮಾಣಗೊಂಡಿತ್ತು. ಈ ಎಲ್ಲಾ ವಿರೋಧದ ನಡುವೆಯೂ, ಅಂದಿನ ಸರ್ಕಾರ ಬಿಗಿ ಭದ್ರತೆಯಲ್ಲಿ ಟಿಪ್ಪು ಜಯಂತಿ ಆಚರಣೆ ಮಾಡಿತ್ತು.

2019ರಲ್ಲಿ ಆಪರೇಷನ್ ಕಮಲದ ಮೂಲಕ ರಾಜ್ಯದಲ್ಲಿ ಅಧಿಕಾರಕ್ಕೆ ಬಂದ ಬಿಜೆಪಿ ಸರ್ಕಾರ ಟಿಪ್ಪು ಜಯಂತಿಯನ್ನು ಸ್ಥಗಿತಗೊಳಿಸಿತ್ತು. ಮತ್ತೆ ಇದೀಗ ಕೈ ಶಾಸಕ ಕಾಶಪ್ಪನವರ್ ಈ ವಿಚಾರವನ್ನು ಪ್ರಸ್ತಾಪಿಸಿದ್ದು, ಸರ್ಕಾರ ಇದಕ್ಕೆ ಯಾವ ರೀತಿ ಉತ್ತರಿಸಲಿದೆ ಎಂಬುದು ತೀವ್ರ ಕುತೂಹಲ ಕೆರಳಿಸಿದ್ದು, ರಾಜ್ಯದಲ್ಲಿ ಈ ಕುರಿತಾದ ಮತ್ತೊಂದು ಸುತ್ತಿನ ವಿವಾದದ ಚರ್ಚೆ ಆರಂಭವಾಗುವ ಮುನ್ಸೂಚನೆ ಇದೆ. ನಂದಿಬೆಟ್ಟದ ಟಿಪ್ಪು ಅರಮನೆ ಮೇಲೆ ಗ್ಯಾಂಗ್‌ಸ್ಟರ್ ಲಾರೆನ್ಸ್ ಬಿಷ್ಣೋಯ್ ಹೆಸರು ಕೆತ್ತನೆ!

ಬಿಜೆಪಿ ಟಿಪ್ಪು ಜಯಂತಿಗೆ ಆರಂಭದಿಂದಲೂ ವಿರೋಧಿಸುತ್ತಾ ಬಂದಿದೆ. ಸಿದ್ದರಾಮಯ್ಯನವರು 2013 ರಿಂದ 2018ರ ವರೆಗಿನ ಸರ್ಕಾರದಲ್ಲಿ ಟಿಪ್ಪು ಜಯಂತಿಯ ಆಚರಣೆ ನಿರ್ಧಾರ ಕೈಗೊಂಡಾಗ ಬಿಜೆಪಿ ರಾಜ್ಯದ್ಯಾಂತ ಹೋರಾಟ ನಡೆಸುವುದಾಗಿ ಎಚ್ಚರಿಕೆ ನೀಡಿತ್ತು.

ಮತ್ತೆ ಇದೀಗ ಟಿಪ್ಪು ಜಯಂತಿ ಆಚರಣೆ ವಿಚಾರ ರಾಜ್ಯದಲ್ಲಿ ಸಂಘರ್ಷದ ವಾತಾವರಣ ನಿರ್ಮಾಣ ಮಾಡಲಿದೆ ಎನ್ನಲಾಗುತ್ತಿದೆ.

## ಭಾರತದ ವಿರುದ್ಧ ಮತ್ತೆ ಪಾಕ್ ಅನಗತ್ಯ ಪ್ರಚೋದನೆ: ನಾಲಗೆ ಹರಿಯಬಿಟ್ಟ ಫೀಲ್ಡ್ ಮಾರ್ಷಲ್ ಅಸಿಮ್ ಮುನೀರ್



**ಇಸ್ಲಾಮಾಬಾದ್:** ಪಾಕಿಸ್ತಾನದ ಹೊಸದಾಗಿ ನೇಮಕಗೊಂಡ ರಕ್ಷಣಾ ಪಡೆಗಳ ಮುಖ್ಯಸ್ಥ ಫೀಲ್ಡ್ ಮಾರ್ಷಲ್ ಅಸಿಮ್ ಮುನೀರ್ ಭಾರತದ ವಿರುದ್ಧ ಮತ್ತೊಂದು ಅನಗತ್ಯ ಪ್ರಚೋದನೆಯನ್ನು ಹೊರಡಿಸಿದ್ದಾರೆ. ಭಾರತ ಭ್ರಮೆಯಲ್ಲಿರಬಾರದು. ಭವಿಷ್ಯದಲ್ಲಿ ಭಾರತದಿಂದ ಯಾವುದೇ ಆಕ್ರಮಣ ನಡೆದರೆ ಇನ್ನೂ ಹೆಚ್ಚು ತ್ವರಿತ ಮತ್ತು ತೀವ್ರವಾದ ಪ್ರತಿಕ್ರಿಯೆ ನೀಡುವುದಾಗಿ ನಾಲಗೆ ಹರಿಯಬಿಟ್ಟಿದ್ದಾರೆ.

ಕಳೆದ ವಾರ ಮೂರು ರಕ್ಷಣಾ ಪಡೆಗಳ ಮುಖ್ಯಸ್ಥರಾಗಿ ಹೊಸ ಹುದ್ದೆಯನ್ನು ಮುನೀರ್ ವಹಿಸಿಕೊಂಡಿದ್ದಾರೆ. ದೇಶದ ಮೊದಲ ಸಿಡಿಎಫ್ ಆಗಿ ನೇಮಕಗೊಂಡಿದ್ದಕ್ಕಾಗಿ ಆಯೋಜಿಸಿದ್ದ ಸನ್ಮಾನ ಸಮಾರಂಭದಲ್ಲಿ ಸಶಸ್ತ್ರ ಪಡೆಗಳನ್ನುದ್ದೇಶಿ ಮಾತನಾಡಿದರು. ಯಾವುದೇ ದಾಳಿ ನಡೆದರೆ ಪಾಕಿಸ್ತಾನದ ಪ್ರತಿಕ್ರಿಯೆ ಇನ್ನೂ ವೇಗವಾಗಿ ಮತ್ತು ತೀವ್ರವಾಗಿರಲಿದೆ ಎಂದು ಎಚ್ಚರಿಸಿದರು.

26 ನಾಗರಿಕರ ಸಾವಿಗೆ ಕಾರಣವಾದ ಪಹಲ್ಗಾಮ್ ದಾಳಿಗೆ ಪ್ರತೀಕಾರವಾಗಿ ಭಾರತವು ಮೇ 7ರಂದು ಪಾಕಿಸ್ತಾನ ಮತ್ತು ಪಾಕ್ ಆಕ್ರಮಿತ ಕಾಶ್ಮೀರದಲ್ಲಿನ ಭಯೋತ್ಪಾದಕ ನೆಲೆಗಳನ್ನು ಗುರಿಯಾಗಿಸಿಕೊಂಡು ಆಪರೇಷನ್ ಸಿಂದೂರ್ ಕಾರ್ಯಾಚರಣೆಯನ್ನು ಪ್ರಾರಂಭಿಸಿತು. ಈ ದಾಳಿಗಳು ನಾಲ್ಕು ದಿನಗಳ ತೀವ್ರ ಘರ್ಷಣೆಗೆ ಕಾರಣವಾಯಿತು. ಮೇ 10ರಂದು ಮಿಲಿಟರಿ ಕಾರ್ಯಾಚರಣೆಯನ್ನು ಸ್ಥಗಿತಗೊಳಿಸುವ ಒಪ್ಪಂದದೊಂದಿಗೆ ಕೊನೆಗೊಂಡಿತು.

ಪಾಕಿಸ್ತಾನ ಶಾಂತಿಯುತ ರಾಷ್ಟ್ರ ಎಂದು ಮುನೀರ್ ಹೇಳಿದರು. ಆದರೆ ಇಸ್ಲಾಮಾಬಾದ್‌ನ ಪ್ರಾದೇಶಿಕ ಸಮಗ್ರತೆ ಅಥವಾ ಸಾರ್ವಭೌಮತ್ವವನ್ನು ಪರೀಕ್ಷಿಸಲು ಯಾರಿಗೂ ಅವಕಾಶ ನೀಡುವುದಿಲ್ಲ ಎಂದು ಎಚ್ಚರಿಸಿದರು. ಸಮಾರಂಭದಲ್ಲಿ ಪಾಕಿಸ್ತಾನ ಸೇನೆ, ಪಾಕಿಸ್ತಾನ ನೌಕಾಪಡೆ ಮತ್ತು ಪಾಕಿಸ್ತಾನ ವಾಯುಪಡೆಯ ಮೂರು ಸೇವೆಗಳ ತುಕಡಿಗಳು ಫೀಲ್ಡ್ ಮಾರ್ಷಲ್ ಅವರಿಗೆ ಗೌರವ ರಕ್ಷೆಯನ್ನು ನೀಡಿದವು.

ಪಾಕಿಸ್ತಾನ–ಅಫ್ಘಾನಿಸ್ತಾನ ಉದ್ವಿಗ್ನತೆಯ ಕುರಿತು ಮಾತನಾಡಿದ ಮುನೀರ್, ಕಾಬೂಲ್‌ನಲ್ಲಿರುವ ಅಫ್ಘಾನ್ ತಾಲಿಬಾನ್ ಆಡಳಿತಕ್ಕೆ ಸ್ಪಷ್ಟ ಸಂದೇಶ ನೀಡಲಾಗಿದೆ ಎಂದು ಹೇಳಿದರು. ತಾಲಿಬಾನ್‌ಗೆ ಫಿತ್ನಾ ಅಲ್–ಖವಾರಿಜ್ ಮತ್ತು ಪಾಕಿಸ್ತಾನ ನಡುವೆ ಆಯ್ಕೆ ಮಾಡುವುದನ್ನು ಬಿಟ್ಟು ಬೇರೆ ದಾರಿಯಿಲ್ಲ ಎಂದು ಅವರು ಹೇಳಿದರು. ಕಳೆದ ವರ್ಷ ಸರ್ಕಾರವು, ನಿಷೇಧಿತ ತೆಹ್ರೀಕ್–ಎ–ತಾಲಿಬಾನ್ ಪಾಕಿಸ್ತಾನ್ ಅನ್ನು ಫಿತ್ನಾ ಅಲ್–ಖವಾರಿಜ್ ಎಂದು ಘೋಷಿಸಿತು.

ಹೊಸದಾಗಿ ಸ್ಥಾಪಿಸಲಾದ ರಕ್ಷಣಾ ಪಡೆಗಳ ಪ್ರಧಾನ ಕಚೇರಿಯು ಐತಿಹಾಸಿಕವಾದ ಮೂಲಭೂತ ಬದಲಾವಣೆಯ ಸಂಕೇತವಾಗಿದೆ ಎಂದು ಮುನೀರ್ ಹೇಳಿದರು. ಪ್ರತಿಯೊಂದು ಸೇವೆಯು ತನ್ನ ಕಾರ್ಯಾಚರಣೆಯ ಸನ್ನದ್ಧತೆಗಾಗಿ ತನ್ನ ವಿಶಿಷ್ಟತೆಯನ್ನು ಕಾಯ್ದುಕೊಳ್ಳುತ್ತದೆ ಮತ್ತು ಸಿಡಿಎಫ್ ಪ್ರಧಾನ ಕಚೇರಿಯು ಸೇವೆಗಳ ಕಾರ್ಯಾಚರಣೆಗಳನ್ನು ಸಂಘಟಿಸುತ್ತದೆ ಎಂದು ಅವರು ಹೇಳಿದರು.

ಈ ಕಾರ್ಯಕ್ರಮದಲ್ಲಿ ಪಾಕಿಸ್ತಾನ ವಾಯುಪಡೆಯ ಮುಖ್ಯಸ್ಥ ಮಾರ್ಷಲ್ ಜಹೀರ್ ಅಹ್ಮದ್ ಬಾಬರ್ ಸಿಧು, ನೌಕಾಪಡೆಯ ಮುಖ್ಯಸ್ಥ ಅಡ್ಮಿರಲ್ ನವೀದ್ ಅಶ್ರಫ್ ಮತ್ತು ಮೂರು ಸಶಸ್ತ್ರ ಪಡೆಗಳ ಹಿರಿಯ ಅಧಿಕಾರಿಗಳು ಭಾಗವಹಿಸಿದ್ದರು.

ಕಳೆದ ವಾರ ಸರ್ಕಾರವು ಐದು ವರ್ಷಗಳ ಅವಧಿಗೆ ಹೊಸ ಹುದ್ದೆಯಲ್ಲಿ ನೇಮಕಾತಿಗಾಗಿ ಅಧಿಕೃತ ಅಧಿಸೂಚನೆಯನ್ನು ಹೊರಡಿಸಿದ ನಂತರ ಮುನೀರ್ ಮೊದಲ ಸಿಡಿಎಫ್ ಆಗಿ ಅಧಿಕಾರ ವಹಿಸಿಕೊಂಡರು. ಅವರು ಏಕಕಾಲದಲ್ಲಿ ಸೇನಾ ಮುಖ್ಯಸ್ಥರಾಗಿಯೂ ಸೇವೆ ಸಲ್ಲಿಸಲಿದ್ದಾರೆ.

ಸಿಡಿಎಫ್ ಹುದ್ದೆಯು ಮುನೀರ್ ಅವರ ಮೂರು ಸೇವಾ ಶಾಖೆಗಳ (ಭೂಸೇನೆ, ನೌಕಾಪಡೆ ಮತ್ತು ವಾಯುಪಡೆ) ಮೇಲೆ ಅವರ ಅಧಿಕಾರವನ್ನು ಬಲಪಡಿಸುವುದಲ್ಲದೆ, ದೇಶದ ಪರಮಾಣು ಶಸ್ತ್ರಾಸ್ತ್ರಗಳು ಮತ್ತು ಕ್ಷಿಪಣಿ ವ್ಯವಸ್ಥೆಗಳನ್ನು ನಿರ್ವಹಿಸುವ ರಾಷ್ಟ್ರೀಯ ಕಾರ್ಯತಂತ್ರದ ಕಮಾಂಡ್‌ನ ಮೇಲ್ವಿಚಾರಣೆಯನ್ನು ಸಹ ನೀಡುತ್ತದೆ. ಕಳೆದ ತಿಂಗಳು 27ನೇ ಸಾಂವಿಧಾನಿಕ ತಿದ್ದುಪಡಿ ಮತ್ತು ಪಾಕಿಸ್ತಾನ ಸೇನೆ, ವಾಯುಪಡೆ ಮತ್ತು ನೌಕಾಪಡೆ (ತಿದ್ದುಪಡಿ) ಮಸೂದೆಗಳು 2025ರಲ್ಲಿನ ಬದಲಾವಣೆಗಳ ನಂತರ ಸಿಡಿಎಫ್ ಅನ್ನು ಸ್ಥಾಪಿಸಲಾಯಿತು. ಅಂದಹಾಗೆ ಮುನೀರ್ ಭಾರತದ ವಿರುದ್ಧ ಅನಗತ್ಯ ಬೆದರಿಕೆಗಳನ್ನು ಹಾಕುತ್ತಿರುವುದು ಇದೇ ಮೊದಲಲ್ಲ. ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ಭಯೋತ್ಪಾದಕರು 26 ನಾಗರಿಕರನ್ನು ಕೊಂದ ಕೆಲವು ದಿನಗಳ ಮೊದಲು, ಮುನೀರ್ ಭಾರತದ ವಿರುದ್ಧ ಇದೇ ರೀತಿಯ ಪ್ರಚೋದನಕಾರಿ ಭಾಷಣ ಮಾಡಿದ್ದರು.

# ಯುಕೆಪಿ ಹಂತ–3 ಯೋಜನೆ ಜಾರಿಗೆ ಮಹಾರಾಷ್ಟ್ರ ಆಂಧ್ರ ಅಡ್ಡಗಾಲು: ಡಿಸಿಎಂ ಡಿ.ಕೆ. ಶಿವಕುಮಾರ್

**ಬೆಳಗಾವಿ:** ಕೃಷ್ಣಾ ಮೇಲ್ದಂಡೆ ಯೋಜನೆ ಹಂತ–3ರ ಅನುಷ್ಠಾನಕ್ಕೆ 2013 ರಿಂದ ಇಲ್ಲಿಯವರೆಗೆ ಕೇಂದ್ರ ಸರ್ಕಾರ ಅಧಿಸೂಚನೆ ಹೊರಡಿಸದೆ ಬಾಕಿ ಉಳಿಸಿಕೊಂಡಿದೆ. ಮೊದಲನೇ ಬಾರಿಗೆ ಮಹಾರಾಷ್ಟ್ರ, ಎರಡನೇ ಬಾರಿಗೆ ಆಂಧ್ರ ಪ್ರದೇಶದ ಅಡ್ಡಗಾಲು ಹಾಕಿವೆ? ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಹೇಳಿದರು. ವಿಧಾನಸಭೆ ಪ್ರಶ್ನೋತ್ತರ ಕಲಾಪದ ವೇಳೆ ವಿವಿಧ ಶಾಸಕರು, ನೀರಾವರಿ ಯೋಜನೆಗಳ ಸಂಬಂಧ ಕೇಳಿದ ಪ್ರಶ್ನೆಗಳಿಗೆ ಜಲಸಂಪನ್ಮೂಲ ಸಚಿವರೂ ಆಗಿರುವ ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಉತ್ತರಿಸಿದರು.

ಕೃಷ್ಣಾ ಮೇಲ್ದಂಡೆ ಯೋಜನೆ (ಹಂತ–3) ಸಂಬಂಧ ಭೂಸ್ವಾಧೀನ ಪರಿಹಾರ ಸೇರಿದಂತೆ ಇತರೇ ವಿಚಾರಗಳ ಬಗ್ಗೆ ಶಾಸಕರಾದ ಬಸನಗೌಡ ಪಾಟೀಲ್ ಯತ್ನಾಳ ಅವರ ಪ್ರಶ್ನೆಗೆ ಉತ್ತರಿಸಿದ ಶಿವಕುಮಾರ್ ಅವರು, ದೆಹಲಿಯಲ್ಲಿರುವ ತಮ್ಮ ಸ್ನೇಹಿತರ ಮೇಲೆ ಒತ್ತಡ ಹೇರಿ ಈ ಯೋಜನೆಗೆ ಅನುಮತಿ ಕೊಡಿಸಿದರೆ, ಕೂಡಲೇ ಸಾಲ ಮಾಡಿ ಈ ಯೋಜನೆ ಪೂರ್ಣಗೊಳಿಸಲಾಗುವುದು. ಕೇಂದ್ರ ಸಚಿವರಾದ ಸೋಮಣ್ಣ ಅವರ ಜತೆ ಮೂರು ಬಾರಿ ಕೇಂದ್ರ ಜಲಶಕ್ತಿ ಸಚಿವರನ್ನು ಭೇಟಿಯಾಗಿದ್ದೇವೆ. ಕೇಂದ್ರ ಜಲಶಕ್ತಿ ಸಚಿವರು ಈ ಬಗ್ಗೆ ಕರೆದಿದ್ದ ಸಂಬಂಧಪಟ್ಟ ರಾಜ್ಯಗಳ ಸಭೆಯನ್ನು ಕಾರಣಾಂತರಗಳಿಂದ ಮುಂದೂಡಿದ್ದೇನೆ ಎಂದು ತಿಳಿಸಿದ್ದರು ಎಂದರು.

ಕೃಷ್ಣಾ ಮೇಲ್ದಂಡೆ ಯೋಜನೆ ವಿಚಾರವಾಗಿ ಸಿದ್ದರಾಮಯ್ಯ ಅವರು ಹಾಗೂ ನಾವು ಚರ್ಚೆ ಮಾಡಿ ಭೂ ಪರಿಹಾರದ ಬಗ್ಗೆ ಐತಿಹಾಸಿಕ ತೀರ್ಮಾನ ತೆಗೆದುಕೊಂಡಿದ್ದೇವೆ. ಬಸವರಾಜ ಬೊಮ್ಮಾಯಿ ಅವರ ಕಾಲದಲ್ಲಿ ಆಗಿದ್ದ ಭೂ ಪರಿಹಾರ ತೀರ್ಮಾನವನ್ನು ಮಾರ್ಪಾಡು ಮಾಡಿ ಒಂದು ಹಂತಕ್ಕೆ ತಂದಿದ್ದೇವೆ. ಈ ಯೋಜನೆ ಪೂರ್ಣಗೊಳಿಸಲು ನಾವು ಬದ್ಧವಾಗಿದ್ದೇವೆ. ಎಲ್ಲಾದರೂ ಹಣ ತಂದು ವೆಚ್ಚ ಮಾಡಲು ಯೋಜನೆ ರೂಪಿಸಿದ್ದೇವೆ. ವರ್ಷಕ್ಕೆ



15–20 ಸಾವಿರ ಕೋಟಿ ನೀಡಬೇಕು, ಮುಂದಿನ ಮೂರ್ನಾಲ್ಕು ವರ್ಷದಲ್ಲಿ ಭೂಸ್ವಾಧೀನ ಪೂರ್ಣಗೊಳಿಸಬೇಕು ಎಂದು ಹೊರಟಿದ್ದೇವೆ. ಕೆಲವು ಕಡೆ ಕೆಲಸವನ್ನೂ ಪ್ರಾರಂಭ ಮಾಡಿದ್ದೇವೆ? ಎಂದರು.ಮೊದಲೇ ಭೂಮಿ ನೀಡಿರುವ ರೈತರಿಗೆ ಭೂಪರಿಹಾರ ನೀಡಿ ಎಂದು ಯತ್ನಾಳ್ ಅವರು ಕೇಳಿದಾಗ, ಭೂ ಪರಿಹಾರ ವಿಚಾರ ಮಾಫಿಯಾವಾಗಿ ಹೋಗಿದೆ. 10 ಲಕ್ಷ ಭೂಮಿ ಬೆಲೆಯಿದ್ದರೆ 10 ಕೋಟಿ ಅವಾರ್ಡ್ ಮಾಡಲಾಗಿದೆ. ವಕೀಲರು ಹಾಗೂ ಅಧಿಕಾರಿಗಳು ಹೊಂದಾಣಿಕೆ ಮಾಡಿಕೊಂಡ ಕಾರಣಕ್ಕೆ ಇಷ್ಟೊಂದು ಪರಿಹಾರ ನೀಡಲು ಆಗುವುದಿಲ್ಲ. ನಾನು ಇದನ್ನು ಒಪ್ಪುವುದಿಲ್ಲ. ನಾವು ರಾಜ್ಯದ ಹಿತ ಕಾಪಾಡಲು ಬದ್ಧ ಎಂದರು. ಘಟಪ್ರಭಾ ಕಾಲುವೆಗಳ ಅಭಿವೃದ್ಧಿಗೆ 1,722 ಕೋಟಿ ಯೋಜನೆ


ಹಿಡಕಲ್ ಜಲಾಶಯದ ಬಲ ಹಾಗೂ ಎಡ ದಂಡೆ ಕಾಲುವೆಗಳ ದುರಸ್ತಿ ಹಾಗೂ ಕಾಲುವೆಗಳಿಗೆ ಅಕ್ರಮ ಪಂಪ್ ಸೆಟ್ ಅಳವಡಿಕೆ ವಿರುದ್ಧ ಕ್ರಮ ತೆಗೆದುಕೊಳ್ಳಿ ಎನ್ನುವ ಶಾಸಕ ಜಿ.ಟಿ.ಪಾಟೀಲ್ ಅವರು ಕೇಳಿದ ಪ್ರಶ್ನೆಗೆ, ಘಟಪ್ರಭಾ ಬಲ ಹಾಗೂ ಎಡ ದಂಡೆ ಕಾಲುವೆಗಳ ಅಭಿವೃದ್ಧಿಗೆ 1722 ಕೋಟಿ ಯೋಜನೆ ತಯಾರಿಸಿ ಕೇಂದ್ರ ಸರ್ಕಾರಕ್ಕೆ ಕಳುಹಿಸಿಕೊಡಲಾಗಿದೆ. ಇದಕ್ಕೆ ಒಪ್ಪಿಗೆ ಸಿಕ್ಕರೆ ಕೇಂದ್ರ ಸರ್ಕಾರದ ಶೇ. 60, ರಾಜ್ಯ ಸರ್ಕಾರದ ಶೇ.40 ವೆಚ್ಚದ ಸಹಭಾಗಿತ್ವದಲ್ಲಿ ಯೋಜನೆಯನ್ನು ಕೈಗೆತ್ತಿಕೊಳ್ಳಲಾಗುವುದು. ನೀವು ಹಾಗೂ ನಿಮ್ಮ ಸಂಸದರು ಕೇಂದ್ರ ಸರ್ಕಾರದ ಮೇಲೆ ಹೆಚ್ಚಿನ ಒತ್ತಡ ಹಾಕಬೇಕಿದೆ ಎಂದರು.

ಕಾಲುವೆಗಳಿಗೆ ಅಕ್ರಮ ಪಂಪ್ ಸೆಟ್‌ಗಳನ್ನು ಹಾಕುವುದರ ವಿರುದ್ಧ ಹೊಸ ಕಾನೂನು ತರಲಾಗಿದೆ. ಇದರ ಬಗ್ಗೆ ತರಬೇತಿ ಕಾರ್ಯಕ್ರಮ ನಡೆಯುತ್ತಿದೆ. ಕಾಲುವೆ ಕೊನೆ ಭಾಗಗಳಿಗೆ ನೀರು ತಲುಪಲೇ ಬೇಕಿದೆ. ಉದಾಹರಣೆಗೆ ಪಾಂಡವಪುರ ಭಾಗದವರೇ ಹೆಚ್ಚು ನೀರು ಬಳಸುತ್ತಾರೆ. ಮಳವಳ್ಳಿ ಭಾಗಕ್ಕೆ ನೀರೇ ತಲುಪುತ್ತಿಲ್ಲ. ಇದರ ಬಗ್ಗೆ ಎಲ್ಲಾ ಶಾಸಕರು ಒಪ್ಪಿಕೊಂಡರೆ ಅಭಿಯಾನವನ್ನೇ ಪ್ರಾರಂಭ ಮಾಡೋಣ ಎಂದರು. 2026 ಮಾರ್ಚ್ ವೇಳೆಗೆ ನಾಗರಬೆಟ್ಟ ಯೋಜನೆ ಲೋಕಾರ್ಪಣೆಗೆ ಕ್ರಮ

ನಾಗರಬೆಟ್ಟ ಏತ ನೀರಾವರಿ ಯೋಜನೆಗೆ ಬಾಕಿ ಉಳಿದಿರುವ ಕಾಮಗಾರಿಗೆ ಅನುದಾನ ಬಿಡುಗ–'ಡೆ ಮಾಡಿ ಎನ್ನುವ ಶಾಸಕರಾದ ಅಪ್ಪಾಜಿ ಸಿ.ಎಸ್ ನಾಡಗೌಡ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ, 2026 ಮಾರ್ಚ್ ವೇಳೆಗೆ ಲೋಕಾರ್ಪಣೆ.

# ಸಂಸತ್ತಿನಲ್ಲಿ ಕಾವೇರಲಿರುವ ಚುನಾವಣಾ ಆಯೋಗದ ಎಸ್‌ಐಆರ್ ಪ್ರಕ್ರಿಯೆ!

**ನವದೆಹಲಿ:** ರಾಷ್ಟ್ರ ರಾಜಕಾರಣದಲ್ಲಿ ಕಳೆದ ಕೆಲ ತಿಂಗಳುಗಳಿಂದ ಭಾರಿ ಚರ್ಚೆಯಗುತ್ತಿರುವ ಮತದಾರರ ಪಟ್ಟಿಯ ತೀವ್ರ ಪರಿಷ್ಕರಣೆ ವಿಷಯ ಇಂದು ಸಂಸತ್ತಿನಲ್ಲಿ ಚರ್ಚೆಯಾಗಲಿದೆ. ಡಿಸೆಂಬರ್ 1ರಂದು ಚಳಿಗಾಲದ ಅಧಿವೇಶನ ಆರಂಭವಾದಾಗಿನಿಂದಲೂ ವಿರೋಧ ಪಕ್ಷಗಳು ಈ ಕುರಿತ ಚರ್ಚೆಗೆ ಪಟ್ಟು ಹಿಡಿದಿದ್ದವು. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹಾಗೂ ಸೋನಿಯಾ ಗಾಂಧಿ ಮತ್ತು ರಾಹುಲ್ ಗಾಂಧಿ ಸೇರಿದಂತೆ ವಿರೋಧ ಪಕ್ಷದ ನಾಯಕರು ಸಂಸತ್ತಿನ ಒಳಗೆ ಮತ್ತು ಹೊರಗೆ ಪ್ರತಿಭಟನೆ ನಡೆಸಿದ್ದರು. ಇದೀಗ ವಿಪಕ್ಷಗಳ ಒತ್ತಾಯಕ್ಕೆ ಮಣಿದಿರುವ ಕೇಂದ್ರ ಸರ್ಕಾರ ಇಂದು (ಡಿ. 09) ಚುನಾವಣಾ ಸುಧಾರಣೆಗಳ ಕುರಿತು ಚರ್ಚೆ ನಡೆಸಲು ನಿರ್ಧರಿಸಿದೆ. ಇನ್ನು ಚರ್ಚೆಯಲ್ಲಿ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ವಿರೋಧ ಪಕ್ಷದ ನೇತೃತ್ವ ವಹಿಸಲಿದ್ದು, ಕೇಂದ್ರ ಕಾನೂನು ಸಚಿವ ಅರ್ಜುನ್ ಮೇಘವಾಲ್ ಉತ್ತರಿಸಲಿದ್ದಾರೆ.



ಕಳೆದ ನವೆಂಬರ್‌ನಲ್ಲಿ ನಡೆದ ಬಿಹಾರ ಚುನಾವಣಾ ಫಲಿತಾಂಶದ ನಂತರ ವಿಪಕ್ಷಗಳು ಮತಗಳ್ಳತನದ ಆರೋಪ ಮಾಡಿದ್ದವು. ನಕಲಿ ಮತದಾರರನ್ನು ಮತದಾರ ಪಟ್ಟಿಯಿಂದ ಕೈ ಬಿಡುವ ಸಲುವಾಗಿ ಪ್ರಸ್ತುತಪಡಿಸಿದ್ದ ಎಸ್‌ಐಆರ್ ಅನ್ನು ಬಿಹಾರದಲ್ಲಿ ಅನುಷ್ಠಾನಗೊಳಿಸಿದ ವೇಳೆ ಕೇಂದ್ರ ಸರ್ಕಾರ ದುರ್ಬಳಕೆ ಮಾಡಿಕೊಂಡಿದೆ. ವಿರೋಧ ಪಕ್ಷಗಳ ಪರವಾಗಿ ಮತ ಹಾಕುವ ಸಮುದಾಯಗಳನ್ನು ಗುರಿಯಾಗಿಸಿಕೊಂಡು ಈ ಪ್ರಕ್ರಿಯೆ ನಡೆಸಲಾಗಿದೆ ಎಂದು ಕಾಂಗ್ರೆಸ್ ಆರೋಪಿಸಿತ್ತು. ಈ ಹಿನ್ನೆಲೆಯಲ್ಲಿ ವಿಪಕ್ಷಗಳು ಈ ಕುರಿತಾಗಿ ಚರ್ಚೆ ನಡೆಸಲು ಒಪ್ಪಿಗೆ ಸೂಚಿಸುವಂತೆ ಅಧಿವೇಶನದ ಆರಂಭದಿಂದಲೂ ಪಟ್ಟು ಹಿಡಿದಿದ್ದವು.

ವಿಪಕ್ಷಗಳು ಚರ್ಚಿಸಬಹುದಾದ ವಿಷಯಗಳೇನು?

ರಾಹುಲ್ ಗಾಂಧಿಯವರು ಈ ಚರ್ಚೆಯಲ್ಲಿ ಭಾರತೀಯ ಚುನಾವಣಾ ಆಯೋಗ ಬಿಜೆಪಿ ಜೊತೆ ಶಾಮೀಲಾಗಿದ್ದು, ಮತಗಳ್ಳತನದಲ್ಲಿ ಭಾ–ಗಿಯಾಗಿದೆ ಎನ್ನುವ ವಿಷಯ ಚರ್ಚಿಸುವ ಸಾಧ್ಯತೆಯಿದೆ. ಮತದಾರರ ಪಟ್ಟಿಯಲ್ಲಿ ದೊಡ್ಡ ಪ್ರಮಾಣದ ವ್ಯತ್ಯಾಸಗಳು ಚುನಾವಣಾ ಕಾರ್ಯವಿಧಾನಗಳಲ್ಲಿನ ಲೋಪಗಳು ಕುರಿತು ಮಾತನಾಡಬಹುದು. ಈ ವಿಷಯಗಳು ಮಹಾರಾಷ್ಟ್ರ, ಹರಿಯಾಣ ಮತ್ತು ಕರ್ನಾಟಕದಲ್ಲಿ ಇತ್ತೀಚಿನ ಪತ್ರಿಕಾಗೋಷ್ಠಿಗಳಲ್ಲಿಯೂ ಸಹ ಕೇಳಿ ಬಂದಿದ್ದವು. ಮತದಾರರ ಪಟ್ಟಿ ಮರು ಪರಿಶೀಲನಾ ಕಾರ್ಯದ ಸಮಯದಲ್ಲಿ ಬೂತ್ ಮಟ್ಟದ ಅಧಿಕಾರಿಗಳ (ಬಿಎಲ್‌ಒ) ಮೇಲಿನ ಒತ್ತಡವನ್ನು ಕಾಂಗ್ರೆಸ್ ಪ್ರಸ್ತಾಪಿಸುವ ನಿರೀಕ್ಷೆಯಿದೆ. ಒತ್ತಡ ಮತ್ತು ಆಯೋಗದಲ್ಲಿ ಹೆಚ್ಚಿನ ಕೆಲಸದ ಹೊರೆಯಿಂದಾಗಿ ಆತ್ಮಹತ್ಯೆಗಳು ಸಂಭವಿಸಿವೆ ಎಂದು ವಿರೋಧ ಪಕ್ಷಗಳು ಆರೋಪಿಸಿವೆ. ಇಂತಹ ಸೂಕ್ಷ್ಮ ವಿಷಯವನ್ನು ವಿರೋಧ ಪಕ್ಷವು ರಾಜಕೀಯಕ್ಕಾಗಿ ಬಳಸಿಕೊಳ್ಳುತ್ತಿದೆ ಎಂದು ಬಿಜೆಪಿ ಈ ಆರೋಪವನ್ನು ತಳ್ಳಿ ಹಾಕಿದೆ.

ಭಾರತೀಯ ಚುನಾವಣಾ ಆಯೋಗ ಎಸ್‌ಐಆರ್ ಅನ್ನು ಮತದಾರರ ಪಟ್ಟಿಯಲ್ಲಿರುವ ದತ್ತಾಂಶ ಸಮಸ್ಯೆಗಳನ್ನು ಬಗೆಹರಿಸಲು ಈ ಕ್ರಮ ಅನುಸರಿಸಲಾಗಿದೆ ಎಂದು ಹೇಳಿದೆ. ಆಯೋಗವು ಕೊನೆಯದಾಗಿ 2002–2004ರಲ್ಲಿ ದೇಶಾದ್ಯಾಂತ ಪ್ರತಿ ಮನೆಯ ಪರಿಷ್ಕರಣೆ ನಡೆಸಿತ್ತು. ಕಳೆದ ಎರಡು ದಶಕಗಳಲ್ಲಿ ಮತದಾರರ ಪಟ್ಟಿಯಲ್ಲಿ ನಕಲು ನೋಂದಣಿಗಳು, ಸ್ಥಳಾಂತರಗೊಂಡ ಮತದಾರರು ಹಾಗೂ ಮೃತಪಟ್ಟವರ ಪರಿಷ್ಕರಣೆ ಮಾಡಲು ನಡೆಸಲಾಗಿತ್ತು. ಸಂವಿಧಾನದ 324 ನೇ ವಿಧಿ ಮತ್ತು 1950 ರ ಜನತಾ ಪ್ರಾತಿನಿಧ್ಯ ಕಾಯ್ದೆಯ ಸೆಕ್ಷನ್ 21 ರ ಅಡಿಯಲ್ಲಿ ಮತದಾರರ ಪಟ್ಟಿಯಲ್ಲಿ ಲೋಪಗಳಿದ್ದಾಗ ಚುನಾವಣಾ ಆಯೋಗ ಪರಿಷ್ಕರಣೆ ಮಾಡುವ ಅಧಿಕಾರ ಹೊಂದಿದೆ. ಎಸ್‌ಐಆರ್ ಮನೆ–ಮನೆ ಎಣಿಕೆ, ಮೊದಲೇ ಭರ್ತಿ ಮಾಡಿದ ನಮೂನೆಗಳು, ಆನ್‌ಲೈನ್ ಸಲ್ಲಿಕೆ ಆಯ್ಕೆಗಳು ಮತ್ತು ಹಳೆಯ ಮತದಾರರ ದತ್ತಾಂಶದ ಪರಿಶೀಲನೆಯನ್ನು ಒಳಗೊಂಡಿರುತ್ತದೆ.ಈ ಬಾರಿ ನಡೆದ ಎಸ್‌ಐಆರ್ ಡಿಸೆಂಬರ್ 4 ರಂದು ಕೊನೆಗೊಳ್ಳುತ್ತಿದ್ದ ಎಣಿಕೆ ಅವಧಿಯನ್ನು ಡಿಸೆಂಬರ್ 11 ರವರೆಗೆ ವಿಸ್ತರಿಸಲಾಯಿತು. ಭಾನುವಾರದ ಚುನಾವಣಾ ಆಯೋಗದ ಬುಲೆಟಿನ್ ಪ್ರಕಾರ, 12 ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ಶೇ. 99.94 ರಷ್ಟು ಮತದಾರರು ತಮ್ಮ ಎಣಿಕೆ ನಮೂನೆಗಳನ್ನು ಸ್ವೀಕರಿಸಿದ್ದಾರೆ, 50.94 ಕೋಟಿ ನಮೂನೆಗಳನ್ನು ಮನೆಗಳಿಗೆ ತಲುಪಿಸಲಾಗಿದೆ. ಇದರಿಂದಾಗಿ ಕೇರಳವು ಡಿಸೆಂಬರ್ 18 ರವರೆಗೆ ನಮೂನೆಗಳನ್ನು ಸ್ವೀಕರಿಸುತ್ತದೆ. 50 ಕೋಟಿಗೂ ಹೆಚ್ಚು ನಮೂನೆಗಳು ಅಥವಾ ಒಟ್ಟು ನಮೂನೆಗಳಲ್ಲಿ ಶೇ. 98.22 ರಷ್ಟು ಈಗಾಗಲೇ ಡಿಜಿಟಲೀಕರಣಗೊಂಡಿವೆ ಎಂದು ಆಯೋಗವು ತಿಳಿಸಿದೆ.

ಬಿಹಾರ ವಿಧಾನಸಭೆ ಚುನಾವಣೆಯಲ್ಲಿ ಬಿಜೆಪಿ ಮತ್ತು ಜೆಡಿಯು ನೇತೃತ್ವದ ಎನ್‌ಡಿಎ ಮೈತ್ರಿಕೂಟ ಭರ್ಜರಿ ಜಯ ದಾಖಲಿಸಿದೆ. ಎಸ್‌ಐಆರ್ ಎನ್ನುವುದು ಚುನಾವಣ ಆಯೋಗದ ಸ್ವಾಯತ್ತ ಪ್ರಕ್ರಿಯೆ ಅದರಲ್ಲಿ ಕೇಂದ್ರ ಸರ್ಕಾರದ ಯಾವುದೇ ಪಾತ್ರವಿಲ್ಲ. ವಿಪಕ್ಷ ಬಿಹಾರದಲ್ಲಿ ಹೀನಾಯ ಸೋಲು ಕಂಡ ಕಾರಣ ಹತಾಶರಾಗಿ ಈ ರೀತಿಯ ಆರೋಪಗಳನ್ನು ಮಾಡುತ್ತಿದೆ ಎಂದು ಬಿಂಬಿಸಲು ಕೇಂದ್ರ ಸರ್ಕಾರ ತಯಾರಾಗಿದೆ.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**